ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 102 ಸಂಚಿಕೆ- 102 | PAGE-8 ಪುಟ-8 | ಗುರುವಾರ 29.05.2025 | RS.2/- ಬೆಲೆ 2/-

# ಪ್ರವಾಹ ಪೀಡಿತ ಪ್ರದೇಶಗಳಿಗೆ ತಕ್ಷಣ ಭೇಟಿ ನೀಡಲು ಉಸ್ತುವಾರಿ ಸಚಿವರಿಗೆ ಸಿಎಂ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.28:ರಾಜ್ಯದಾದ್ಯಂತ ಭಾರಿ ಮಳೆ ಆಗುತ್ತಿರುವ ಕಾರಣ ಪ್ರವಾಹ ಪೀಡಿತ ಪ್ರದೇಶಗಳಿಗೆ ತಕ್ಷಣ ತೆರಳಿ ಪರಿಹಾರ ಕಾರ್ಯದ ಉಸ್ತುವಾರಿ ನೋಡಿಕೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ಮಳೆಯಿಂದ ಆಗಿರುವ ಅನಾಹುತಗಳ ಬಗ್ಗೆ ಬುಧವಾರ ಬೆಳಿಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ಮುಖ್ಯಮಂತ್ರಿ, ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಅಧಿಕಾರಿಗಳ ಪ್ರಕಾರ, ಮೇ 26 ರವರೆಗೆ ರಾಜ್ಯದಲ್ಲಿ ಮಳೆಯಿಂದಾಗಿ ಒಟ್ಟು 45 ಮನೆಗಳು ಸಂಪೂರ್ಣವಾಗಿ ಹಾನಿಗೊಳಗಾಗಿವೆ ಮತ್ತು 1,385 ಮನೆಗಳು ಭಾಗಶಃ ಹಾನಿಗೊಳಗಾಗಿವೆ ಎಂದು ಮಾಹಿತಿ ನೀಡಿದ್ದಾರೆ.

ಭಾರಿ ಮಳೆಯಿಂದ ಹಾನಿಗೆ ಒಳಗಾಗಿರುವ ಮತ್ತು ಪ್ರವಾಹ ಪೀಡಿತ ಪ್ರದೇಶಗಳಿಗೆ ತಕ್ಷಣ ಭೇಟಿ ನೀಡಿ ಪರಿಸ್ಥಿತಿಯನ್ನು ಸಮಗ್ರವಾಗಿ ಅವಲೋಕಿಸುವಂತೆ ಜಿಲ್ಲಾ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಕೂಡಾ ತೀವ್ರ ನಿಗಾ ವಹಿಸಿ ತಕ್ಷಣ ತಕ್ಷಣ ಪರಿಹಾರ ಕಾರ್ಯಗಳನ್ನು ಸಮರೋಪಾದಿಯಲ್ಲಿ ನಿರ್ವಹಿಸಲು ಸೂಚನೆ ನೀಡಿದ್ದಾರೆ.

ಈ ಬಗ್ಗೆ ಸಮಗ್ರ ಅವಲೋಕನ ನಡೆಸಲು ಇದೇ 30 ಮತ್ತು 31ರಂದು ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯನ್ನು ಕರೆಯುವಂತೆ ಮುಖ್ಯ ಕಾರ್ಯದರ್ಶಿಗೆ ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ.

ರಾಜ್ಯದಲ್ಲಿ 170 ತಾಲ್ಲೂಕುಗಳನ್ನು ಪ್ರವಾಹ/ಭೂಕುಸಿತಕ್ಕೆ ಗುರಿಯಾಗುವ ತಾಲ್ಲೂಕುಗಳೆಂದು ಗುರುತಿಸಲಾಗಿದ್ದು, ಮುಂಜಾಗ್ರತೆಯಾಗಿ 2,296 ಕಾಳಜಿ/ಆಶ್ರಯ ತಾಣಗಳನ್ನು ಗುರುತಿಸಲಾಗಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ 201 ಸ್ಥಳಗಳನ್ನು ಪ್ರವಾಹ ಪೀಡಿತ ಸ್ಥಳಗನ್ನು ಗುರುತಿಸಲಾಗಿದೆ. ಇದೇ 26 ರವರೆಗೆ ರಾಜ್ಯದಲ್ಲಿ 45 ಮನೆಗಳು ಸಂಪೂರ್ಣವಾಗಿ ಹಾನಿಗೊಂಡಿದ್ದು, 1,385 ಮನೆಗಳು ಭಾಗಶಃ ಹಾನಿಯಾಗಿದ್ದು, ಅದರಲ್ಲಿ ಶೇ 99 ರಷ್ಟು ಆರ್ಥಿಕ ಸಹಾಯ ಧನವನ್ನು ಪಾವತಿ ಮಾಡಲಾಗಿದೆ.

ವಿಪತ್ತು ನಿರ್ವಹಣೆಗಾಗಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪಿ.ಡಿ ಖಾತೆಯಲ್ಲಿ ರೂ 97,351.95 ಲಕ್ಷ ಅನುದಾನವಿದೆ ಎಂದು ತಿಳಿಸಿದ್ದಾರೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ(ಬಿಬಿಎಂಪಿ) ಮಿತಿಯಡಿಯಲ್ಲಿ 201 ಸ್ಥಳಗಳನ್ನು

ಪ್ರವಾಹ ಪೀಡಿತ ಪ್ರದೇಶಗಳೆಂದು ಗುರುತಿಸಲಾಗಿದೆ ಎಂದು ಅವರು ಹೇಳಿದರು.

## ಪೌರ ಕಾರ್ಮಿಕರ ಖಾಯಂಗೆ ಶೀಘ್ರವೇ ಸಿ.ಎಂ. ನೇತೃತ್ವದಲ್ಲಿ ಸಭೆ:ರಹೀಂ ಖಾನ್



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಮೇ.28: ನೇಮಕಾತಿ ಖಾಯಂಗೆ ಪೌರ ಕಾರ್ಮಿಕರು ರಾಜ್ಯದೆಲ್ಲೆಡೆ ಪ್ರತಿಭಟನೆ ನಡೆಸುತ್ತಿದ್ದು, ಅವರ ಸಮಸ್ಯೆ ಬಗೆಹರಿಸಲು ಶೀಘ್ರವೇ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸಭೆ ಸೇರಿ ಪ್ರಾಮಾಣಿಕ ಪರಿಹಾರಕ್ಕೆ ಪ್ರಯತ್ನಿಸಲಾಗುವುದು ಎಂದು ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಂ ಖಾನ್ ಹೇಳಿದರು.

ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ ನಡೆಸಿದ ನಂತರ ಪತ್ರಿಕಾಗೋಷ್ಠಿ ಉದ್ದೇಶಿಸಿ

(2ನೇ ಪುಟ ನೋಡಿ)

## ಎಷ್ಟೇ ಪ್ರಭಾವಿಯಾಗಿದ್ದರೂ ಪಕ್ಷ ಅಶಿಸ್ತು ಸಹಿಸಲ್ಲ: ರಾಜ್ಯ ಉಸ್ತುವಾರಿ ರಾಧಾ ಮೋಹನ್ ದಾಸ್



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.28: ಪಕ್ಷ ವಿರೋಧಿ ಚಟುವಟಿಕೆಗಳ ಆರೋಪದ ಮೇಲೆ ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆ ನಂತರ ಇದೀಗ ಶಾಸಕರಾದ ಎಸ್ ಟಿ ಸೋಮಶೇಖರ್ ಮತ್ತು ಎ ಶಿವರಾಮ್ ಹೆಬ್ಬಾರ್ ಅವರನ್ನು ಬಿಜೆಪಿ ಪಕ್ಷದಿಂದ ಉಚ್ಚಾಟಿಸಿದೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾ ಮೋಹನ್ ದಾಸ್ ಅಗರ್ವಾಲ್ ಅವರು, ಬಿಜೆಪಿ ತನ್ನ ಯಾವುದೇ ಸದಸ್ಯರನ್ನು ಕಳೆದುಕೊಳ್ಳಲು ಎಂದಿಗೂ ಬಯಸುವುದಿಲ್ಲ, ಆದರೆ ಪಕ್ಷಕ್ಕೆ ಶಿಸ್ತು ಅತ್ಯುನ್ನತ ಎಂದು ಹೇಳಿದ್ದಾರೆ.

ಕರ್ನಾಟಕ ರಾಜ್ಯ ಉಸ್ತುವಾರಿ ಅಗರ್ವಾಲ್ ಅವರು, ಸೋಮಶೇಖರ್, ಹೆಬ್ಬಾರ್ ಮತ್ತು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ತಮ್ಮ ನಡೆಗಳನ್ನು ಸರಿಪಡಿಸಿಕೊಳ್ಳಲು ಬಿಜೆಪಿ ಸಾಕಷ್ಟು ಅವಕಾಶಗಳನ್ನು ನೀಡಿತ್ತು. ಆದರೆ ಅವರು ಬದಲಾಗಲಿಲ್ಲ ಎಂದು ಹೇಳಿದರು. ಪಕ್ಷಕ್ಕೆ ಶಿಸ್ತಿನ ಸಿಪಾಯಿಗಳು ಬೇಕಿರೋದು, ಒಬ್ಬ ವ್ಯಕ್ತಿ ಎಷ್ಟೇ ಪ್ರಭಾವಿಯಾಗಿದ್ದರೂ ಅಶಿಸ್ತನ್ನು ಸಹಿಸಲಾಗುವುದಿಲ್ಲ ಎಂದು ಅಗರ್ವಾಲ್ ಒತ್ತಿ ಹೇಳಿದರು.

ಕಾಂಗ್ರೆಸ್ ಸರ್ಕಾರವು ಅಕ್ರಮಗಳನ್ನು ಎತ್ತಿತೋರಿಸುವ ಜಾಹೀರಾತುಗಳನ್ನು ಪತ್ರಿಕೆಗಳಿಗೆ ನೀಡಿದ್ದಕ್ಕೆ ರಾಜ್ಯ ಸರ್ಕಾರ ತಮ್ಮ ಪಕ್ಷದ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದೆ ಎಂದು ಹಿರಿಯ ಬಿಜೆಪಿ ನಾಯಕರು ಆರೋಪಿಸಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಅವರೊಂದಿಗೆ ಬಹಿರಂಗ ಚರ್ಚೆಗೆ ಬರುವಂತೆ ಸವಾಲು ಹಾಕಿದರು. ಸಿದ್ದರಾಮಯ್ಯಗೆ ತಮ್ಮ ವಿರುದ್ಧದ ಆರೋಪಗಳು ಸುಳ್ಳು ಎಂಬ ಧೈರ್ಯ ಮತ್ತು ವಿಶ್ವಾಸವಿದ್ದರೆ, ಅವರು ನಮ್ಮ ಸವಾಲನ್ನು ಸ್ವೀಕರಿಸಬೇಕು. ಅದನ್ನು ಅವರು ನಿರಾಕರಿಸಿದರೆ, ಆ ಎಲ್ಲಾ ಆರೋಪಗಳು ನಿಜ ಎಂದು ಒಪ್ಪಿಕೊಳ್ಳಲಿ ಎಂದು ರಾಜ್ಯಸಭಾ ಸದಸ್ಯರು ಹೇಳಿದರು.

ಕೆಲವು ಸಮೀಕ್ಷಾ ವರದಿಗಳನ್ನು ಉಲ್ಲೇಖಿಸಿದ ಅಗರ್ವಾಲ್, ಇಂದು ರಾಜ್ಯ ವಿಧಾನಸಭಾ ಚುನಾವಣೆ ನಡೆದರೆ, ಬಿಜೆಪಿ 150 ರಿಂದ 155 ಸ್ಥಾನಗಳನ್ನು ಪಡೆದು ಸರ್ಕಾರ ರಚಿಸುತ್ತದೆ ಎಂದು ಹೇಳಿಕೊಂಡಿದ್ದಾರೆ. ಕಾಂಗ್ರೆಸ್‌ನ ಜನಪ್ರಿಯತೆ ಕಡಿಮೆಯಾಗುತ್ತಿರುವುದು ಮುಂದುವರಿದರೆ, ಕರ್ನಾಟಕದಲ್ಲಿ ಆಡಳಿತ ಪಕ್ಷವು ಎರಡಂಕಿ ಸ್ಥಾನಗಳನ್ನು ಪಡೆಯಲು ಸಾಧ್ಯವಾಗುವುದಿಲ್ಲ ಎಂದು ಅವರು ಹೇಳಿದರು.

## ಕಾಂಗ್ರೆಸ್‌ಗೆ ಮುಸ್ಲಿಂ ಮುಖಂಡರಿಂದ ಸಾಮೂಹಿಕ ರಾಜೀನಾಮೆ



ಮಲ್ಲಮ್ಮನುಡಿವಾರ್ತೆ ಮಂಗಳೂರು:ಮೇ.28: ಮಂಗಳೂರಿನಲ್ಲಿ ಮತ್ತೊಮ್ಮೆ ನೆತ್ತರು ಹರಿದಿದೆ. ಹಿಂದೂ ಸಂಘಟನೆ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆ ಬೆನ್ನಲ್ಲೇ ಇದೀಗ ಪಿಕಪ್ ವಾಹನ ಚಾಲಕನಾಗಿದ್ದ ಅಬ್ದುಲ್ ರಹೀಮ್ ಎಂಬಾತನನ್ನು ಹಾಡಹಗಲೇ ಬೈಕಿನಲ್ಲಿ ಬಂದಿದ್ದ ದುಷ್ಕರ್ಮಿಗಳು ಮಾರಕಾಸ್ತ್ರಗಳಿದ ಕೊಚ್ಚಿ ಬರ್ಬರವಾಗಿ ಹತ್ಯೆಮಾಡಿದ್ದರು. ಈ ಘಟನೆ ಇದೀಗ ಮಂಗಳೂರಿನಲ್ಲಿ ಉದ್ವಿಗ್ನ ಪರಿಸ್ಥಿತಿಗೆ ಕಾರಣವಾಗಿದೆ. ಬಂಟ್ವಾಳದಲ್ಲಿ ಅಬ್ದುಲ್‌ರಹೀಂ ಬರ್ಬರ ಹತ್ಯೆ ಹಿನ್ನೆಲೆ ಕಾಂಗ್ರೆಸ್ ಸರ್ಕಾರದ ವಿರುದ್ಧ ಮುಸ್ಲಿಂ ಮುಖಂಡರು ಬೇಸರ ವ್ಯಕ್ತಪಡಿಸಿದ್ದು, ಸಾಮೂಹಿಕ ರಾಜೀನಾಮೆ ನೀಡಲು ನಿರ್ಧರಿಸಿದ್ದಾರೆ ಎಂದು ತಿಳಿದುಬಂದಿದೆ. ನಾಳೆ ಕಾಂಗ್ರೆಸ್‌ನ ಮುಸ್ಲಿಂ ಮುಖಂಡರು ಸಾಮೂಹಿಕ ರಾಜೀನಾಮೆ ನೀಡಲು ನಿರ್ಧರಿಸಿದ್ದಾರೆ ಎಂದು ಹೇಳಲಾಗುತ್ತಿದೆ. ಕಾಂಗ್ರೆಸ್ ಜಿಲ್ಲಾ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷರ ನೇತೃತ್ವದಲ್ಲಿ ರಾಜೀನಾಮೆ ನೀಡಲಿದ್ದಾರೆ ಎಂದು ತಿಳಿದು ಬಂದಿದೆ. ಮಂಗಳೂರಿನ ಶಾದಿ ಮಹಲ್ ಹಾಲ್‌ನಲ್ಲಿ ನಾಳೆ ಸಂಜೆ ಸಭೆ ನಡೆಯಲಿದ್ದು ನಂತರ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಗುರುತಿಸಿಕೊಂಡಿರುವ ಮುಸ್ಲಿಂ ಮುಖಂಡರು ಸಾಮೂಹಿಕ ರಾಜೀನಾಮೆ ನೀಡಲಿದ್ದಾರೆ ಎನ್ನುವ ಆಡಿಯೋ ಒಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

## 'ಮಿಲಿಟರಿ ಕ್ಯಾಂಟೀನ್' ಗಳು ಅಬಕಾರಿ ಸುಂಕದಿಂದ ಮುಕ್ತ; ಮಾಜಿ ಯೋಧರ ಕಲ್ಯಾಣಕ್ಕೆ ನಿಗಮ ಸ್ಥಾಪನೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.28:ಭಾರತೀಯ ಸಶಸ್ತ್ರ ಪಡೆಗಳ ಗೌರವಾರ್ಥ 'ಜೈ ಹಿಂದ್ ಸಭಾ' ಎಂಬ ವಿಶೇಷ ಕಾರ್ಯಕ್ರಮವನ್ನು ನಗರದ ಟೌನ್ ಹಾಲ್ ನಲ್ಲಿಂದು ರಾಜ್ಯ ಸರ್ಕಾರದಿಂದ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿದ ಹಿರಿಯ ಸೇನಾ ಅಧಿಕಾರಿಗಳು ಹಾಗೂ ಮಾಜಿ ಸೈನಿಕರನ್ನು ಸನ್ಮಾನಿಸಲಾಯಿತು. ದೇಶಸೇವೆಗಾಗಿ ಪ್ರಾಣ ತ್ಯಾಗ ಮಾಡಿದ ಹುತಾತ್ಮ ಯೋಧರ ಕುಟುಂಬಗಳನ್ನು ಗೌರವಿಸಲಾಯಿತು.

ದಿವಂಗತ ಮೇಜರ್ ಸಂದೀಪ್ ಉನ್ನಿಕೃಷ್ಣನ್(ಅಶೋಕ ಚಕ್ರ ಪುರಸ್ಕೃತ), ಕರ್ನಲ್ ಜೋಜನ್ ಥಾಮಸ್ (ಅಶೋಕ ಚಕ್ರ ಪ್ರಶಸ್ತಿ ಪುರಸ್ಕೃತ), ಮೇಜರ್ ಎಂ.ಸಿ. ಮುತ್ತಣ್ಣ(ಶೌರ್ಯ ಚಕ್ರ ಪುರಸ್ಕೃತ), ಮೇಜರ್ ಗಣೇಶ್ ಮದ್ದಪ್ಪ(ಶೌರ್ಯ ಚಕ್ರ ಪುರಸ್ಕೃತ), ಕ್ಯಾಪ್ಟನ್ ಎಂ.ವಿ. ಪಂಜಾಲ್ (ಶೌರ್ಯ ಚಕ್ರ ಪ್ರಶಸ್ತಿ ಪುರಸ್ಕೃತ), ಮೇಜರ್ ಮೋಹನ್ ಗಂಗಾಧರನ್ (ಶೌರ್ಯ ಚಕ್ರ ಪ್ರಶಸ್ತಿ ಪುರಸ್ಕೃತ), ಮೇಜರ್ ಶಫೀಕ್ ಮೊಹಮ್ಮದ್ ಖಾನ್, ಮತ್ತು ಕರ್ನಲ್ ರಾಮಮೂರ್ತಿ (ಸೇನಾ ಪದಕ ಪುರಸ್ಕೃತ) ಅವರ ಕುಟುಂಬ ಸದಸ್ಯರನ್ನು ಸನ್ಮಾನಿಸಲಾಯಿತು.


ಕಾಂಗ್ರೆಸ್ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್, ರಾಜ್ಯ ಉಸ್ತುವಾರಿ ರಣದೀಪ್ ಸುರ್ಜೇವಾಲಾ ಸೇರಿದಂತೆ ಸಾವಿರಕ್ಕೂ ಹೆಚ್ಚು ಹಿರಿಯ ಸೇನಾ ಅಧಿಕಾರಿಗಳು ಹಾಗೂ ಮಾಜಿ ಸೈನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮಿಲಿಟರಿ ಕ್ಯಾಂಟೀನ್ ಗಳಿಗೆ ಅಬಕಾರಿ ಸುಂಕ ಮುಕ್ತ: 'ಜೈ ಹಿಂದ್ ಸಭಾ' ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಭಾರತದ ಅಖಂಡತೆ ಮತ್ತು ಸಾರ್ವಭೌಮತೆಯನ್ನು ಎತ್ತಿಹಿಡಿಯುತ್ತಾ, ದೇಶವಾಸಿಗಳ ಪ್ರಾಣ, ಆಸ್ತಿಪಾಸ್ತಿಗಳ ರಕ್ಷಣೆಯ ಮಹತ್ತರ ಕರ್ತವ್ಯವನ್ನು ಮಾಡುತ್ತಿರುವುದು ನಮ್ಮ ಹೆಮ್ಮೆಯ ಸೈನಿಕರು. ಇದೇ ಕಾರಣಕ್ಕೆ ತಂದೆ-ತಾಯಿ, ಶಿಕ್ಷಕರು, ವೈದ್ಯರು, ಅನ್ನದಾತರಂತೆ ಸೈನಿಕರನ್ನು ಸ್ಮರಿಸಲಾಗುತ್ತದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ದೇಶ ಕಾಯುತ್ತಿರುವ ಸೈನಿಕರನ್ನು ಅತ್ಯಂತ ಗೌರವ ಮತ್ತು ಪ್ರೀತಿಯಿಂದ ಕಾಣುತ್ತಿದೆ. ಸೈನಿಕರ ಕಲ್ಯಾಣ ಕಾರ್ಯಗಳಿಗೆ ಸದಾ ಬದ್ಧರಿದ್ದೇವೆ, ಈ ಉದ್ದೇಶದಿಂದ ಮಿಲಿಟರಿ ಕ್ಯಾಂಟೀನ್ ಗಳಿಗೆ ಇನ್ನುಮುಂದೆ ಅಬಕಾರಿ ಸುಂಕ ವಿಧಿಸಲಾಗುವುದಿಲ್ಲ ಎಂದು ಘೋಷಣೆ ಮಾಡಿದರು.

ಇದೇ ಶಿಷ್ಟರ ರಕ್ಷಣೆ – ದುಷ್ಟರ ಸಂಹಾರದ ನಿಜ ಅರ್ಥ; ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೈನಿಕರು ಉಗ್ರರ ಅಡಗುದಾಣಗಳು ಮತ್ತು ತರಬೇತಿ ಕೇಂದ್ರಗಳನ್ನೇ ಗುರಿಯಾಗಿಸಿ ದಾಳಿ ಮಾಡಿದರು. ಸಾರ್ವಜನಿಕರಿಗೆ ಯಾವುದೇ ತೆ-ೂಂದರೆ ಉಂಟಾಗದಂತೆ ಇಡೀ ಆಪರೇಷನ್ ಅನ್ನು ಯಶಸ್ವಿಗೊಳಿಸಿದರು. ಇದೇ ಶಿಷ್ಟರ ರಕ್ಷಣೆ – ದುಷ್ಟರ ಸಂಹಾರದ ನಿಜ ಅರ್ಥವಾಗಿದೆ. ಭಯೋತ್ಪಾದಕರನ್ನು ಸಲಹುತ್ತಾ, ಅಮಾಯಕ ಜನರ ಮಾರಣಹೋಮಕ್ಕೆ ಕಾರಣರಾಗುವ ಪಾಕಿಸ್ತಾನಕ್ಕೆ ನಮ್ಮ ಹೆಮ್ಮೆಯ ಸೈನಿಕರು ನೀಡಿರುವ ಉತ್ತರ 145 ಕೋಟಿ ಭಾರತೀಯರಿಗೂ ಹೆಮ್ಮೆಯುಂಟು ಮಾಡಿದೆ ಎಂದು ಶ್ಲಾಘಿಸಿದರು.

## ಧಾರಾಕಾರ ಮಳೆಗೆ ಜಮೀನುಗಳು ಜಲಾವೃತ: ಲಕ್ಷಾಂತರ ಮೌಲ್ಯದ ಬೆಳೆ ನಾಶ, ರೈತರು ಕಂಗಾಲು



ಮಲ್ಲಮ್ಮ ನುಡಿ ವಾರ್ತೆ ಬೀದರ್:ಮೇ.28:ಜಿಲ್ಲೆಯಲ್ಲಿ ಸುರಿದ ಧಾರಾಕಾರ ಮಳೆಯಿಂದಾಗಿ ಜಮೀನುಗಳು ಜಲಾವೃತಗೊಂಡು ಲಕ್ಷಾಂತರ ಮೌಲ್ಯದ ಬೆಳೆ ನಾಶವಾಗಿರುವ ಘಟನೆ ಕಮಲನಗರ ತಾಲೂಕಿನ ಬಾಲೂರು ಗ್ರಾಮದಲ್ಲಿ ನಡೆದಿದೆ. ಬಾಲಾಜಿ ಪಾಟೀಲ್, ನೇತಾಜಿ ನಾಗೂರಾವ್ ಸೇರಿದಂತೆ ಹಲವು ರೈತರ ಲಕ್ಷಾಂತರ ರೂ. ಮೌಲ್ಯದ ವಿವಿಧ ಬೆಳೆಗಳು ನಾಶವಾಗಿವೆ. ಶೇಂಗಾ, ಬೆಂಡೆಕಾಯಿ, ಬದನೆಕಾಯ, ಕಬ್ಬು ಸೇರಿದಂತೆ ಹಲವು ಬೆಳೆಗಳು ನಾಶವಾಗಿದೆ. ಲಕ್ಷಾಂತರ ರೂ. ಖರ್ಚು ಮಾಡಿ ಬೆಳೆದ ಬೆಳೆಗಳಿಗೆ ಮಳೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದೆ. 2 ರಿಂದ 3 ಅಡಿ ನೀರು ನಿಂತಿದ್ದು, ಶೇಂಗಾ ಬಹುತೇಕ ಕೊಳೆತು ಹೋಗಿದೆ. ಇದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಸರ್ಕಾರ ಪರಿಹಾರವಾದರೂ ನೀಡಬೇಕು ಎಂದು ಅಳಲು ತೋಡಿಕೊಂಡಿದ್ದಾರೆ.

(2ನೇ ಪುಟ ನೋಡಿ)

## ಚಂದನಹಳ್ಳಿ ಗ್ರಾಪಂ.ನಲ್ಲಿ ಅನುದಾನ ದುರ್ಬಳಕೆ ಆರೋಪ ಗ್ರಾಪಂ. ಅಧ್ಯಕ್ಷ, ಪಿಡಿಒ ವಿರುದ್ಧ ಕ್ರಮಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ತಾಲೂಕಿನ ಚಂದನಹಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಸರಕಾರದ ಲಕ್ಷಾಂತರ ರೂಪಾಯಿ ಅನುದಾನ ದುರ್ಬಳಕೆಯಾಗಿದೆ ಎಂದು ಓತಗಿ ಗ್ರಾಮದ ನಿವಾಸಿ ರಾಹುಲ ದೋಣಿ ಆರೋಪಿಸಿದರು.

ಪಟ್ಟಣದ ಪ್ರವಾಸಿ ಮಂದಿರದ ಸಭಾಂಗಣದಲ್ಲಿ ಬುಧವಾರ ಕ-ರೆದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದರು.

ಗ್ರಾಪಂ. ಅಧ್ಯಕ್ಷರು ಹಾಗೂ ಪಿಡಿಒ ಇಬ್ಬರು ಜತೆಗೂಡಿ ಸರ್ವಾಧಿಕಾರಿಯಂತೆ ಯಾರಿಗೂ ಲೆಕ್ಕಕ್ಕೆ ತೆಗೆದುಕೊಳ್ಳದೆ, ಕಾನೂನು ನಿಯಮಗಳನ್ನು ಗಾಳಿಗೆ ತೂರುವ ಮೂಲಕ 19 ಲಕ್ಷಕ್ಕೂ ಅಧಿಕ ಅನುದಾನ ದುರ್ಬಳಕೆ ಮಾಡಿಕೊಂಡಿದ್ದಾರೆ. ಈ ಹಿಂದೆ-ಯೂ ನಡೆದ ಅವ್ಯವಹಾರಗಳ ಕುರಿತು ಜಿಲ್ಲಾ ಪಂಚಾಯತ್ ಅಧಿಕಾರಿಗಳಿಗೆ ದೂರು ನೀಡಿದ್ದರು ಕೂಡಾ ಯಾವುದೇ ಪ್ರಯೋಜನೆ ಆಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮೀಣ ಭಾಗದ ಹಳ್ಳಿಗಳ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ಸರಕಾರ ಕೋಟ್ಯಾಂತರ ರೂಪಾಯಿ

(2ನೇ ಪುಟ ನೋಡಿ)

## ಯುವತಿಗೆ ಕಮಿಷನ್ ಆಸೆ ತೋರಿಸಿ 13 ಲಕ್ಷ ಪಂಗನಾಮ

ಮಲ್ಲಮ್ಮ ನುಡಿ ವಾರ್ತೆ ದಾವಣಗೆರೆ:ಮೇ.28:

ಯುವತಿಯೊಬ್ಬಳಿಗೆ ಸೈಬರ್ ವಂಚಕರು ಕಮಿಷನ್ ಆಸೆ ತೆ-ೂೕರಿಸಿ 13 ಲಕ್ಷ ರೂ. ವಂಚಿಸಿದ ಘಟನೆ ನಡೆದಿದೆ.

ದಾವಣಗೆರೆಯ ಎಂಸಿಸಿ ಬ್ಲಾಕ್‌ನಲ್ಲಿ ವಾಸವಾಗಿದ್ದ 26 ವರ್ಷದ ಹರಿಯಾಣ ಮೂಲದ ಯುವತಿ ವಂಚನೆಗೊಳಗಾಗಿದ್ದಾಳೆ. ಟೆಲಿಗ್ರಾಮ್ ಮೂಲಕ ಪರಿಚಯವಾಗಿದ್ದ ಮಹಿಳೆಯೊಬ್ಬಳು, ಕಮಿಷನ್ ಆಸೆ ತೋರಿಸಿ ಯುವತಿಗೆ ಹಣ ಹೂಡಿಕೆ ಮಾಡುವಂತೆ ಹೇಳಿದ್ದಳು. ಅಲ್ಲದೇ ಯುವತಿಗೆ ಉದ್ಯೋಗ ಕೊಡಿಸುವುದಾಗಿಯೂ ಭರವಸೆ ನೀಡಿದ್ದಳು. ಮಹಿಳೆಯ ಮಾತನ್ನು ನಂಬಿದ ಯುವತಿ ಹಂತಹಂತವಾಗಿ 13 ಲಕ್ಷ ರೂ. ಹಣ ವರ್ಗಾಯಿಸಿದ್ದಳು.

ಹಣ ಬಿಡಿಸಿಕೊಳ್ಳಲು ಹೋದ ವೇಳೆ, ಯುವತಿಗೆ ವಂಚನೆಯಾಗಿರುವುದು ಗೊತ್ತಾಗಿದೆ. ದಾವಣಗೆರೆ ಸಿಇಎನ್ ಅಪರಾಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗಾಣಗಾಪುರದಲ್ಲಿ ಎರಡು ಮನೆಗಳ ಬೀಗ ಮುರಿದು ಕಳ್ಳತನ

ಮಲ್ಲಮ್ಮ ನುಡಿ ವಾರ್ತೆ

, ಮೇ.28: ತಾಲ್ಲೂಕಿನ ಸು-ಕ್ಷೇತ್ರ ದೇವಲ್ ಗಾಣಗಾಪುರದಲ್ಲಿ ಎರಡು ಮನೆಗಳ ಬೀಗ ಮುರಿದು ಕಳ್ಳರು ನಗ, ನಾಣ್ಯ ದೋಚಿ ಪರಾರಿಯಾದ ಘಟನೆ ವರದಿಯಾಗಿದೆ. ಭೀಮರಾಯಗೌಡ ಹಾಗೂ ರಜಿಯಾಬೇಗಂ ದಸ್ತಗೀರ್ ಅವರ ಮನೆಗಳಲ್ಲಿಯೇ ಕಳ್ಳತನವಾಗಿದೆ.

ಗ್ರಾಮದ ಭೀಮರಾಯಗೌಡ ಅವರ ಮನೆಯಲ್ಲಿ 110 ಗ್ರಾಂ ತೂಕದ ಲಕ್ಷ್ಮೀ ದೇವಿಯ ಬೆಳ್ಳಿ ಮೂರ್ತಿ, ಚಿನ್ನ ಹಾಗೂ ನಗದು ಕಳ್ಳತನವಾಗಿದೆ. ರಜಿಯಾಬೇಗಂ ಅವರ ಮನೆಯಲ್ಲಿ 10 ಗ್ರಾಂ ಚಿನ್ನ, 30 ಗ್ರಾಂ ಬೆಳ್ಳಿ ಹಾಗೂ ನಗದು ಕಳ್ಳತನವಾಗಿದೆ. ಕಳ್ಳರ ಕೃತ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಈ ಕುರಿತು ದೇವಲಗಾಣಗಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕಳ್ಳರ ಬಂಧನಕ್ಕೆ ಕಾರ್ಯಾಚರಣೆ ಆರಂಭಿಸಿದ್ದಾರೆ.

ಒಂದನೇ ಪುಟದಿಂದ

# ಸಿ.ಎಂ. ನೇತೃತ್ವದಲ್ಲಿ ಸಭೆ:ರಹೀಂ ಖಾನ್

ಮಾತನಾಡಿದ ಅವರು, ರಾಜ್ಯದಲ್ಲಿ ಈಗಾಗಲೆ ಶೇ.70ರಷ್ಟು ಪೌರಕಾರ್ಮಿಕರನ್ನು ಖಾಯಂ ಮಾಡಲಾಗಿದೆ. ಲೋಡರ್, ಪೌರ ಕಾರ್ಮಿಕರು, ಡ್ರೈವರ್ ಹೀಗೆ ಬಾಕಿ ಉಳಿದ ಶೇ.30ರಷ್ಟು ನೌಕರರ ಖಾಯಂ ಬೇಡಿಕೆ ನಮ್ಮ ಮುಂದಿದೆ ಎಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದರು.

ತಾವು ಸಚಿವರಾದ ನಂತರ ಪೌರಕಾರ್ಮಿಕರ ಖಾಯಂ ಕುರಿತು ಎರಡು ಬಾರಿ ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಉಮಾದೇವಿ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಖಾಯಂ ಮಾಡಬಾರದು ಎಂದು ಹೇಳಿದೆ ಎಂದು ತಿಳಿಸಿ ಕಡತ ವಾಪಸ್ ಬಂದಿದೆ. ಹೀಗಾಗಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆದು ಇದಕ್ಕೊಂದು ಪರಿಹಾರ ಹುಡುಕಲಾಗುವುದು ಎಂದು ಸಚಿವ ರಹೀಂ ಖಾನ್ ತಿಳಿಸಿದರು.

ಡ್ರೋನ್ ಮೂಲಕ ಸರ್ವೇ: ರಾಜ್ಯದಾದ್ಯಂತ ಹಿಂದೆ 10 ವರ್ಷದ ಹಿಂದೆ ನೆಲ ಮಹಡಿಗೆ ಅನುಮತಿ ಪಡೆದು ತದನಂತರ ಮೊದಲನೇ, ಎರಡನೇ ಮಹಡಿ ನಿರ್ಮಾಣ ಮಾಡಿದ್ದರು ಸಹ ಕಡಿಮೆ ಅಳತೆಗೆ ಮಾತ್ರ ಆಸ್ತಿ ಮಾಲೀಕರು ತೆರಿಗೆ ಪಾವತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಇದರಿಂದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿದೆ. ಇದನ್ನು ತಡೆಯುವ ನಿಟ್ಟಿನಲ್ಲಿ ರಾಜ್ಯದಾದ್ಯಂತ ಡ್ರೋನ್ ಮೂಲಕ ನಗರ-ಸ್ಥಳೀಯ ಸಂಸ್ಥೆಗಳ ಆಸ್ತಿಯನ್ನು ಸರ್ವೇ ಮಾಡಿ ಕರ ಪಾವತಿ ವಸೂಲು ಮಾಡುವಂತೆ ಯು.ಎಲ್.ಬಿ.ಗಳಿಗೆ ಸೂಚನೆ ನೀಡಲಾಗುವುದು ಎಂದು ಸಚಿವ ರಹೀಂ ಖಾನ್ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ವಿಧಾನ ಪರಿಷತ್ ಶಾಸಕ ತಿಪ್ಪಣ್ಣಪ್ಪ ಕಮಕನೂರ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಪೌರಾಡಳಿತ ನಿರ್ದೇಶನಾಲಯದ ಅಭಿಯಂತ ರಾಧಾಕೃಷ್ಣ, ಅಧೀಕ್ಷಕ ಅಭಿಯಂತ ಬಸವರಾಜ, ಸಚಿವರ ಆಪ್ತ ಕಾರ್ಯದರ್ಶಿ ಡಾ. ಕೆ.ಮುರಳಿಧರ ಇದ್ದರು.

# ಗ್ರಾಪಂ. ಅಧ್ಯಕ್ಷ, ಪಿಡಿಒ ವಿರುದ್ಧ ಕ್ರಮಕ್ಕೆ ಆಗ್ರಹ

ಅನುದಾನ ನೀಡುತ್ತಿದ್ದೆ. ಚಂದನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯಗಳು ಮಾತ್ರ ಶೂನ್ಯ ಪಥದಲ್ಲಿ ಸಾಗುತ್ತಿದ್ದೆ. ಗ್ರಾಪಂ. ಅಧ್ಯಕ್ಷರ ಹಾಗೂ ಪಿಡಿಒ ಅವರು ಸರಕಾರದ ಹಣ ಕೊಳ್ಳೆ ಹೊಡೆಯುತ್ತಿದ್ದಾರೆ ಎಂದು ಕೆಂಡಕಾರಿದರು.

ಗ್ರಾಮೀಣ ಭಾಗದ ಹಳ್ಳಿಗಳ ಬಡಜನರ ಹಿತದೃಷ್ಟಿಯಿಂದ ಜಿಪಂ. ಹಾಗೂ ತಾಪಂ. ಅಧಿಕಾರಿಗಳು ಚಂದನಹಳ್ಳಿ ಗ್ರಾಪಂ. ಕಚೇರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಕ್ರಮ ಕೈಗೊಳ್ಳುವಲ್ಲಿ ವಿಳಂಬ ಮಾಡಿದರೆ ಕಾನೂನು ಚೌಕಟ್ಟಿನಲ್ಲಿ ಹೋರಾಟ ಮಾಡುವುದು ಅನಿವಾರ್ಯ ಎಂದು ಎಚ್ಚರಿಕೆ ನೀಡಿದರು.

# ಲಕ್ಷಾಂತರ ಮೌಲ್ಯದ ಬೆಳೆ ನಾಶ, ರೈತರು ಕಂಗಾಲು

ಅದೇ ಪಟ್ಟಣದ ಇಂದ್ರಾನಗರ ಕಾಲೋನಿಯ ಹಲವು ಮನೆಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದೆ. ಪರಿಣಾಮ ಮನೆಯಲ್ಲಿದ್ದ ಅಕ್ಕಿ, ಈರುಳ್ಳಿ ಸೇರಿದಂತೆ ಧವಸ ದಾನ್ಯಗಳು ನೀರು ಪಾಲಾಗಿದ್ದು, ಜನರು ಪರದಾಡುತ್ತಿದ್ದಾರೆ. ಮನೆಯ ಮುಂದೆ ನೀರು ನಿಂತು ಕೆರೆ ಸೃಷ್ಟಿಯಾಗಿದ್ದು, ಜನ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಚರಂಡಿ ವ್ಯವಸ್ಥೆ ಸರಿಯಾಗಿಲ್ಲದ ಕಾರಣ ಒಂದೇ ಮಳೆಗೆ ಈ ಪರಿಸ್ಥಿತಿ ನಿರ್ಮಾಣವಾಗಿದೆ. ಗೃಹ ಬಳಕೆ ವಸ್ತುಗಳು ಕೂಡ ಹಾಳಾಗಿದ್ದು, ಜನರು ಅಧಿಕಾರಿಗಳ ವಿರುದ್ಧ ಕಿಡಿಕಾರುತ್ತಿದ್ದಾರೆ.

# ಬಿಜೆಪಿಗರಿಗೆ ಅಧಿಕಾರದ ಹುಚ್ಚು ಹಿಡಿದಿದೆ : ಜ್ಯೋತಿ ಗೊಂಡಬಾಳ ಬೇಸರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಮೇ.28: ಬಿಜೆಪಿ ನಾಯಕರಿಗೆ ಪಾಕಿಸ್ತಾನದ ಹೆಸರು ಹೇಳದಿದ್ದರೆ ಬದುಕೇ ನಡೆಯಲ್ಲ, ಕಲಬುರಗಿಯ ಜಿಲ್ಲಾಧಿಕಾರಿಗಳ ಬಗೆಗಿನ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಹೇಳಿಕೆ ಅತ್ಯಂತ ಖಂಡನೀಯ ಎಂದು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯೆ ಜ್ಯೋತಿ ಎಂ.ಗೊಂಡಬಾಳ ಹೇಳಿಕೆ ನೀಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಪಾಕಿಸ್ತಾನ ಪ್ರೇಮಿ ಬಿಜೆಪಿಗರು ಇಷ್ಟು ದಿನ ರಾಜಕೀಯ ನಾಯಕರ ವಿರುದ್ಧ ಪಾಕಿಸ್ತಾನದ ಹೆಸರು ಪ್ರಯೋಗಿಸುತ್ತಿದ್ದರು, ಈಗ ಅವರ ನಾಲಿಗೆ ಇನ್ನೂ ಉದ್ದವಾಗಿ ಅಧಿಕಾರಿಗಳನ್ನೂ ಪಾಕಿಸ್ತಾನದಿಂದ ಬಂದವರು ಎನ್ನುವ ಮಟ್ಟಿಗೆ ಬಂದಿದೆ, ಇದು ನಿಜಕ್ಕೂ ಕೆಟ್ಟ ಪರಿಣಾಮ ಬೀರುವ ಕ್ರಿಯೆ ಹಾಗೇ ಬಿಜೆಪಿಗರು ಸೇನಾಧಿಕಾರಿಗೆ ಭಯೋತ್ಪಾದಕರ ಸಹೋದರಿ ಎಂದರು, ಸೈನಿಕರು ಮೋದಿಯ ಕಾಲಿಗೆ ಬೀಳುತ್ತಾರೆ ಎಂದರು, ಸೈನಿಕರ ಪತ್ನಿಯರ ಶೀಲದ ಬಗ್ಗೆ ಸಂಶಯದಿಂದ ಮಾತನಾಡಿದರು ಈಗ ಇಲ್ಲಿ ಜಿಲ್ಲಾಧಿಕಾರಿ ಪಾಕಿಸ್ತಾನದಿಂದ ಬಂದವರು ಎಂದರು. ಬಿಜೆಪಿಗರ ಜ್ಞಾನವು ಪಾಕಿಸ್ತಾನ, ಮುಸ್ಲಿಂ ವಿಚಾರಗಳನ್ನು ದಾಟಿ ಮುಂದೆ ಹೋಗುವುದೇ ಇಲ್ಲ, ಅದಕ್ಕೆ ಕಾರಣ ಅಧಿಕಾರದ ದಾಹ, ಮೋಹ, ಹಣದ ವ್ಯಾಮೋಹ ಎಂಬುದು ಸ್ಪಷ್ಟವಾಗಿದ್ದು, ದೇಶದ ಜನರು ಈಗಲಾದರು ಬಿಜೆಪಿಯ ಮನುವ್ಯಾದಿತನಕ್ಕೆ ಉತ್ತರ ಕೊಡಬೇಕಿದೆ.

ಅಧಿಕಾರಿಗಳ ನೈತಿಕ ಸ್ಥೈರ್ಯ ಕಸಿಯುವ ಪ್ರಯತ್ನದಲ್ಲಿರುವ ರವಿಕುಮಾರ್ ಅವರಿಗೆ ಕಲಬುರಗಿಯ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಐಎಎಸ್ ಪಾಸ್ ಮಾಡಿ ದೇಶ ಸೇವೆಗೆ, ಜನಸೇವೆಗೆ ಬಂದವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅತ್ಯುತ್ತಮ ಚುನಾವಣಾ ಅಧಿಕಾರಿಯ ಪ್ರಶಸ್ತಿಯನ್ನು ಕೊಡಮಾಡಿದ್ದಾರೆ. ನಿಮ್ಮ ಹಾಗೆ ಯಾರಿಗೋ ಬಹುಪರಾಕ್ ಹೇಳಿಕೊಂಡು, ಬಿಜೆಪಿಗರ ಗುಲಾಮಗಿರಿ ಮಾಡಿಕೊಂಡು ಸ್ಥಾನ ಗಿಟ್ಟಿಸಿಕೊಂಡವರಲ್ಲ, ಅಧಿಕಾರಿಯ ಧರ್ಮ ಯಾವುದಾದರೂ ಅವರು ಸಂವಿಧಾನದ ಮೇಲೆ ಪ್ರಮಾಣ ಮಾಡಿ ಜನಸೇವೆಗೆ ಬಂದಿರುತ್ತಾರೆ, ಸಂವಿಧಾನದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಾರೆ. ಯಾರಿಗೆ ಹೇಗೆ ಮಾತಾಡಬೇಕು ಎಂಬ ಮಿನಿಮಮ್ ಕಾಮನ್ ಸೆನ್ಸ್ ಇಲ್ಲದ ಇಂತವರು ಕರ್ನಾಟಕದ ರಾಜಕಾರಣಕ್ಕೆ ಕಳಂಕ ಎಂದು ಜರಿದಿದ್ದಾರೆ.

ದೇಶಕ್ಕಾಗಿ ದುಡಿಯುವ ಸೇನಾಧಿಕಾರಿ, ಅಧಿಕಾರಿಗಳು, ಸೈನಿಕರನ್ನು ಅವಮಾನಿಸುವುದನ್ನು ವ್ಯಸನ ಮಾಡಿಕೊಂಡಿರುವ ಬಿಜೆಪಿಗರ ದುರಹಂಕಾರಕ್ಕೆ ಜನತೆ ಪಾಠ ಕಲಿಸಬೇಕಿದೆ, ಬಿಜೆಪಿ ರಾಜ್ಯದಲ್ಲಿ ಅಧಿಕಾರ ಕಳೆದುಕೊಂಡು ಸಮಸ್ಯೆಯಲ್ಲಿದ್ದಾರೆ, ಅದಕ್ಕೆ ಜನರಿಗೆ ತಪ್ಪು ಸಂದೇಶಗಳ ಮೂಲಕ ತೊಂದರೆ ಕೊಡುತ್ತಿದ್ದಾರೆ ಎಂದು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯೆ ಜ್ಯೋತಿ ಎಂ. ಗೊಂಡಬಾಳ ತಿಳಿಸಿದ್ದಾರೆ.

# ಬೆದವಟ್ಟಿಯ ಶ್ರೀ ಶಿವ ಸಂಗಮೇಶ್ವರ ಸ್ವಾಮೀಜಿ ಲಿಂಗೈಕ್ಯ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.28: ಜಿಲ್ಲೆ ಕುಕನೂರು ತಾಲೂಕಿನ ಬೆದವಟ್ಟಿ ಗ್ರಾಮದ ಶ್ರೀಮಠದ ಪೂಜ್ಯರಾದ ಶ್ರೀ ಶಿವಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಇಂದು ದಿನಾಂಕ 28ನೇ ಮೇ 2025 ರಂದು ಮಧ್ಯಾಹ್ನ 1:30ರ ವೇಳೆಗೆ ಲಿಂಗೈಕ್ಯರಾಗಿದ್ದು ಇವರ ಅಂತ್ಯಕ್ರಿಯೆ ಕಾರ್ಯವು 29 ಮೇ 2025 ರ ಮಧ್ಯಾಹ್ನ 1:00 ಗಂಟೆಯ ವೇಳೆಗೆ ಬೆದವಟ್ಟಿ ಗ್ರಾಮದ ಶ್ರೀಮಠದಲ್ಲಿ ಜರುಗುತ್ತದೆ ಎಂದು ಮಠದ ಮೂಲಗಳಿಂದ ತಿಳಿದು ಬಂದಿರುತ್ತದೆ.

ಕಳೆದ ಹಲವು ದಿನಗಳಿಂದ ಮಠದ ಶ್ರೀಗಳು ಅನಾರೋಗ್ಯದಿಂದ ಬಳಲುತ್ತಿದ್ದು ಇಂದು ಮಧ್ಯಾಹ್ನ ಚಿಕಿತ್ಸೆ ಫಲಕಾರಿಯಾಗದೆ ಲಿಂಗೈಕರೆ-ಯಾಗಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದ್ದು ಸಹಸ್ರಾರು ಭಕ್ತರು ಶೋಕದಲ್ಲಿ ಮುಳುಗಿದ್ದು ಶ್ರೀಮಠದಲ್ಲಿ ನೀರವ ಮೌನ ಆವರಿಸಿದೆ.

ಶ್ರೀಗಳು 4.7. 1945ರಲ್ಲಿ ಬೇಲೂರಿನಲ್ಲಿ ಜನಿಸಿದ್ದು ತಮ್ಮ ಪ್ರಾಥಮಿಕ ಹಂತದ ವಿದ್ಯಾಭ್ಯಾಸವನ್ನು ಕೊಪ್ಪಳ ತಾಲೂಕಿನ ಮುದ್ಲಾಪುರ ಮತ್ತು ಕಿನ್ನಾಳ ಗ್ರಾಮಗಳಲ್ಲಿ ಪೂರೈಸಿದ್ದರೆ, ಪ್ರೌಢಶಾಲಾ ಶಿಕ್ಷಣವನ್ನು ಕೊಪಣನಗರ(ಇಂದಿನ ಕೊಪ್ಪಳ) ಪಡೆದುಕೊಂಡಿ-ದ್ದು 1962ರಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷೆಯನ್ನು ಪ್ರಥಮ ದರ್ಜೆಯಲ್ಲಿ ತೇ-ರ್ಗಡೆ ಮಾಡಿರುತ್ತಾರೆ. ನಂತರ 1967-68 ರಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ತರಬೇತಿ(ಟಿ ಸಿ ಎಚ್) ಪೂರ್ಣಗೊಳಿಸಿರುತ್ತಾರೆ. ಶಾಲಾ ಶಿಕ್ಷಕರಾಗಿ ಸೇವೆ ಸಲ್ಲಿಸಬೇಕಾದ ಶ್ರೀಗಳು ಗುರು ವಾಕ್ಯವನ್ನು ಅನುಸರಿಸುವ ನಿಟ್ಟಿನಲ್ಲಿ ಶಿಕ್ಷಾ ಗುರುವಾಗಿ, ವೇದ ಗುರುವಾಗಿ ಹಾಗೂ ಮೋಕ್ಷ ಕರುಣಿಸುವ ಗುರುವಾಗಿ 08.05.1970ರ ದಿವಸ ಶ್ರೀಮಠದ ಹತ್ತನೇ ಪೀಠಾಧಿಕಾರಿಯಾಗಿ ಹರಚರ ಪಟ್ಟ ಅಧ್ಯಕ್ಷರಾಗಿ ನೇಮಕಗೊಂಡರು.

ತಮ್ಮ ಜೀವಿತಾವಧಿಯಲ್ಲಿ ಭಕ್ತರ ಪಾಲಿನ ಕಾಮಧೇನುವಾಗಿ ಏನು ಇಲ್ಲದ ಮಠದಲ್ಲಿ ಕಾರ್ಯ ಪ್ರಾರಂಭಿಸಿದ ಶ್ರೀಗಳು ಮಠವನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ದ ಕೀರ್ತಿ ಶ್ರೀಗಳದ್ದಾಗಿದ್ದು ಭಕ್ತರ ಪಾಲಿಗೆ ಸದಾ ಸ್ಪಂದಿಸುತ್ತಿದ್ದ ಶ್ರೀಗಳನ್ನು ಕಳೆದುಕೊಂಡ ಭಕ್ತ ವರ್ಗ ಅಕ್ಷರಶಹ ಅನಾಥರಾಗಿದ್ದು ಶ್ರೀಮಠದ ಆವರಣದಲ್ಲಿ ನೀರವ ಮೌನ ಆವರಿಸಿರುತ್ತದೆ.

## ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗುತ್ತಿರುವ ಹಿನ್ನಲೆ: ಜಿ.ಪಂ. ಸಿಇಓ ದೇವಲ ಗಾಣಗಾಪುರಕ್ಕೆ ಭೇಟಿ ನೀಡಿ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮೇ.28: ಕಲಬುರಗಿ ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗುತ್ತಿದ್ದು, ಇದರ ಹಿನ್ನಲೆಯಲ್ಲಿ ದಿನಾಂಕ:28.05.2025 ರಂದು ಮುಂಜಾಗೃತಾ ಕ್ರಮ ಕೈಗೊಳ್ಳುವ ಸಂಬಂಧ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಅಫಜಲಪೂರ ತಾಲ್ಲೂಕಿನ ದೇವಲ ಗಾಣಗಾಪುರಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ದೇವಲ ಗಾಣಗಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ದೇವಲ್ ಗಾಣಗಾಪೂರ ದಿಂದ ಜೇರಟಗಿಗೆ ಸಂಪರ್ಕ ಕಲ್ಪಿಸುವ ಬ್ರಿಡ್ಜ್ ಕಂ ಬ್ಯಾರೇಜ್ ಹಾಗೂ ಶ್ರೀ ದತ್ತ ಸನ್ನಿಧಾನದ ಸಂಗಮ ಸ್ಥಳವು ಭೀಮಾ ನದಿ ದಡದಲ್ಲಿರುವುದರಿಂದ ಈ ಸ್ಥಳಗಳಿಗೆ ಅವರು ಭೇಟಿ ನೀಡಿ ವೀಕ್ಷಣೆ ಮಾಡಿ, ಅಲ್ಲಿನ ಜನರಿಗೆ ಪ್ರವಾಹದಿಂದ ಮುನ್ನೆಚ್ಚರಿಕೆಯಿಂದಿರಲು ತಿಳಿಸಿ, ನದಿಯ ದಡಬಾಗಲ್ಲಿ ಇರುವ ಅಂಗಡಿಯವರೊಂದಿಗೆ ಮಾತನಾಡಿ, ಮಹಾರಾಷ್ಟ್ರದ ಉಜನಿ ಜಲಾಶಯದಿಂದ ಭೀಮಾ ನದಿಗೆ ಹೆಚ್ಚುವರಿ ನೀರು ಬಿಡುವ ಸಂಬಂಧ ನದಿಯಲ್ಲಿ ನೀರಿನ ಮಟ್ಟ ಹೆಚ್ಚಾಗುತ್ತಿದ್ದು ಕರ್ನಾಟಕ ನೀರಾವರಿ ನಿಯಮಿತ ನಿಗಮದ ಸಹಯೋಗದೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ನದಿಯ ತಳಮಟ್ಟದಿಂದ ಅಪಯಕಾರಿ ಮಟ್ಟ ಗುರುತಿಸಿ ಅದರ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿನ ಮನೆಗಳ ಮೇಲೆ ಬಣ್ಣದಿಂದ ಮಾರ್ಕ್ ಮಾಡಿ ಜಾಗೃತಿ ಮೂಡಿಸಲು ಸೂಚಿಸಿದರು.

# ಕುಶನೂರ ಪಾಲಿಟೆಕ್ನಿಕ್ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ




ಮಲ್ಲಮ್ಮ ನುಡಿ ವಾರ್ತೆ

ಔರಾದ:ಮೇ.28:ಮಾಣಿಕರಾವ ಪಾಟೀಲ ರೂರಲ್ ಪಾಲಿಟೆಕ್ನಿಕ್ (ಅನುದಾನಿತ) ಠಾಣಾ ಕುಶನೂರನಲ್ಲಿ 2025-26ನೇ ಸಾಲಿನ ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸುಗಳ ಪ್ರವೇಶಾತಿಗಾಗಿ ಆಫಲೈನ್ ಮೂಲಕ ಮೊದಲು ಬಂದವರಿಗೆ ಮೊದಲು ಆದ್ಯತೆ ಮೂಲಕ ಪ್ರವೇಶಕ್ಕಾಗಿ ಅರ್ಜಿ ಅಹ್ವಾನಿಸಲಾಗಿದೆ. ಎಸ. ಎಸ್.ಎಲ್.ಸಿ.ಯಲ್ಲಿ ಕನಿಷ್ಠ 35% ಅಂಕ ಪಡೆದು ತೇ-ರ್ಗಡೆ ಹೊಂದಿರಬೇಕು. ಕೋರ್ಸಗಳ ವಿವರ :: 1) ಸಿವಿಲ್ ಇಂಜನಿಯರಿಂಗ್ (2) ಎಲೆಕ್ಟ್ರಿಕಲ್ ಇಂಜಿಯ-ರಿಂಗ. (3) ಮೆಕ್ಯಾನಿಕಲ್ ಇಂಜಿನಿಯರಿಂಗ್(4)ಎಲೆಕ್ಟ್ರಿಕಲ್& ಕಮ್ಯುನಿಕೇಷನ್ ಇಂಜಿನಿಯರಿಂಗ್, ವಿದ್ಯಾರ್ಥಿಗಳು ಸಂಸ್ಥೆಗೆ ಹಾಜರಾಗಿ ಅರ್ಜಿ ಪಡೆದು ಸರ್ಕಾರ ನಿಗದಿ ಪಡಿಸಿರುವ ಶುಲ್ಕವನ್ನು ತುಂಬಿ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 9916428100 / 9538817351/9448947472 ಈ ಮೊಬೈಲ್ ನಂಬರಿಗಾಗಿ ಸಂಪರ್ಕಿಸಬಹುದಾಗಿದೆ.

# ಪಟ್ಟಣ ಪಂಚಾಯತ ನೌಕರರ ಅನಿರ್ದಿಷ್ಟಾವಧಿ ಮುಷ್ಕರ



ಔರಾದ:ಮೇ.28:ಪಟ್ಟಣ ಪಂಚಾಯತ ನೌಕರರು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ರಾಜ್ಯ ಅಧ್ಯಕ್ಷರ ಆದೇಶದ ಮೇರೆಗೆ ಅನಿರ್ದಿಷ್ಟಾವಧಿ ಮುಷ್ಕರ ಬೆಂಬಲಿಸಿ ಪಟ್ಟಣ ಪಂಚಾಯತ ಮುಂಭಾಗದಲ್ಲಿ ಕಾರ್ಮಿಕರೊಂದಿಗೆ ನೌಕರರು ಕಾರ್ಯಾಲಯದ ಕೆಲಸ ಸ್ಥಗಿ-ತಗೊಳಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡರು.

ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ತಾಲೂಕು ಅಧ್ಯಕ್ಷ ಮೊಹಮ್ಮದ್ ಸಮಿ ಅವರು ಮಾತನಾಡಿ ಈ ಹಿಂದೆ ಸರ್ಕಾರಕ್ಕೆ 45 ದಿವಸಗಳ ಗಡುವು ನೀಡಿದ್ದರೂ ಕೂಡ ಸರ್ಕಾರ ನಮ್ಮ ಬೇಡಿಕೆಗಳು ಈಡೇರಿಸುವಲ್ಲಿ ವಿಫಲವಾಗಿದ್ದರಿಂದ ಕೇಂದ್ರ ಕಚೇರಿಯ ಆದೇಶದಂತೆ ನಾವು ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಂಡಿದ್ದೇವೆ. ಇದರಿಂದ ನೈರ್ಮಲ್ಯ ವಿಭಾಗದ ಕೆಲಸ ಮತ್ತು ಕಾರ್ಯಾಲಯದ ಕೆಲಸಗಳು ಕೂಡ ನಡೆಯುತ್ತಿಲ್ಲ. ಹಾಗಾಗಿ ಸರ್ಕಾರ ಕೂಡಲೇ ಈ ಹೋರಾಟಕ್ಕೆ ಸ್ಪಂದಿಸಿ ನಮ್ಮ ಬೇಡಿಕೆಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿದರು.

ಸಂಘದ ಉಪಾಧ್ಯಕ್ಷ ತಿಪ್ಪಣ್ಣ ಮಾತನಾಡಿ, ನೀರು ಸರಬರಾಜು ನೌಕರರು ಹಾಗೂ ಕಾರ್ಮಿಕರನ್ನು ನೇರ ನೇಮಕಾತಿ ಅಡಿಯಲ್ಲಿ ಖಾಯಂ ನೌಕರರನ್ನಾಗಿ ಮಾಡುವ ಉದ್ದೇಶದಿಂದ ರಾಜ್ಯವ್ಯಾಪಿ ಶಾಂತಿಯುತ ಹೋರಾಟವನ್ನು ಹಮ್ಮಿಕೊಂಡಿದ್ದೇವೆ. ಹೋರಾಟಕ್ಕೆ ಸರ್ಕಾರ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ನೌಕರರ ಸಂಘದ ನಾಯಕರ ಜೊತೆ ಚರ್ಚಿಸಿ ಮುಂದಿನ ದಿನಗಳಲ್ಲಿ ನೀರು ಪೂರೈಕೆ ಸ್ಥಗಿತ ಮಾಡಿ ತೀವ್ರವಾದ ಹೋರಾಟವನ್ನು ಹಮ್ಮಿಕೊಳ್ಳುತ್ತೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ತಾಲೂಕು ಅಧ್ಯಕ್ಷ ಮೊಹಮ್ಮದ್ ಸಮಿ, ಉಪಾಧ್ಯಕ್ಷ ತಿಪ್ಪಣ್ಣ, ಕಾರ್ಯದರ್ಶಿ ಮಾರುತಿ, ಖಾನೂನ ಸಲಹೆಗಾರ ಅನುರಾಜ ಮುಂಗೆ, ಖಾಜಾಂಚಿ ಜಮೀರ್, ಧನರಾಜ, ಸಾಜಿದ, ರೋಹಿದಾಸ, ನರಸಿಂಗ, ಸಂತೋಷ, ಮಲ್ಲಿಕಾರ್ಜುನ, ಮೊಗ್ಗಮ್ಮ, ಸುಭಮ್ಮ, ಶಿವಮ್ಮ, ಪ್ರಭಾವತಿ, ಜಾನಾಬಾಯಿ ಸೇರಿದಂತೆ ಇತರರಿದ್ದರು.

# ಬಸವಣ್ಣವರ ವಿಚಾರಾಧಾರೆ ಸರ್ವಕಾಲಕ್ಕೂ ಪ್ರಸ್ತುತ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.28: ವಿಶ್ವಗುರು ಬಸವಣ್ಣನವರು ವಿಚಾರಧಾರೆ ಸರ್ವಕಾಲಕ್ಕೂ ಪ್ರಸ್ತುತವಾಗಿವೆ. ಅವರು 12ನೆಯ ಶತಮಾನದಲ್ಲಿ ಮಾಡಿದ ಕ್ರಾಂತಿ ಅದ್ಭುತವಾಗಿತ್ತು. ಬಸವಣ್ಣನವರು ಮಾದಾರ ಚೆನ್ನಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯನವರ ಹೃದಯದಲ್ಲಿ ಕೂಡಲಸಂಗಮದೇವರ ದರ್ಶನ ಪಡೆದು ಮಾನವೀಯತೆಯನ್ನು ಎತ್ತಿ ಹಿಡಿದಿದ್ದರು ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಮಹಾರಾಷ್ಟ್ರ ರಾಜ್ಯದ ಪುಣೆ ಮಹಾನಗರದಲ್ಲಿ ಬಸವಸೇವಾ ಪ್ರತಿಷ್ಠಾನದ ವತಿಯಿಂದ ಮಂಗಳವಾರ ಆಯೋಜಿಸಿದ್ದ ವಿಶ್ವಗುರು ಬಸವಣ್ಣನವರ ಜಯಂತಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಬೇರು ಬಿಟ್ಟಿದ್ದ ಅಸ್ಪೃಶ್ಯತೆ ನಿರ್ಮೂಲನೆ, ಮೂಢನಂಬಿಕೆ ವಿರುದ್ಧ ಸಮರ ಸಾರಿದ್ದರು. ಸ್ತ್ರೀಯರ ಉದ್ಧಾರ, ಸರ್ವರಿಗೂ ಶಿಕ್ಷಣ, ಏಕದೇವೋಪಾಸನೆ, ಕಾಯಕ ಪ್ರಜ್ಞೆ ಮುಂತಾದ ಕಾರ್ಯವನ್ನು ಮಾಡಿದರು. ವಿಶ್ವಗುರು ಬಸವಣ್ಣನವರ ಈ ಕಾರ್ಯಗಳಿಂದ ಪ್ರೇರೆಪಿತರಾದ ಮಹಾರಾಷ್ಟ್ರದ ಸಂತ ನಾಮದೇವ, ಜ್ಞಾನೇಶ್ವರ, ತುಕಾರಾಮ, ಮಹಾತ್ಮ ಫುಲೆ, ಶಾಹುಮಹಾರಾಜರು, ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ಮುಂದೆ ವರೆಸಿದ್ದಾರೆ.

ಮಹಾತ್ಮ ಜ್ಯೋತಿಬಾ ಫುಲೆ ಅವರ ಜೀವನ ಚರಿತ್ರೆಯನ್ನು ತಿಳಿದುಕೊಂಡಾಗ ಇವರು ಬಸವ ಪರಂಪರೆಯ ನಿಜವಾರಸದಾರರೆಂದೇ ಎನಿಸಿತು. ಹಾಗಾಗಿ ಮಹಾರಾಷ್ಟ್ರದಲ್ಲಿ ಬಸವಪ್ರಜ್ಞೆ ವೇಗವಾಗಿ ಬೆಳೆಯುತ್ತಿರುವುದು ನಮಗೆ ಹೆಮ್ಮೆ ಎನಿಸುತ್ತದೆ. ಶ್ರೀಮಠದ ಅಡಿಯಲ್ಲಿ ಮಹಾರಾಷ್ಟ್ರ ಬಸವ ಪರಿಷತ್ತ ಸ್ಥಾಪಿಸುವ ಮೂಲಕ ಸುಮಾರು 200 ಕ್ಕಿಂತಲೂ ಹಚ್ಚಿನ ಮರಾಠಿ ಪುಸ್ತಕಗಳನ್ನು ಪ್ರಕಟಿಸಿ, ಮಹಾರಾಷ್ಟ್ರಾದ್ಯಂತ ಬಸವಸಾಹಿತ್ಯ ಪ್ರಸಾರವಾಗಿದೆ. ಮಹಾರಾಷ್ಟ್ರದಲ್ಲಿ ಹೆಚ್ಚಿನ ಪ್ರಜ್ಞೆ ಬೆಳೆಯಲು ನಮ್ಮ ಶ್ರೀಮಠದಿಂದ ಪ್ರಕಟಿಸಿದ ಮರಾಠಿ ಸಾಹಿತ್ಯವೇ ಮೂಲಕಾರಣವೆಂದು ಹೇಳಲು ಅಭಿಮಾನ ಎನಿಸುತ್ತದೆ ಎಂದು ತಿಳಿಸಿದರು.

ಸೋಲಾಪುರದ ಪತ್ರಕರ್ತ ಚನ್ನವೀರ ಭದ್ರೇಶ್ವರಮಠ, ರಾಜು ಜುಬರೆ ಉಪನ್ಯಾಸ ನೀಡಿದರು. ಮಹಾನಗರ ಪಾಲಿಕೆ ಸದಸ್ಯ ಹರಿಭಾವು ಚರವಡ ಅಧ್ಯಕ್ಷತೆ ವಹಿಸಿದ್ದರು.

ಗ್ರಂಥ ಲೋಕಾರ್ಪಣೆ

ಪ್ರತಿಯೊಬ್ಬರು ಬಸವಪ್ರಜ್ಞೆ, ವಚನನಿಷ್ಠೆ ಬೆಳೆಸಿಕೊಳ್ಳಬೇಕು. ಇಷ್ಟಲಿಂಗದ ಮೇಲೆ ಭಕ್ತಿ ಇಟ್ಟುಕೊಂಡು ಬಸವತತ್ವವನ್ನು ನಿಜ ಜೀವನದಲ್ಲಿ ಆಚರಣೆಗೆ ತರುವ ಪ್ರಯತ್ನ ಮಾಡಬೇಕು.

-ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅಧ್ಯಕ್ಷರು ಅನುಭವ ಮಂಟಪ ಬಸವಕಲ್ಯಾಣ

ಸಾಹಿತಿ ಡಾ.ನಳಿನಿ ವಾಗ್ಮಾರೆ ಅವರು ಆಂಗ್ಲಭಾಷೆಯಲ್ಲಿ ಬರೆದ ಲಿಂಗಾಯತ ಉಮನ್ಸ್ ಎಂಬ ಗ್ರಂಥ ಲೋಕಾರ್ಪಣೆಗೊಂಡಿತು. ಚಂದ್ರಕಾಂತ ಹಾಲಕುಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ನೀಲಕಂಠ ಪಾಟೀಲ ಸ್ವಾಗತಿಸಿದರು. ರವಿ ಖೂಬಾ ನಿರೂಪಿಸಿದರು. ಈ ಸಂದರ್ಭದಲ್ಲಿ ಸಂ-ಜಯ ಇಂಡೆ, ನರ್ಸಿಂಗ್ ಮುಳೆ, ಸಂತೋಷ ಮಲ್ಲಶೆಟ್ಟಿ, ವಿಜಯ ಪಾಟೀಲ್ ಸೇರಿದಂತೆ ಹಲವರು ಇದ್ದರು.

# ಗೊಂಡ ಸಮಾಜದ ಅಭಿವೃದ್ಧಿಗೆ ಬದ್ಧ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.28:ಗೊಂಡ ಸಮಾಜ ಅತ್ಯಂತ ಪುರಾತನ ಇತಿಹಾಸ ಹೊಂದಿದೆ. ಭಕ್ತ ಕನಕದಾಸರು, ಚಂದ್ರಗುಪ್ತ ಮೌರ್ಯರಂತಹ ಅನೇಕ ಇತಿಹಾಸಪುರುಷ ವ್ಯಕ್ತಿಗಳನ್ನು ನೀಡಿದ ಈ ಸಮಾಜದ ಅಭಿವೃದ್ಧಿಗೆ ಬದ್ಧನಾಗಿದ್ದೇನೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಕಮಲನಗರ ತಾಲ್ಲೂಕಿನ ಚಾಂದೋರಿ ಗ್ರಾಮದಲ್ಲಿ ಬೀರಲಿಂಗೇಶ್ವರ ಹಾಗೂ ಮಾಳಿಂಗರಾಯರ ಮಂದಿರದ ಉದ್ಘಾಟನೆ ಮತ್ತು ಕಳಸಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದುಷ್ಟರ ಸಂಹಾರಕ್ಕಾಗಿ ಭೂಮಿ ಮೇಲೆ ಬೀರದೇವರ ಅವತಾರವಾಗುತ್ತದೆ ಎಂದು ಪುರಾಣಗಳಲ್ಲಿ ಉಲ್ಲೇಖವಾಗಿದೆ. ನಮ್ಮ ಭಾಗದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕಾಣುವ ಬೀರಲಿಂಗೇಶ್ವರ, ಮೈಲಾರಲಿಂಗೇಶ್ವರ ಗುಡಿಗಳಲ್ಲಿ ಎಲ್ಲ ಸಮುದಾಯದವರೂ ಬೇಧ-ಭಾವಗಳಿಲ್ಲದೇ ಭಕ್ತಿಭಾವದಿಂದ ಪೂಜಿಸುತ್ತಾರೆ ಎಂದು ತಿಳಿಸಿದರು.

ಬೀರಲಿಂಗೇಶ್ವರರ ಮಹಿಮೆ ಅಪಾರವಾಗಿದೆ. ಸತ್ಯ, ನಿಷ್ಠೆ, ಪ್ರಮಾಣಿಕತೆಗೆ ಈ ಸಮಾಜ ಬಾಂಧವರು ಹೆಸರುವಾಸಿಯಾಗಿದ್ದಾರೆ. ಇಂದಿನ ಯುವ ಪೀಳಿಗೆ ದೈವಿ ಪುರುಷರು ಮತ್ತು ಇತಿಹಾಸದ ಬಗ್ಗೆ ತಿಳಿದುಕೊಳ್ಳಬೇಕು. ಅವರ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ಗೊಂಡಸಮಾಜವೆಂದರೆ ನನಗೆ ಎಲ್ಲಿಲ್ಲದ ಪ್ರೀತಿಯಿದೆ. ಕ್ಷೇತ್ರದಲ್ಲಿ ಎಲ್ಲೆಲ್ಲಿ ನಿವೇಶನ ಇದೆಯೋ ಅಲ್ಲಿ ಬೇಡಿಕೆಗೆ ಅನುಸಾರ ಸಮುದಾಯ ಭವನಗಳನ್ನು ಮಂಜೂರು ಮಾಡಿದ್ದೇನೆ. ಅದರಂತೆ ಚಾಂದೋರಿಯಲ್ಲಿ 30 ಲಕ್ಷ ಅನುದಾನ ನೀಡಿ ಸುಂದರ ಸಮುದಾಯ ಭವನ ನಿರ್ಮಿಸಿಕೊಡಲಾಗಿದೆ. ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಕುಡಿಯುವ ನೀರಿನ ವ್ಯವಸ್ಥೆಗೆ ಬೋರವೆಲ್, ರಸ್ತೆ ಸೇರಿದಂತೆ ಎಲ್ಲ ಅಗತ್ಯತೆಗಳನ್ನು ಪೂರೈಸುವೆ ಎಂದು ಭರವಸೆ ನೀಡಿದರು. ಸಮಾಜದ ಅಭಿವೃದ್ಧಿಯಾಗಬೇಕಾದರೆ ಹಿರಿಯರು, ಯುವಕರು ಹಾಗೂ ಮುಖಂಡರೆಲ್ಲರೂ ಸೇರಿ ಅಭಿವೃದ್ಧಿ ಸಮಿತಿಯೊಂದನ್ನು ರಚಿಸಿಕೊಳ್ಳಬೇಕು. ದೇವಸ್ಥಾನ ಹಾಗೂ ಗ್ರಾಮದ ಸಮಗ್ರ ಅಭಿವೃದ್ಧಿಗೆ ನೀಲನಕ್ಷೆಯನ್ನು ರಚಿಸಿಕೊಂಡು ಏನೇನು ಮಾಡಬೇಕು ಎನ್ನುವ ಪಟ್ಟಿಯನ್ನು ಸಿದ್ಧಪಡಿಸಿಕೊಂಡು ಹಂತ ಹಂತವಾಗಿ ಕೆಲಸ ಮಾಡಿಕೊಳ್ಳಬೇಕು. ಪ್ರಮುಖ ಕೆಲಸಗಳಿದ್ದಲ್ಲಿ ನೇರವಾಗಿ ನನ್ನನ್ನು ಭೇಟಿಯಾಗಬೇಕು. ಅಭಿವೃದ್ಧಿಗೆ ನನ್ನ ಸಹಕಾರ ಸದಾ ಇರುತ್ತದೆ ಎಂದು ಹೇಳಿದರು. ಬಾಲತಪಸ್ವಿ ಪೂಜ್ಯ ಗೋಪಾಲಮುತ್ಯಾ ಉಚ್ಚಾ, ಪೂಜ್ಯ ಕೃಷ್ಣಮಹಾರಾಜ ರಾಮಾಯಣಿ, ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಗಿರೀಶ ವಡೆಯರ್, ಪ್ರವೀಣ ಕಾರಬಾರಿ, ವೈಜಿನಾಥ ಸಾಗಾವೆ, ಪ್ರಕಾಶ ಮೇತ್ರೆ, ಶಿವಾಜಿರಾವ ಕಾಳೆ, ಭರತ ಕದಮ್, ಬಂಟಿ ರಾಂಪೂರೆ, ಉದಯ ಸೋಲಾಪೂರೆ, ಸಂಜು ಮುರ್ಕೆ, ಸಚಿನ ಬಿರಾದಾರ, ವೈಜಿನಾಥ ಮೇತ್ರೆ, ಪ್ರೇಮ್ ಮೂರ್ತಿ, ಓಂಕಾರ ಗಂಗನಬೀಡೆ, ಸಂದೀಪ ಜಾಧವ, ಅಶೋಕ ಮೇತ್ರೆ, ನರಸಿಂಗ್ ಮೇತ್ರೆ, ಬಂಡೆಪ್ಪ ಕೋಟೆ, ತಾನಾಜಿ ತೋರ್ಣೆಕರ್, ನಾಗರಾಜ ಸಾಗಾವೆ, ವೈಜಿನಾಥ ಸಾಗಾವೆ, ದಯಾನಂದ ಸಾಗಾವೆ, ಆಕಾಶ ಸಾಗಾವೆ, ಕೃಷ್ಣಾ ಸಾಗಾವೆ ಸೇರಿದಂತೆ ಇತರರು ಉಪಸ್ಥಿತರಿದ್ದರು. ಸಾಹಿತಿ ಸುನಿತಾ ಬಿರಾದಾರ ಉಪನ್ಯಾಸ ನೀಡಿದರು. ರೋಹಿದಾಸ ಮೇತ್ರೆ ನಿರೂಪಿಸಿದರು. ಸಂಜುಕುಮಾರ ಮೇತ್ರೆ ವಂದಿಸಿದರು.

ಇದೇ ವೇಳೆ ಪೂಜ್ಯರ ನೇತೃತ್ವದಲ್ಲಿ ಬೀರಲಿಂಗೇಶ್ವರ ಹಾಗೂ ಮಾಳಿಂಗರಾಯರ ಮಂದಿರದ ಉದ್ಘಾಟನೆ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಕಾರ್ಯಕ್ರಮ ಧಾರ್ಮಿಕ ವಿಧಿ ವಿಧಾನಗಳ ಮೂಲಕ ನೆರವೇರಿಸಲಾಯಿತು. ಬೆಳಗ್ಗೆಯಿಂದಲೇ ಹೋಮ-ಹವನ, ಪೂಜೆ, ಅರ್ಚನೆ, ನೈವಿದ್ಯ ಸಮರ್ಪಣೆ ಸೇರಿದಂತೆ ವಿವಿಧ ಧಾರ್ಮಿಕ ಚಟುವಟಿಕೆಗಳು ಜರುಗಿದವು.

ಶಿವಾ ಡ್ಯಾನ್ಸ್ ಅಕಾಡೆಮಿ ಹುಮನಾಬಾದ ವತಿಯಿಂದ ಜರುಗಿದ ಸಾಮಾಜಿಕ ನೃತ್ಯೋತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ

# ನೃತ್ಯ ಜತೆಗೆ ವಿದ್ಯಾಭ್ಯಾಸ್ಯ ಮಾಡಲು ಮಕ್ಕಳಿಗೆ ಡಿ.ಎನ್.ಪತ್ರಿ ಕರೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ನೃತ್ಯ ಜತೆಗೆ ವಿದ್ಯಾಭ್ಯಾಸ್ಯ ಮಾಡಿ ಎಂದು ಸುನೀಲಡಿ.ಎನ್.ಪತ್ರಿಕಲಾವಿದರ ಸಂಘ (ರಿ) ಸಹಕಾರ ಶಿವಾ ಡ್ಯಾನ್ಸ್ಅಕಾಡೆಮಿಹುಮನಾಬಾದ ವತಿಯಿಂದ ಶ್ರೀ ವೀರಭದ್ರೇಶ್ವರ ಚಿತ್ರಕಲಾ ಮಹಾವಿದ್ಯಾಲಯದಲ್ಲಿ ಸಾಮಾಜಿಕನೃತ್ಯೋತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ನುಡಿದರು. ಭಾರತೀಯ ಸಂಸ್ಕೃತಿ ಉಳಿಸಿ ಬೆಳೆಸುವಲ್ಲಿ ನೃತ್ಯ, ಸಂಗೀತ, ಜಾನಪದ ಕಲೆಗಳ ಪಾತ್ರ ಮಹತ್ವದ್ದಾಗಿದೆ. ವ್ಯಕ್ತಿಯ ಬೆಳವಣಿಗೆ ಜೊತೆಗೆ ಸುಂದರ ಸಮಾಜ ನಿರ್ಮಾಣಕ್ಕೂ ಸಹಕಾರಿಯಾಗಿವೆ,


ಹಾಗೂ ಮನುಷ್ಯನ ಆರೋಗ್ಯಪೂರ್ಣ ಮಾನಸಿಕ ಬೆಳವಣಿಗೆ, ಸಮತೋಲಿತ ಆನಂದಮಯ ಜೀವನ ಶೈಲಿಗೆ, ಕೌಟುಂಬಿಕ ಸಾಮರಸ್ಯಕ್ಕಾಗಿ ನೃತ್ಯ, ಸಂಗೀತ ಮುಂತಾದ ಕಲೆಗಳು ಅತಿ ಅವಶ್ಯಕ. ಮಕ್ಕಳ ಏಕಾಗ್ರತೆ ಹೆಚ್ಚಿಸಲು, ಅವರ ಸೃಜನಶೀಲ ಬುದ್ಧವಂತಿಕೆ ವಿಕಾಸದಲ್ಲಿ ನೃತ್ಯ, ಸಂಗೀತಗಳು ಪರಿಣಾಮಕಾರಿ ಪಾತ್ರವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು. ಹಸ್ಯ ಕಲಾವಿದ ವೈಜಿನಾಥ ಬಿರಾದಾರ ಮಾತನಾಡಿ, ಈ ಭಾಗದ ಮಕ್ಕಳಿಗೆ ಕಲಿಕಾ ಆಸಕ್ತಿ ಬಹಳಷ್ಟಿದ್ದು, ಅದಕ್ಕೆ ಬೇಕಾದ ಪೂರಕವಾತಾವರಣದ ಅಗತ್ಯವಿದೆ, ಆ ನಿಟ್ಟಿನಲ್ಲಿ ಕಲಾವಿದರ ಸಂಘ (ರಿ) ಸಹಕಾರ ಶಿವಾ ಡ್ಯಾನ್ಸ್ ಅಕಾಡೆಮಿ ಉತ್ತಮ ಕೆಲಸ ಮಾಡುತ್ತಿದೆ ಎಂದು ಹೊಗಳಿದರು.

ಹಾಗೂ ಬಂಜಾರ್ ಜಾನಪದ ನೃತ್ಯನಾದದಲ್ಲಿಅಭ್ಯಾಸಮಾಡುತ್ತಿರುವ ಮಕ್ಕಳಾದಯಾಶೋಧಾ,ಸಂಸ್ಕೃತಿ, ಮಾಡಿದರು. ಶಾನ್ವಿಡ್ಯಾನ್ಸ್ ಗ್ರೂಪ್ ಭರತ್ ನಾಟ್ಯಯಂ ಹಾಗೂ ಜಾನಪದನೃತ್ಯದಪ್ರದರ್ಶನಗಳನ್ನು ಮಾಡಿದರು. ಕೊನೆಯಲ್ಲಿ ಪ್ರಮಾಣ ಪತ್ರ ವಿತರಣೆ ಮಾಡಿ ಮಕ್ಕಳಿಗೆ ವಿದ್ಯಾಭಾಸದ ಜತೆಗೆ ನೃತ್ಯಗಳನ್ನು ಕಲಿಯಿರಿ ಎಂದು ಹೇಳಿದರು. ಈ ಸಂಧರ್ಭದಲ್ಲಿ ಶಿವಾ ಕಲಾವಿದರ ಸಂಘ (ರಿ) ಅಧ್ಯಕ್ಷ ಶಿವಾ ರಾಠೋಡ, ಪರಸಭೆ ಅಧ್ಯಕ್ಷೆ ಪಾರ್ವತಿ ಶೇರಿಕಾರ ಮತ್ತು ಉದಯಕುಮಾರ, ಸಿದ್ದು ಪರಸುನೋರ, ಅಕಿಂತ, ಅಮೃತಕುಂಬಾರ ಕೆ. ಶ್ರೀಕಾಂತ, ಸೋಮನಾಥ ಚೌಹಾಣ, ಸವಿತಾ ಸಾಗಾರ , ಸುನೀಲ ರೆಡ್ಡಿ ಹಾಗೂ ವಿದ್ಯಾರ್ಥಿಗಳ ಪಾಲಕರು, ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬೀದಿನಾಯಿಗಳ ಹಾವಳಿ ತಡೆ ಯಾವಾಗ ?

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ನಗರದ ರಸ್ತೆಗಳಲ್ಲಿ ಬೀದಿನಾಯಿಗಳ ಹಾವಳಿ ವಿಪರೀತವಾಗಿದು ಸಂಬಂಧ ಪಟ್ಟ ಅಧಿಕಾರಿಗಳು ಇತ್ತ ಕಡೆ ಗಮನ ಹರಿಸಿದೇ ನಿರ್ಲಕ್ಷ್ಯತೋರುತ್ತಿದ್ದಾರೆ ಎಂದು ಸಾರ್ವಜನಿಕರು ಅಕ್ರೋಶ ವ್ಯಕ್ತಪಡಿಸಿದ್ದಾರೆ. ಅದೇರೀತಿ ವಿವಿಧ ಮುಖ್ಯರಸ್ತೆಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದೆ. ಬೀದಿ ನಾಯಿಗಳ ಭಯದಿಂದ ಮಹಿಳೆಯರು ಮಕ್ಕಳು ವೃದ್ಧರು ಹೆದರಿಕೂಂಡು ತಿರುಗಾಡಲು



ಹಿಂಜರಿಕೆಯಾಗುತ್ತಿದೆ ಎಂದರು. ಸಂಬಂಧಪಟ್ಟ ಅಧಿಕಾರಿಗಳ ಇತ್ತಕಡೆ ಗಮನ ಹರಿಸಿ ಆದಷ್ಟು ಬೇಗ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ದೂರಿದ್ದಾರೆ.

# ಐಪಿಎಲ್ ಕ್ರಿಕೆಟ್ ಬೆಟ್ಟಿಂಗ್: ಓರ್ವನ ಬಂಧನ

ಕಲಬುರಗಿ,ಮೇ.28-ಇಲ್ಲಿನ ಸುನೀಲ ನಗರದ ಫಿಲ್ಟರ್ ಬೆಡ್‌ನ ಹನುಮಾನ ಗುಡಿಯ ಹಿಂಭಾಗದ ಕಟ್ಟೆಯ ಮೇಲೆ ಐಪಿಎಲ್ ಕ್ರಿಕೆಟ್ ಬೆಟ್ಟಿಂಗ್ ನಡೆಯುತ್ತಿದೆ ಎಂಬ ಮಾಹಿತಿ ಮೇಲೆ ಚೌಕ್ ಪೊಲೀಸ್ ಠಾಣೆಯಎಎಸ್‌ಐ ಶಿವಶರಣಪ್ಪ, ಸಿಬ್ಬಂದಿಗಳಾದ ಶಿವಾನಂದ, ಸುರೇಶ, ಮೋಸಿನ್, ಸೈಯದ್ ತೌಸಿಫ್ ಹುಸೇನ್ ಅವರು ದಾಳಿ ನಡೆಸಿ ಓರ್ವನನ್ನು ಬಂಧಿಸಿದ್ದಾರೆ. ಆಳಂದ ತಾಲ್ಲೂಕಿನ ಚಿಂಚನಸೂರ ಗ್ರಾಮದ ಮಹಾರುದ್ರಪ್ಪ ತಂದೆ ಚನ್ನಮಲ್ಲಪ್ಪ ಗುಮ್ಮಾ (34) ಎಂಬಾತನನ್ನು ಬಂಧಿಸಿ 5 ಸಾವಿರ ರೂ.ನಗದು ಜಪ್ತಿ ಮಾಡಿದ್ದಾರೆ.

ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


CITATION

IN THE COURT OF THE ADDL. CIVIL JUDGE AND JMFC., AT HUMNABAD

CRL.MISC. NO.565/2025

Petitioners:-

P-1. Pasha Miya S/o Late Aziz Miya Age 54 Yrs Occu Agriculture

R/o Nagankhera Now at Man-naekhelli Tq Chitguppa Dist Bidar.

P-2. Wazeer Pasha S/o Late Aziz Miya Age 58 Yrs Occu Agri R/o Nagankhera

P-3. Riyaz Bee D/o Late Aziz Miya W/o Musamiya Age 60 Yrs

Occu Household R/o Nagankhera Now at Wadankera Tq Chitguppa.

P-4. Khaja Bee D/o Late Aziz Miya W/o Chandpasha Age 61Yrs

Occu Household R/o Nagankhera Now at Wadankera.

P-5. Qairoon Bee W/o Late Mainuddin Age 63 Yrs Occu Household

R/o Nagankhera Tq Chitguppa Dist Bidar.

Respondent:-

The Registrar of Birth and Death through The Tahasildar Chitguppa.

Sub:- Petition U/Sec 13(3) of Birth and Death Registration Act 1969.

Whereas the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate Son of Petitioners No. 1 and 2 and daughter of petitioner No.3 and 4 and daughter-in-law of petitioner No.5 namely; Mahebboob Bee W/o Late Md. Azeez Miyan who died on 12-12-2018 at Village Nagankhera Tq Chitguppa Dist Bidar. The petitioners claiming the death certificate of said Maheboob Bee for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 24-06-2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 19-05-2025.

//By order of the court//
Chief Ministerial Officer,
Addl. Civil judge and JMFC Court
Humnabad.


# ಹುಲಸೂರೆ ವೈದ್ಯ ದಂಪತಿಗಳ ಸೇವೆ ಅನನ್ಯ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಟ್ಟಣದ ಆರಾಧ್ಯದೈವ ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನಕ್ಕೆ ಹಾಗೂ ಭಕ್ತಾಧಿಗಳಿಗಾಗಿ ಹುಲಸೂರೆ ವೈದ್ಯ ದಂಪತಿಗಳು ನೀಡುತ್ತಿರುವ ಸೇವೆ ಅನನ್ಯವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಹೇಳಿದರು. ಪಟ್ಟಣದ ಐತಿಹಾಸಿಕ ದೇವಸ್ಥಾನದಲ್ಲಿ ಹುಲಸೂರೆ ಪರಿವಾರದಿಂದ ಹಿರೇಮಠ ಸಂಸ್ಥಾನದ ಪೀಠಾಧಿಪತಿ ರೇಣುಕವೀರ ಗಂಗಾಧರ ಶಿವಾಚಾರ್ಯರ ಸಾನಿಧ್ಯದಲ್ಲಿ ನಡೆದ ಅನ್ನದಾಸೋಹ ಕಾರ್ಯಕ್ರಮದಲ್ಲಿ ಹುಲಸೂರೆ ವೈದ್ಯ ದಂಪತಿಗಳಿಗೆ ಸನ್ಮಾನಿಸಿ ಮಾತನಾಡಿದರು.

ವೃತ್ತಿಯಲ್ಲಿ ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಯಾಗಿ ಡಾ. ನಾಗನಾಥ ಹುಲಸೂರೆ ಸೇವೆ ಸಲ್ಲಿಸುತ್ತಿದ್ದರು ಕೂಡಾ ಧಾರ್ಮಿಕ, ಸಾಮಾಜಿಕ ಕ್ಷೇತ್ರದ ಬೆಳವಣಿಗೆಗೂ ನಿಸ್ವಾರ್ಥ ಸೇವೆ ನೀಡುತ್ತಿದ್ದಾರೆ. ಅಲ್ಲದೇ ಅವರ ಧರ್ಮಪತ್ನಿ ಡಾ. ಸಂಗೀತಾ ಅವರು ಸಹ ಅವರ ಸೇವೆಗೆ ಸಹಕಾರ ನೀಡುತ್ತಿರುವುದು ವಿಶೇಷವಾಗಿದೆ ಎಂದರು.

ಈ ಸಂದರ್ಭದಲ್ಲಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ರೇಣುಕವೀರ ಗಂಗಾಧರ ಶಿವಾಚಾರ್ಯರು, ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಮಲ್ಲಿಕಾರ್ಜುನ್ ಮಾಳಶಟ್ಟಿ, ಮಹೇಶ ಅಗಡಿ, ವಾಕೀಲರಾದ ಹರೀಶ್ ಅಗಡಿ ಸೇರಿದಂತೆ ಪಾಟೀಲ್ ಮತ್ತು ಹುಲಸೂರೆ ಪರಿವಾರಸ್ಥರು ಉಪಸ್ಥಿತರಿದ್ದರು.





ಇಂದಿನ ಒತ್ತಡದ ಜೀವನದಲ್ಲಿ ಎಲ್ಲರೂ ನೆಮ್ಮದಿ ಜೀವನ ಕಳೆಯಬೇಕಾದರೆ ನಿತ್ಯವೂ ಭಗವಂತನ ಸ್ಮರಣೆ, ಪೂಜೆ ಪುನಸ್ಕಾರಗಳನ್ನು ಮಾಡಬೇಕು. ಮುಂದಿನ ಪೀಳಿಗೆಗಳಿಗೆ ಭಾರತ ಸಂಸ್ಕೃತಿಯ ಮಹತ್ವ ತಿಳಿಸಿಕೊಡುವ ಪ್ರಯತ್ನ ಎಲ್ಲರೂ ಮಾಡಬೇಕು.

-ರೇಣುಕವೀರ ಗಂಗಾಧರ ಶಿವಾಚಾರ್ಯರು
ಪೀಠಾಧಿಪತಿ, ಹಿರೇಮಠ ಸಂಸ್ಥಾನ ಹುಮನಾಬಾದ್



ವಯಕ್ತಿಕ ಲಾಭಕ್ಕಾಗಿ ದೇವರ ಸ್ಮರಣೆ ಮಾಡದೇ ಸಮಾಜದ ಉದ್ಧಾರಕ್ಕಾಗಿ ಶುದ್ಧ ಮನಸ್ಸಿನಿಂದ ಭಗವಂತನನ್ನು ಪೂಜಿಸಿದರೆ ಎಲ್ಲ ಕಾರ್ಯಗಳು ನೆರವೇರುತ್ತವೆ.

ಜತೆಗೆ ಮಹಾತ್ಮರ ಚಿಂತನೆಗಳು ಹಾಗೂ ಸ್ವಾತಂತ್ರ್ಯ ಹೋರಾಟಗಾರರ ಜೀವನ ಚರಿತ್ರೆ ಮಕ್ಕಳಿಗೆ ತಿಳಿಸಿಕೊಡಬೇಕು.

-ಡಾ. ಚಂದ್ರಶೇಖರ ಪಾಟೀಲ್
ವಿಧಾನ ಪರಿಷತ್ ಸದಸ್ಯ

# ಹೆದ್ದಾರಿಗೆ ಅಡ್ಡಿಯಾಗಿರುವ ಕಟ್ಟಡಗಳನ್ನು ತೆರವುಗೊಳಿಸಬೇಕು ಹಾಗೂ ಹೆದ್ದಾರಿ ಕಾಮಗಾರಿ ಪೂರ್ಣಗೊಳಿಸಲು ಕರ್ನಾಟಕ ರಕ್ಷಣಾ ವೇದಿಕೆ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ರೂ. 255.88 ಕೋಟಿ ವೆಚ್ಚದಲ್ಲಿ ಜೇವರ್ಗಿ- ಚಾಮರಾಜನಗರ ರಾಷ್ಟ್ರೀಯ ಹೆದ್ದಾರಿ 150 ಎ ಮಾರ್ಗದ ಲಿಂಗಸುಗೂರು ಮುದಬಾಳ ಕ್ರಾಸ್ ಮತ್ತು ಮಸ್ಕಿ ಬೆಟ್ಟದ ವರೆಗೆ ದ್ವಿಪದವನ್ನು ಚತುಪರವನ್ನಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ 2023 ಜನವರಿ 18ರಂದು ಕಾಮಗಾರಿ ಆರಂಭವಾಗಿದೆ ಟೆಂಡರ್ ನಿಯಮದಂತೆ 2024 ಜುಲೈ 17ರಂದು ಕಾಮಗಾರಿ ಮುಗಿಯಬೇಕಿತ್ತು, ಆದರೆ ಈ ವರೆಗೂ ಕಾಮಗಾರಿ ಪೂರ್ಣಗೊಂಡಿಲ್ಲ ಇದರಿಂದ ವಾಹನ ಸವಾರರು, ವ್ಯಾಪಾರಸ್ಥರು ತೊಂದರೆ ಅನುಭವಿಸುವಂತಾಗಿದೆ.

ಸಂಚಾರ ದಟ್ಟಣೆ ಕಡಿಮೆ ಮಾಡುವುದು ರಸ್ತೆ ಸುರಕ್ಷತೆಯನ್ನು ಸುಧಾರಿಸುವುದು ಆರ್ಥಿಕ ನಂಪರ್ಕವನ್ನು ಬಲಪಡಿಸುವ ಉದ್ದೇಶದಿಂದ ಯಲಗಲದಿನ್ನಿ ಹಳ್ಳದಿಂದ ಲಿಂಗಸುಗೂರು ಪಟ್ಟಣದ ಬೆಂಗಳೂರು ಬೈಪಾನ್ ರಸ್ತೆವರೆಗೆ ಚತುಷ್ಪದ ಹೆದ್ದಾರಿ ನಿರ್ಮಾಣಕ್ಕಾಗಿ ಹೆದ್ದಾರಿ ಮಧ್ಯದಿಂದ 75 ಮೀಟರ್ ವರೆಗೆ ಅಗಲೀಕರಣ ಮಾಡಬೇಕೆಂಬ ನಿಯಮ ಇದ್ದರೂ ಅಧಿಕಾರಿಗಳು ರಾಜಕೀಯ ವ್ಯಕ್ತಿಗಳ ಒತ್ತಡಕ್ಕೆ ಮಣಿದು 75 ಮೀಟ-ರೆಗೆ ಗುರುತು ಮಾಡಿದ್ದರೂ ಕಟ್ಟಡಗಳನ್ನು ತೆರವುಗೊಳಿಸದೇ ಹಾಗೇ ಬಿಟ್ಟಿದ್ದಾರೆ' ಇದರಿಂದ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ.

ಆಸ್ಪತ್ರೆ ಮುಂದುಗಡೆ ಸಾರ್ವಜನಿಕರು ವಾಹನಗಳನ್ನು ಪಾರ್ಕ್ ಮಾಡುವುದರಿಂದ ಮಸ್ಕಿ ಬೈಪಾಸ್ ರಸ್ತೆಯಲ್ಲಿರುವ ಹರ್ಷವರ್ಧನ ಆಸ್ಪತ್ರೆ, ಬುದ್ದಿನ್ನಿ ಆಸ್ಪತ್ರೆ, ಮುಂತಾದ ಆಸ್ಪತ್ರೆಗಳಿಗೆ ರೋಗಿಗಳನ್ನು ಸಾಗಿಸಲು ಅಂಬ್ಯುಲೆನ್ಸನ್ನು ಆಸ್ಪತ್ರೆವರೆಗೆ ತೆಗೆದುಕೊಂಡು ಹೋಗಲು, ಮತ್ತು ಸಾರ್ವಜನಿಕರಿಗೆ ತಿರುಗಾಡಲು ತೆ-ಊಂದರೆಯಾಗಿತ್ತಿದೆ. ಅಪಘಾತಗಳ ಸಂ-ಖ್ಯೆ ಹೆಚ್ಚಾಗಿದೆ ಹೆದ್ದಾರಿಯಿಂದ ಹಳೆಯ ಕೋರ್ಟಿಗೆ, ಸಹಾಯಕ ಆಯುಕ್ತರ ಕಚೇರಿಗೆ ತೆರಳುವ ಮಾರ್ಗಕ್ಕೆ ಡೈವರ್ಶನನ್ನು ನೀಡಿದ್ದು ಅವೈಜ್ಞಾನಿಕವಾಗಿದೆ. ಡೈವರ್ಶನನ್ನು ನಿಯಮದ ಪ್ರಕಾರ ಮಾಡಿಲ್ಲ. ಇದರಿಂದ ಅನಾಹುತ ಹೆಚ್ಚಾಗಿ ನಡೆಯುತ್ತಿವೆ. ಯಲಗಲದಿನ್ನಿ, ಕಾಳಿಕಾದೇವಿ ದೇವಸ್ಥಾನ ಬಳಿ ಹಾಗೂ ಕಸಬಾಲಿಂಗಸುಗೂರು ಗ್ರಾಮದ ಹೆದ್ದಾರಿ ಕಾಮಗಾರಿ ನೆನೆಗುದಿಗೆ ಬಿದ್ದಿದ್ದರಿಂದ ರಸ್ತೆಯಲ್ಲಿ ದೊಡ್ಡ ದೊಡ್ಡ ಗುಂಡಿಗಳು ಬಿದ್ದು ಶಾಲಾ ವಾಹನ, ಬೈಕ್ ಸವಾರರು, ವಾಹನ ಸವಾರರು ಅಧಿಕಾರಿಗಳಿಗೆ ಹಿಡಿಶಾಪ ಹಾಕುವಂತಾಗಿದೆ. ಪ್ರಸ್ತುತ ಹೆದ್ದಾರಿ ಪಟ್ಟಣದ ಜನತೆ ಪಾಲಿಗೆ ಜೀವ ಹಿಂಡುವ ಹೆಮ್ಮಾರಿಯಾಗಿದೆ. ಕೂಡಲೇ ನ್ಯಾಯಾಲಯದ ಪ್ರಕರಣ ಇತ್ಯರ್ಥ್ಯಗೊಳಿಸಿ ಕಟ್ಟಡಗಳನ್ನು ತೆರವುಗೊಳಿಸಬೇಕು ಹಾಗೂ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿ ಮುಗಿಸಬೇಕು. ಹೆದ್ದಾರಿಯಿಂದ ಡೈವರ್ಶನ್ ನೀಡಿದ್ದನ್ನು ರದ್ದುಗೊಳಿಸಿ ವೈಜ್ಞಾನಿಕವಾಗಿ ಮಾಡಬೇಕು. ಹೆದ್ದಾರಿಗುಂಟ ಹಾಕಲಾಗಿರುವ ಬೀದಿ ದೀಪಗಳು ಉರಿಯುತ್ತಿಲ್ಲ. ದೀಪ ಅಳವಡಿಸಿ ಆರು ತಿಂಗಳು ಕಳೆದಿಲ್ಲ ಉರಿಯುತ್ತಿಲ್ಲ ಹಾಗೂ ಪಟ್ಟಣದ ಬಸ್ ನಿಲ್ದಾಣ ವೃತ್ತದಲ್ಲೂ ಹೈಮಾಸ್ ವಿದ್ಯುತ್ ದೀಪ ಉರಿಯುತ್ತಿಲ್ಲ. ಕಳೆಪಮಟ್ಟದ ವಿದ್ಯುತ್ ದೀಪಗಳನ್ನು ಅಳವಡಿಸಿದ ಗುತ್ತಿಗೆದಾರರ ವಿರುದ್ಧ ಕ್ರಮ ಜರಗಿಸಬೇಕು. ಕೂಡಲೇ ಹೆದ್ದಾರಿಗೆ ಅಡ್ಡಿಯಾಗಿರುವ ಕಟ್ಟಡಗಳನ್ನು ತೆರವುಗೊಳಿಸಬೇಕು ಹಾಗೂ ಹೆದ್ದಾರಿ ಕಾಮಗಾರಿ ಪೂರ್ಣಗೊಳಿಸಬೇಕೆಂದು ರಾಷ್ಟ್ರೀಯ ಹೆದ್ದಾರಿ ಉಪವಿಭಾಗದ ಎಇಇಗೆ ಕಟ್ಟುನಿಟ್ಟಿನಿಂದ ಸೂಚನೆ ನೀಡಬೇಕು, ಮತ್ತೆ ಕಾಮಗಾರಿ ವಿಳಂಬ ಮಾಡಿದರೆ ಹೆದ್ದಾರಿ ಬಂದ್ ಮಾಡಿ ಪ್ರತಿಭಟನೆ ಮಾಡಲಾಗುವುದು. ಎಂದು ನಮ್ಮ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಸಹಾಯಕ ಆಯುಕ್ತರು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ತಾಲೂಕ ಘಟಕ ಅಧ್ಯಕ್ಷ ತಿಮ್ಮಾರೆಡ್ಡಿ ಮುನ್ನೂರು, ರಮೇಶ್ ಗುತ್ತಿಗೆದಾರ, ಮೌನೇಶ್ ರೆಡ್ಡಿ ಮುನ್ನೂರು, ಅಶೋಕ ಗಸ್ತಿ, ದೇವರಾಜ ಉಪ್ಪಾರ , ಬಸವರಾಜ,ಕ್ಕೇರಿ,ರವಿಗೋರಬಾಳ,ಅಮೀರ್, ಪ್ರವೀಣ್ ಕುಮಾರ್, ಶ್ರೀ ಕಾಂತ ರೆಡ್ಡಿ, ರಮೇಶ್, ಮಂಜು , ಪ್ರಶಾಂತ್ ಸೇರಿದಂತೆ ಉಪಸ್ಥಿತರಿದ್ದರು.

# ಅರ್ಹ ಫಲಾನುಭವಿಗಳು ಸರ್ಕಾರದ ಸೌಲಭ್ಯ ಪಡೆಯಿರಿ: ಸಂಜಯ್ ಜಾಗೀರದಾರ್



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 28 -ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಜಿಲ್ಲೆಯ ಪ್ರತಿಯೊಬ್ಬ ಅರ್ಹ ಫಲಾನುಭವಿಗಳು ಪಡೆಯಬೇಕೆಂದು ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಾದ ಸಂಜಯ್ ಜಾಗೀರದಾರ್ ಅವರು ಹೇಳಿದರು.

ಮೇ.28ರ ಬುಧವಾರದಂದು ನಗರದ ಪತ್ರಿಕಾಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ರಾಜ್ಯದ ವಿವಿಧ ನಿಗಮಗಳಿಂದ ಅನೇಕ ಸೇವೆ, ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಅಲ್ಪಸಂಖ್ಯಾತರ ಕಚೇರಿ ಸೇರಿದಂತೆ ನಿಗಮಕ್ಕೆ ಭೇಟಿ ನೀಡಿ ಯೋಜನೆ, ಸೌಲಭ್ಯಗಳ ಕುರಿತು ಮಾಹಿತಿ ಪಡೆಯಬೇಕು. ಅವುಗಳ ಸದುಪಯೋಗ ಪಡೆದುಕೊಳ್ಳಬೇಕು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿವಿಧ ಸೌಲಭ್ಯ ಯೋಜನೆಗಳ ಬಗ್ಗೆ ಕರಪತ್ರಗಳನ್ನು ಹಂಚಿ ಫಲಾನುಭವಿಗಳಿಗೆ ಮಾಹಿತಿ ನೀಡುವಂತೆ ಕ್ರಮವಹಿಸಲು ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಿದ್ದೇನೆ ಎಂದು ಅವರು ಹೇಳಿದರು.

371 (ಜೆ) ಜಾರಿ ಮುಂಚೆ ಈ ಭಾಗದಲ್ಲಿ ವೈದ್ಯರ ಸಂಖ್ಯೆ ಕಡಿಮೆಯಿದ್ದು, 371(ಜೆ) ಜಾರಿ ನಂತರ ವೈದ್ಯರು ಸೇರಿದಂತೆ ಇಂಜಿನಿಯರಗಳ ಸಂಖ್ಯೆ ಹೆಚ್ಚಳವಾಗಿದೆ. ಇದಕ್ಕೆ ಮುಖ್ಯ ಕಾರಣ ಈ ಭಾಗದ ಹಿರಿಯ ರಾಜಕಾರಣಿಯಾದ ಮಲ್ಲಿಕಾರ್ಜುನ ಖರ್ಗೆ ಅವರಾಗಿದ್ದಾರೆ ಎಂದು ಹೇಳಿದರು.

ನಿಗಮದ ಕೈಪಿಡಿಯಲ್ಲಿ ಯೋಜನೆ ಕುರಿತು ಮಾಹಿತಿ ಒದಗಿಸಲಾಗಿದ್ದು ಪ್ರತಿಯೊಬ್ಬರೂ ಕೈಪಿಡಿ ಓದಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಬೇಕು. ಉನ್ನತ ಶಿಕ್ಷಣ ಪಡೆದು ಐಎಎಸ್ ಐಪಿಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು. ಶಿಕ್ಷಣಕ್ಕಾಗಿ ನಿಗಮದಿಂದ ಅನೇಕ ಸೌಲಭ್ಯಗಳನ್ನು ಒದಗಿಸಲಾಗುತ್ತಿದ್ದು, ಒಟ್ಟು 30 ಲಕ್ಷ ರೂಪಾಯಿಗಳಷ್ಟು ಸಹಾಯಧನವನ್ನು ವಿದ್ಯಾಭ್ಯಾಸಕ್ಕಾಗಿ ನೀಡಲಾಗುತ್ತಿದೆ. ಪಿಎಸ್‌ಐ ತರಬೇತಿ ಸಹ ನೀಡಲಾಗುತ್ತಿದೆ. ಅವುಗಳನ್ನು ಅರ್ಹ ಫಲಾನುಭವಿಗಳು ಬಳಸಿಕೊಳ್ಳಬೇಕು ಎಂದು ಹೇಳಿದರು.

ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದಿಂದ ಶಿಕ್ಷಣ ಕ್ಷೇತ್ರಕ್ಕೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಶೇ.75ರಷ್ಟು ಫಲಿತಾಂಶ ಪಡೆದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತದೆ ಎಂದು ಹೇಳಿದರು.

ಈ ವೇಳೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿಗಳಾದ ಸಂಗಮೇಶ್ ಅವರು ಮಾತನಾಡಿ, ಜಿಲ್ಲೆಯ ವಸತಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟ ಶಿಕ್ಷಣ ಜೊತೆಗೆ ಊಟ ಉಪಹಾರವನ್ನು ನೀಡಲಾಗುತ್ತಿದ್ದು, ಕೆಲವೊಂದು ವಸತಿ ಶಾಲೆಯಲ್ಲಿ ಕಾಟ್ ಗಳ ಕೊರತೆ ಇದ್ದು ಅದರ ಕುರಿತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮಾಹಿತಿ ಕೇಳಿದ್ದಾರೆ. ಶೀಘ್ರದಲ್ಲೇ ಮುಂಬರುವ ದಿನಗಳಲ್ಲಿ ಸಮಸ್ಯೆಯನ್ನು ಪರಿಹರಿಸಲಾಗುತ್ತದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ರಾಯಚೂರು ತಾಲೂಕು ವಿಸ್ತರಣಾಧಿಕಾರಿ ನರಸಿಂಹ ನಾಯಕ ಸೇರಿದಂತೆ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧಿಕಾರಿಗಳು ಇದ್ದರು.

# ಐಇಸಿ ಚಟುವಟಿಕೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 28- ಇಲ್ಲಿನ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯ 35 ವಾರ್ಡಗಳಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ನಡಿ 3 ವರ್ಷಗಳ ಅವಧಿಗೆ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ಡೇ-ನಲ್ಮ್ ಯೋಜನೆಯಡಿ ನೋಂದಾಯಿತ ಎಸ್‌ಹೆಚ್‌ಜಿ ಅರ್ಹ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಎಸ್‌ಹೆಚ್‌ಜಿ ಅರ್ಹ ಸದಸ್ಯರು ಸ್ವ-ಸಹಾಯ ಗುಂಪಿನ ಸದಸ್ಯರು ಆಗಿರಬೇಕು. (ಗುಂಪಿನ ಪಾಸ್ ಬುಕ್,) ಆಧಾರ ಕಾರ್ಡ್, ಗುರುತಿನ ಚೀಟಿ, ರೇಷನ್ ಕಾರ್ಡ್, 10ನೇ ತರಗತಿಯಲ್ಲಿ ಪಾಸ್ ಆಗಿರಬೇಕು, ಡೇ-ನಲ್ಮ್ ಎಂ.ಐ.ಎಸ್ ಎಸ್‌ಹೆಚ್‌ಜಿ ನೋಂದಾಣಿಯಾದವರು ಅರ್ಜಿ ನಮೂನೆಯನ್ನು ಕಚೇರಿಯ ಆರೋಗ್ಯ ಶಾಖೆ ಅಥವಾ ಡೇ-ನಲ್ಮ್ ಶಾಖೆಯಿಂದ ಪಡೆದುಕೊಂಡು ಜೂನ್ 29ರ ಸಂಜೆ 5 ಗಂಟೆಯೊಳಗಾಗಿ ಮಹಾನಗರ ಪಾಲಿಕೆ ಜೋನಲ್ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ೬೮ ಜನರ ಉಚಿತ ನೇತ್ರ ತಪಾಸಣೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 28 : ಹುಮನಾಬಾದ್ ಪಟ್ಟಣದ ಹಣಕುಣಿ ರಸ್ತೆಯಲ್ಲಿ ಇರುವ ಮಾಣಿಕಪ್ರಭು ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ಸೋಮವಾರ ನಡೆದ ಶಿಬಿರದಲ್ಲಿ 68 ಜನರ ಉಚಿತ ನೇತ್ರ ತಪಾಸಣೆ ನಡೆಸಲಾಯಿತು.

ಕಣ್ಣಿನಲ್ಲಿ ಪೊರೆ ಇರುವ 25 ಜನರಿಗೆ ಅಗತ್ಯ ಚಿಕಿತ್ಸೆಗೆ ಸಲಹೆ ನೀಡಲಾಯಿತು. 28 ಜನರಿಗೆಕನ್ನಡವಿತರಿಸಲಾಯಿತು.

ಕಾಲೇಜಿನ ಪ್ರಾಚಾರ್ಯ ಉಲ್ಲಾಸ ಲೊಡ್ಡ, ಧನ್ವಂತರಿ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಡಾ. ಸಂತೋಷಕುಮಾರ ಅಣ್ಣಪ್ಪನವರ್ ಮತ್ತಿತರರು ಇದ್ದರು. ಯುತ್ ಫಾರ್ ಸೇವಾ,ಧನ್ವಂತರಿ ಎಜುಕೇಷನ್ ಟ್ರಸ್ಟ್, ಆದಿತ್ಯ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್, ಬೀದರನ ಇನ್ಫಿನಿಟಿ ವಿಷನ್ ಐ ಕೇರ್ ಆಸ್ಪತ್ರೆಹಾಗೂ ಮಾಣಿಕಪ್ರಭು ಪ್ಯಾರಾ ಮೆಡಿಕಲ್ ಕಾಲೇಜು ಸಹಯೋಗದಲ್ಲಿ ಶಿಬಿರ ಹಮ್ಮಿಕೊಳ್ಳಲಾಗಿತ್ತು.

# ಪೌರ ಕಾರ್ಮಿಕರ ಮುಷ್ಕರ ಸ್ಥಳದಿಂದ ಮುಖ್ಯಮಂತ್ರಿಗೆ ಕರೆ ಮಾಡಿದ ಸಚಿವ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 28 : ಸೇವೆ ಕಾಯಂಗೊಳಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಪೌರಕಾರ್ಮಿಕರ ಸಂಘದವರು ಇಲ್ಲಿನ ನಗರಸಭೆ ಕಚೇರಿ ಎದುರು ನಡೆಸುತ್ತಿರುವ ಅನಿರ್ದಿಷ್ಟಾವಧಿ ಮುಷ್ಕರ ಸ್ಥಳಕ್ಕೆ ಪೌರಾಡಳಿತ ಸಚಿವ ರಹೀಂ ಖಾನ್ ಅವರು ಮಂಗಳವಾರ ಭೇಟಿ ನೀಡಿದರು.

ಪೌರ ಕಾರ್ಮಿಕರ ಅಹವಾಲು ಸ್ವೀಕರಿಸಿದ ಅವರು, ಸ್ಥಳದಿಂದಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕರೆ ಮಾಡಿ, ಮಾತನಾಡಿದರು.

ಆದಷ್ಟು ಶೀಘ್ರ ಎಲ್ಲ ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿದರು.

ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಸಚಿವರು, ಪೌರ ಕಾರ್ಮಿಕರು ಅನೇಕ ವರ್ಷಗಳಿಂದ ಹೊರಗುತ್ತಿಗೆ ಮೇಲೆ ಕೆಲಸ ನಿರ್ವಹಿಸುತ್ತಿದ್ದು, ಅವರ ಕೆಲಸ ಕಾಯಂಗೊಳಿಸಬೇಕು. ಪ್ರತಿ ತಿಂಗಳ ವೇತನವನ್ನು ಅವರ ಖಾತೆಗೆ ಜಮೆ ಮಾಡಬೇಕೆಂದು ಎರಡು ಪ್ರಮುಖವಾದ ಬೇಡಿಕೆಗಳನ್ನು ಇಟ್ಟಿದ್ದಾರೆ. ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕರೆ ಮಾಡಿ ಚರ್ಚಿಸಿದ್ದೇನೆ. ಶೀಘ್ರದಲ್ಲಿ ಈ ಸಂಬಂಧ ಸಭೆ ನಡೆಸಿ, ಅವರ ಸಮಸ್ಯೆ ಪರಿಹರಿಸಲು ಕ್ರಮ ಕೈಗೊಳ್ಳುವ ಭರವಸೆ ಕೊಟ್ಟಿದ್ದಾರೆ. ಈ ವಿಷಯ ನನ್ನ ಖಾತೆಯ ಜೊತೆಗೆ ನಗರಾಭಿವೃದ್ಧಿ ಖಾತೆ-ಗೂ ಬರುತ್ತದೆ. ಈ ಬಗ್ಗೆ ಸಂಬಂಧಿಸಿದ ಎಲ್ಲ ಸಚಿವರು ಸಿಎಂ ಜೊತೆ ಸಭೆ ನಡೆಸಿ, ಪರಿಹಾರ ಕಂಡುಕೊಳ್ಳುತ್ತೇವೆ ಎಂದು ತಿಳಿಸಿದರು.

ಶಾಸಕರಾದ ಡಾ. ಶೈಲೇಂದ್ರ ಕೆ. ಬೆಲ್ದಾಳೆ, ಡಾ. ಸಿದ್ದಲಿಂಗಪ್ಪ ಪಾಟೀಲ, ನಗರಸಭೆ ಅಧ್ಯಕ್ಷ ಮುಹಮ್ಮದ್ ಗೌಸ್ ಮತ್ತಿತರರು ಹಾಜರಿದ್ದರು.

## ಅತಿಥಿ ಶಿಕ್ಷಕ ಉಪನ್ಯಾಸಕರುಗಳ ನೇಮಕಾತಿಗಾಗಿ

# ಸಾಮಾನ್ಯ ಪ್ರವೇಶ ಪರೀಕ್ಷೆ ಜೂ.1ಕ್ಕೆ

ಬೀದರ:ಮೇ.28:ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಾಲೇಜು ಹಾಗೂ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ-ಕಾಲೇಜು ಹಾಗೂ ಮೌಲನಾ ಆಜಾದ ಮಾದರಿ ಶಾಲೆಗಳಲ್ಲಿ 2025-26ನೇ ಸಾಲಿನಲ್ಲಿ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕ-ಉಪನ್ಯಾಸಕರುಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ದಿನಾಂಕ:01-06-2025ರಂದು ಬೆಳಗ್ಗೆ 11:00 ಗಂಟೆಯಿಂದ ಮದ್ಯಾಹ್ನ1:00ಗಂಟೆಯವರೆಗೆ ಸರಕಾರಿ ಪದವಿ ಪೂರ್ವ ಕನ್ಯಾ ಕಾಲೇಜು ಚಿತ್ತಾಖಾನಾ ಬೀದರ, ಸಿದ್ದಾರ್ಥ ಸಂಯುಕ್ತ ಪದವಿ ಪೂರ್ವ ಶಿಕ್ಷಣ ಸಂಸ್ಥೆ ಜನವಾಡ ರಸ್ತೆ ಬೀದರ ಹಾಗೂ ವಿದ್ಯಾರಣ್ಯ ಪ್ರೌಢಶಾಲೆ ಡಾ.ಬಿ.ಆರ್. ಅಂಬೇಡ್ಕರ್ ವೃತ್ತ ಜನವಾಡ ರಸ್ತೆ ಶಾಲೆಗಳಲ್ಲಿ ಸಾಮಾನ್ಯಪ್ರವೇಶಪರೀಕ್ಷೆಯನ್ನು ನಡೆಸಲಾಗುತ್ತಿದೆ ಎಂದು ಬೀದರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಭ್ಯರ್ಥಿಗಳು ಪ್ರವೇಶಪತ್ರವನ್ನು ಜಿಲ್ಲಾ ಕಛೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಬೀದರ ಇಲ್ಲಿ ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ೬ನೇ ತರಗತಿ ಪ್ರವೇಶಕ್ಕೆ ಸೀಟು ಹಂಚಿಕೆ ಮೇ.೩೦ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.28:ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು ಹಾಗೂ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ 2025-26ನೇ ಸಾಲಿನ 6ನೇ ತರಗತಿ ಪ್ರವೇಶಾತಿ ಪರೀಕ್ಷೆಯನ್ನು ಈಗಾಗಲೆ ನಡೆಸಿದ್ದು, ಸದರಿ ಪರೀಕ್ಷೆಯಲ್ಲಿ ಉತ್ತೀರ್ಣ ಹೊಂದಿರುವ ವಿದ್ಯಾರ್ಥಿಗಳ ಪಟ್ಟಿಯನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಹಾಗೂ ಜಿಲ್ಲಾ ಕಛೇರಿಯ ಸೂಚನಾ ಫಲಕ ದಲ್ಲಿಯೂ ಪ್ರಕಟಿಸಲಾಗಿರುತ್ತದೆ. ಕಾರಣ ಆಯ್ಕೆಪಟ್ಟಿಯಲ್ಲಿರುವ ವಿದ್ಯಾರ್ಥಿಗಳಿಗೆ ಕೌನ್ಸಲಿಂಗ್ ಮೂಲಕ ಸೀಟು ಹಂಚಿಕೆ ಮಾಡಲು ದಿನಾಂಕ:30-05-2025 ರಂದು ಬೆಳಗ್ಗೆ 8:00 ಗಂಟೆಗೆ ಜಿಲ್ಲಾ ಕಛೇರಿ ಸಭಾಂಗಣ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ ಭವನ ಚಿಕ್ಕಪೇಟ ರಿಂಗ್ ರಸ್ತೆ, ಬಂಜಾರಾ ಭವನ ಹತ್ತಿರ ಬೀದರ ಇಲ್ಲಿಗೆ ಹಾಜರಾಗಲು ಬೀದರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಒಳಮೀಸಲಾತಿ ಜಾತಿ ಜನಗಣತಿಯಲ್ಲಿ ಬೇಡಜಂಗಮ ಎಂದು ಧೈರ್ಯದಿಂದ ಬರೆಸಿ: ಕಲ್ಯಾಣ ಶ್ರೀಗಳು

ಮಲ್ಲಮ್ಮ ನುಡಿ ವಾರ್ತೆ

ಬೀದದ.ಮೇ.28:ಸರ್ವೋಚ್ಛ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಹೆಚ್. ಎನ್. ನಾಗಮೋಹನದಾಸ್ ಅವರ ಏಕಸದಸ್ಯ ಪೀಠದ ಆಯೋಗವು ಒಳಮೀಸಲಾತಿಗಾಗಿ ಜಾತಿ ಜನಗಣತಿ ಮಾಡಲು ಆದೇಶಿಸಿದ್ದು ಸ್ವಾಗತಾರ್ಹ ಕ್ರಮ ಅದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯನವರಿಗೆ ಸಮಸ್ತ ಬೇಡಜಂಗಮ ಸಮಾಜದ ವತಿಯಿಂದ ಅಭಿನಂದಿಸಲಾಗುವುದು. ಒಳಮೀಸಲಾತಿ ಸಮೀಕ್ಷೆಗಾಗಿ ತಮ್ಮ ಮನೆಗೆ ಬರುವ ಅಧಿಕಾರಿಗಳಿಗೆ ಸ್ಪಷ್ಟಮಾಹಿತಿ ನೀಡಿಕಡ್ಡಾಯವಾಗಿ ಬೇಡಜಂಗಮ ಎಂದೇ ಧೈರ್ಯದಿಂದ ಹಾಗೂ ನಿರರ್ಗಳವಾಗಿ ಬರೆಸಬೇಕೆಂದು ಬಳ್ಳಾರಿಯ ಕಮ್ಮರಚೇಡು ಕಲ್ಯಾಣಸ್ವಾಮಿ ಸಂಸ್ಥಾನ ಮಠದ ಪೂಜ್ಯಶ್ರೀ ಕಲ್ಯಾಣ ಮಹಾಸ್ವಾಮಿಗಳು ಕರೆ ನೀಡಿದರು.



ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಬೇಡಜಂಗಮರು ಯಾವತ್ತೂ ಉದಾರವಾಗಿ ದಾನಮಾಡುವರೇ ಹೊರತು ಬೇರೆಯವರ ಹಕ್ಕು ಕಸಿದುಕೊಳ್ಳುವುದಿಲ್ಲ. ಆದರೆ ಇತ್ತಿಚಿಗೆ ಎಐಸಿಸಿ ಅಧ್ಯಕ್ಷರು ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆಯವರು ವಿಜಯನಗರದಲ್ಲಿ ಇತ್ತಿಚಿಗೆ ಜರುಗಿದ ಕರ್ನಾಟಕ ಸರ್ಕಾರದ ಸಾಧನಾ ಸಂಕಲ್ಪ ಕಾರ್ಯಕ್ರಮದಲ್ಲಿ "500 ಜನರಿದ್ದ ಬೇಡಜಂಗಮರು 5 ಲಕ್ಷ ಹೇಗಾದರು?" ಎಂದು ಆಶ್ಚರ್ಯದಿಂದ ಕೇಳುತ್ತಿದ್ದಾರೆ. 1947ರಲ್ಲಿ ದೇಶ ಸ್ವಾತಂತ್ರ ??ವಾದಾಗ ಬರೀ 35 ಕೋಟಿ ಜನರಿದ್ದು ಈಗ 150 ಕೋಟಿಗೂ ಅಧಿಕ ಜನಸಂಖ್ಯೆ ಹೊಂದಿದೆ. ಹೀಗಾದಾಗ 500 ಜನರಿದ್ದ ಬೇಡಜಂಗಮರು 5 ಲಕ್ಷ ಆಗುವುದರಲ್ಲಿ ಆಶ್ಚರ್ಯವೇನಿದೆ? ಈ ಸಾಮಾನ್ಯ ಜ್ಞಾನವೂ ಡಾ. ಖರ್ಗೆಯವರಿಗೆ ಬರಲಿಲ್ಲವೇ? ಎಂದು ಪ್ರಶ್ನಿಸಿದರು.

ಎರಡು ವರ್ಷಗಳ ಹಿಂದೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ 297 ದಿನಗಳ ಕಾಲ ಸುದೀರ್ಘವಾಗಿ ಪರಿಶಿಷ್ಟಜಾತಿಯ 109 ಜಾತಿಗಳಿಗಾಗಿ, ಅವರ ಹಕ್ಕಿಗಾಗಿ ಧರಣಿ ಸತ್ಯಾಗ್ರಹ ನಡೆಸಿದ್ದೇವೆ. ಆದರೆ ಡಾ. ಖರ್ಗೆಯವರು ತಮ್ಮ ಸಮಾಜದ ಯಾರೊಬ್ಬರನ್ನೂ ಬೆಳೆಸದೆ ತಮ್ಮ ಕುಟುಂಬಸ್ಥರನ್ನು ಮಾತ್ರ ಬೆಳೆಸಿ ಸ್ವಜಾತಿಯವರನ್ನೇ ಕಡೆಗಣಿಸಿರುವುದು ಜಗಜ್ಜಾಹಿರಾಗಿದೆ. ಡಾ. ಸೂರ್ಯನಾಥ ಕಾಮತ್ ಅವರ ನೇತೃತ್ವದಲ್ಲಿ ಬೇಡಜಂಗಮರ ಕುರಿತು ಕುಲಶಾಸ್ತ್ರೀಯ ಅಧ್ಯಯನ ನಡೆಸಿ ವರದಿಯನ್ನು ಸಿದ್ಧಪಡಿಸಿದರು. ಈ ವರದಿಯಲ್ಲಿ ಬೇಡಜಂಗಮರು ಲಿಂಗಾಯತ ಸಮುದಾಯದವರು. ಪಂಚಪೀಠಗಳ ಪರಂಪರೆಗೆ ಸಂಬಂಧಿಸಿದವರು. ಇವರಿಗೆ ಅಯ್ಯ, ಸ್ವಾಮಿ, ಹಿರೇಮಠ, ಜಂಗಮ ಎಂದು ಕರೆಯುತ್ತಾರೆ. ವೀರಶೈವ ಲಿಂಗಾಯತ ಮತಪಂಥದ ಎಲ್ಲಾ ಜನರ ಹುಟ್ಟಿನಿಂದ ಸಾವಿನವರೆಗಿನ ಎಲ್ಲಾ ಧಾರ್ಮಿಕ ಚಟುವಟಿಕೆಗಳನ್ನು ಬೇಡಜಂಗಮರೇ ನಡೆಸಿಕೊಡುತ್ತಾರೆ ಎಂದು ವರದಿ ತಿಳಿಸಿದೆ. ಹೀಗಿರುವಾಗ ಖರ್ಗೆಯವರು ಆಹಾರ ಹಾಲಿ ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಹಾಗೂ ಮಾಜಿ ಸಚಿವ ಹೆಚ್. ಆಂಜನೇಯ ಈ ಮೂವರು ಬೇಡಜಂಗಮರ ಕುರಿತು ಅವಹೇಳನಕಾರಿಯಾಗಿ ಮಾಂಸಹಾರಿಗಳು ಎಂದೆಲ್ಲಾ ಅಸಂಬಂಧ್ಧ ಹೇಳಿಕೆ ನೀಡಿ ನಮ್ಮ ಸಮುದಾಯಕ್ಕೆ ಅವಮಾನಿಸಿದ್ದಾರೆ. ಡಾ. ಅಂಬೇಡ್ಕರ್ ಅವರು ಕೇವಲ ಮೀಸಲಾತಿ ನೀಡಿದ್ದು ಖರ್ಗೆ ಕುಟುಂಬಕ್ಕಾ? ಎಂದು ಪ್ರಶ್ನಿಸಿದರಲ್ಲದೆ ಮಹಾರಾಷ್ಟ್ರದ ಲಾತೂರ, ಉಮರ್ಗಾದಲ್ಲಿ ತಮ್ಮ ಹಾಗೂ ಮಿತ್ರಪಕ್ಷದ ಬೇಡಜಂಗಮ ಅಭ್ಯರ್ಥಿಗಳಿಗೆ ಟಿಕೇಟ್ ನೀಡಿ ಗೆಲ್ಲಿಸಿದ್ದೀರಿ. ಆದರೆ ಕರ್ನಾಟಕದಲ್ಲಿ ಬೇಡಜಂಗಮರನ್ನು ಅಷ್ಟೊಂದು ಕಠೋರವಾಗಿ ವಿರೋಧಿಸುತ್ತಿರುವುದು ನಿಮ್ಮ ಘನತೆಗೆ ತಕ್ಕುದಲ್ಲ. ಬಹುಶಃ ಖರ್ಗೆಯವರು ಮತಿಭ್ರಮಣೆಗೆ ಒಳಗೊಂಡಿದ್ದಾರೆ ಎಂದು ನಮಗೆ ಅನಿಸುತಿದೆ ಎಂದರು.

ಮಹಾರಾಷ್ಟ್ರದ ಶಿರಡಿಯಲ್ಲಿ ಬೀದರ ಜಿಲ್ಲೆಯ ರವೀಂದ್ರ ಸ್ವಾಮಿಯವರ ಉಮೇದುವಾರಿಕೆ ಸ್ವೀಕೃತಗೊಂಡಿದೆ. ಆದ-ರೆ ಕಲಬುರಗಿಯಲ್ಲಿ ಅವರ ಉಮೇದುವಾರಿಕೆ ತಿರಸ್ಕೃತವಾಗುವಂತೆ ಪಿತೂರಿ ನಡೆಸಿದವರು ಯಾರೆಂಬುದು ಗುಟ್ಟಾಗಿ ಉಳಿದಿಲ್ಲ ಎಂದರು.

ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಒಳಮೀಸಲಾತಿಗಾಗಿ ಸಮೀಕ್ಷೆ ನಡೆಸಲು ಆಯೋಗ ರಚಿಸಿ ಬೇಡಜಂಗಮರನ್ನು ವಿರೋಧಿಸುವವರಿಗೆ ಒಳ್ಳೆಯ ಪಾಠಕಲಿಸಿದ್ದಾರೆ. ಮುಂದೆಯೂ ಸಹ ಯಾರೊಬ್ಬರ ಅಸಂಬದ್ಧ ಹೇಳಿಕೆಗಳಿಗೆ ಕಿವಿಗೊಡಬಾರದು. ಡಾ. ಮಲ್ಲಿಕಾರ್ಜುನ ಖರ್ಗೆ ಹಾಗೂ ಹೆಚ್. ಆಂಜನೇಯ ಅವರು ಸಂವಿಧಾನವನ್ನು ಸರಿಯಾಗಿ ಓದಬೇಕಿದೆ. ಡಾ. ಅಂಬೇಡ್ಕರ್ ಅವರ ಆಶಯದಂತೆ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಕ್ಷೇತ್ರದಲ್ಲಿ ದುರ್ಬಲರಾಗಿದ್ದರೆ ಅಂಥವರಿಗೆ ಮೀಸಲಾತಿ ನೀಡಬೇಕೆಂದು ಹೇಳಿರುತ್ತಾರೆ. ಆದರೆ ಡಾ. ಮಲ್ಲಿಕಾರ್ಜುನ ಖರ್ಗೆಯವರು ಸುಮಾರು ಐವತ್ತು ವರ್ಷಗಳಿಂದ ಅಧಿಕಾರ ಅನುಭವಿಸುತ್ತಿದ್ದಾರೆ. ನಿಮಗೆ ದಲಿತರ ಬಗ್ಗೆ ನಿಜವಾಗಿಯೂ ಕಳಕಳಿ ಇದ್ದರೆ ಅಧಿಕಾರವಂಚಿತ ದಲಿತ ಮುಖಂಡರಿಗೆ ಅಧಿಕಾರ ಬಿಟ್ಟುಕೊಡಿ ನೋಡೋಣ ಎಂದು ಸವಾಲೆಸೆದರು.

ಮೆಹಕರ್, ತಡೋಳಾ ಹಾಗೂ ಡೋಣಗಾಪುರ ಪೂಜ್ಯರಾದ ಷ.ಬ್ರ. ರಾಜೇಶ್ವರ ಶಿವಾಚಾರ್ಯರು ಮಾತನಾಡಿ ನಿಜಾಮನ ಕಾಲದಲ್ಲಿ ಬೇಡಜಂಗಮರಿಗೆ ಗದಾಗಿರ್ ಎಂದರೆ ಭಿಕ್ಷಾಟನೆ ಮಾಡುವವರು ಎಂದು ಕರೆಯುತ್ತಿದ್ದರು. ಬೇಡುವ ಜನಾಂಗವನ್ನೇ ಬೇಡಜಂಗಮ ಎಂದು 1920ರಲ್ಲಿ ಸಿರಾಜುದ್ದಿನ್ ಅವರು ತಮ್ಮ ಪುಸ್ತಕದಲ್ಲಿ ವಿವರವಾಗಿ ಉಲ್ಲೇಖಿಸಿದ್ದಾರೆ. ಬೇಡಜಂಗಮರು ವೀರಶೈವ ಸಮಾಜದವರು ಹುಟ್ಟಿನಿಂದ ಲಿಂಗದೀಕ್ಷೆ ಮಾಡಿಸುವುದು, ಮದುವೆ ಸಮಾರಂಭಗಳಲ್ಲಿ ಮಂತ್ರ ಹೇಳುವುದು, ಪೂಜೆ ಮಾಡುವುದು, ವಿವಿಧ ಧಾರ್ಮಿಕ ಕಾರ್ಯಕ್ರಮಗಳಲ್ಲಿ ವಿಧಿವಿಧಾನಗಳನ್ನು ಪಠಿಸುವುದು, ಕೊನೆಗೆ ಸತ್ತಮೇಲೆ ದಲಿತರಾದಿಯಾಗಿ ಎಲ್ಲಾ ಹೆಣಗಳ ಶವಸಂಸ್ಕಾರವನ್ನು ಬೇಡಜಂಗಮರೇ ಇಂದಿಗೂ ಮಾಡುತ್ತಲಿದ್ದಾರೆ. ಹಾಗಾಗಿ ಡಾ. ಅಂಬೇಡ್ಕರ್ ಅವರು ಇಂತಹ ಶ್ರಮಜೀವಿಗಳನ್ನು ಸಂವಿಧಾನದ 19ನೇ ಪಟ್ಟಿಯಲ್ಲಿ ಸೇರಿಸಿ ಮಾನ್ಯತೆ ನೀಡಿದ್ದಾರೆ. ಆದರೆ ಇಂದು ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ ಬೇಡಜಂಗಮರ ಕುರಿತು ಖಾರವಾಗಿ ಪ್ರತಿಕ್ರಿಯಿಸುವ ಮೂಲಕ ತಮ್ಮ ಗೌರವವನ್ನು ತಾವೇ ಹಾಳು ಮಾಡಿಕೊಂಡಿರುವರು. ಅಂಬೇಡ್ಕರ್ ಅವರು ಹೇಳಿರುವ ಪ್ರಕಾರ 101 ಜಾತಿಗಳಲ್ಲಿ ಕೇವಲ ಎರಡು ಜಾತಿಗಳು ಮಾತ್ರ ಅಸ್ಪೃಶ್ಯರು. ಮಿಕ್ಕ 99 ಜಾತಿಗಳವರು ಅಸ್ಪೃಶ್ಯರಲ್ಲ. ಹೀಗಾಗಿ ಬೇಡಜಂಗಮರ ಬಗ್ಗೆ ತಪ್ಪು ಕಲ್ಪನೆಗೆ ಒಳಗಾಗಿರುವ ಡಾ. ಖರ್ಗೆ ಆದಿಯಾಗಿ ಹೆಚ್. ಆಂಜನೇಯ ಹಾಗೂ ಕೆ.ಎಚ್. ಮುನಿಯಪ್ಪ ಇವರ ಬೇಡಜಂಗಮರಿಗೆ ತಮ್ಮದೇ ಆದ ಸಾಂವಿಧಾನಿಕ ಹಕ್ಕಿದೆ ಎಂಬುದನ್ನು ಅರ್ಥಮಾಡಿಕೊಳ್ಳಬೇಕೆಂದು ಕಿವಿಮಾತು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಲಾಡಗೇರಿಯ ಪೂಜ್ಯ ಷ.ಬ್ರ. ಗಂಗಾಧರ ಶಿವಾಚಾರ್ಯರು, ಕರ್ನಾಟಕ ರಾಜ್ಯ ಜಂಗಮ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ಸಿದ್ರಾಮಯ್ಯ ಸ್ವಾಮಿ, ಸಂಸ್ಥೆಯ ಯುವ ಘಟಕದ ಅಧ್ಯಕ್ಷ ಮಹಾಲಿಂಗ ಸ್ವಾಮಿ ಚಟನಳ್ಳಿ, ರಾಯಚೂರು ಜಂಗಮ ಸಮಾಜದ ಅಧ್ಯಕ್ಷ ಇಡಗಣಯ್ಯ ಸ್ವಾಮಿ, ರಾಜಕುಮಾರ ಸ್ವಾಮಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಬಸವಾನುಯಾಯಿಗಳು ಬದುಕಿಗೆ ಜ್ಯೋತಿಯಾಗಲಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 28 : ಬಸವಣ್ಣನವರು ಜಗ-ಕ್ಕೆ ಜ್ಯೋತಿಯಾಗಿದ್ದರು. ಅವರ ಅನುಯಾಯಿಗಳು ವೈಯಕ್ತಿಕ ಬದುಕಿಗಾದರೂ ಜ್ಯೋತಿಯಾಗಬೇಕು ಎಂದು ಕೂಡಲಸಂಗಮದ ಬಸವ ಧರ್ಮ ಪೀಠಾಧ್ಯಕ್ಷೆ ಮಾತೆ ಡಾ. ಗಂಗಾದೇವಿ ನುಡಿದರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ಇಲ್ಲಿಯ ಗಾಂಧಿಗಂಜ್‌ನ ಬಸವೇಶ್ವರ ದೇವಸ್ಥಾನದಲ್ಲಿ ಮಂಗಳವಾರ ಆಯೋಜಿಸಿದ್ದ ಮಾಸಿಕ ವಚನ ಮಂಟಪ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು. ಬಸವಣ್ಣನವರು ಜಗ ಜ್ಯೋತಿ ಎನಿಸಿಕೊಂಡ ಏಕೈಕ ಮಹಾ ಪುರುಷರು. ಆ ಪದವಿ ಇನ್ನಾರಿಗೂ ಇಲ್ಲ ಎಂದು ಹೇಳಿದರು.




ಬಸವರಾಜ ಧನ್ನೂರ ಅವರ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ವಚನಗಳ ಚಿಂತನ- ಮಂಥನಕ್ಕಾಗಿ ಮಾಸಿಕ ವಚನ ಮಂಟಪ ಕಾರ್ಯಕ್ರಮ ನಡೆಸಿಕೊಂಡು ಬರುತ್ತಿರುವುದು ಪ್ರಶಂಸನೀಯ ಎಂದರು.

ಬಸವಣ್ಣನವರು 12ನೇ ಶತಮಾನದಲ್ಲಿ ಮತ್ತ್ಯದ ಮಹಾ ಮನೆ ಕಟ್ಟಿದ್ದರು. ಆ ಮಹಾ ಮನೆ ಪ್ರೀತಿ, ಆನಂದ, ಮಾನವೀಯತೆ, ಸಮಾನತೆಯಿಂದ ತುಂಬಿ ತುಳುಕುತ್ತಿತ್ತು ಎಂದು 'ಕರ್ತನಟ್ಟಿದಡೆ ಮತ್ತ್ಯದಲ್ಲಿ ಮಹಾ ಮನೆಯ ಕಟ್ಟಿದೆ' ಕುರಿತು ಮಾತನಾಡಿದ ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಹೇಳಿದರು.

ಅಂತಹ ಮಹಾ ಮನೆ ಕಟ್ಟಿದ್ದಕ್ಕಾಗಿಯೇ ಜನರು ಬಸವಣ್ಣನವರತ್ತ ಆಕರ್ಷಿತರಾದರು. ಜಗತ್ತಿನ ಮೂಲೆ ಮೂಲಗಳಿಂದ ಕಲ್ಯಾಣದೆಡೆಗೆ ಬಂದರು ಎಂದು ತಿಳಿಸಿದರು.

ಬಸವಣ್ಣವರ ತತ್ವಗಳು ಬಹಳ ಶ್ರೇಷ್ಠವಾಗಿವೆ. ತತ್ವ-ಕ್ಕೆ ಸಮರ್ಪಿಸಿಕೊಂಡವರು ಎಂತಹ ಪರಿಸ್ಥಿತಿ ಎದುರಾದರೂ ವಿಚಲಿತರಾಗದೆ ತತ್ವ ಪಾಲಿಸಬೇಕು ಎಂದು ಉದ್ಘಾಟನೆ ನೆರವೇರಿಸಿದ ಪತ್ರಕರ್ತ ಶಶಿಕಾಂತ ಶೆಂಬೆಳ್ಳಿ ಹೇಳಿದರು. ಇಂದು ಬಸವ ತತ್ವದ ಮೇಲೆ ದಾಳಿಗಳು ನಡೆಯುತ್ತಿವೆ. ಬಸವ ಪರ ಸಂಘಟನೆಗಳು ಸಂಘಟಿತರಾಗಬೇಕು. ಬಸವಾನುಯಾಯಿಗಳು ಜಾಗೃತರಾಗಿರಬೇಕು. ಬಸವ ತತ್ವದ ಬೆಳವಣಿಗೆಗೆ ಶ್ರಮಿಸುತ್ತಿರುವವರನ್ನು ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ಸದ್ಯ ಬಸವ ತತ್ವ ಪ್ರಚಾರ ಹೆಚ್ಚಾಗಿ ಕರ್ನಾಟಕದಲ್ಲಿ ನಡೆ-ಯುತ್ತಿದೆ. ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಬಸವ ತತ್ವ ಪಸರಿಸಲು ಮಠ ಮಾನ್ಯಗಳು ಬಹು ಭಾಷಾ ತತ್ವಪ್ರಚಾರಕರನ್ನು ತಯಾರು ಮಾಡಬೇಕಿದೆ ಎಂದು ಅಧ್ಯಕ್ಷತೆ ವಹಿಸಿದ್ದ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಹೇಳಿದರು.

ಹಿಂದಿ, ಇಂಗ್ಲಿಷನಲ್ಲಿ ಬಸವ ತತ್ವದ ಪ್ರವಚನ ಮಾಡುವವರ ಕೊರತೆ ಇದೆ. ಅದನ್ನು ನೀಗಿಸುವ ಅವಶ್ಯಕತೆ ಇದೆ ಎಂದು ತಿಳಿಸಿದರು.

ಸರ್ಕಾರಿ ಮತ್ತು ಅರೆ ಸರ್ಕಾರಿ ನೌಕರರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ರಾಜೇಂದ್ರಕುಮಾರ ಗಂದಗೆ ಮಾತನಾಡಿದರು. ಕರ್ನಾಟಕ ಸಿವಿಲ್ ಎಂಜಿನಿಯರ್ಸ್ ಕೌನ್ಸಿಲ್ ಸದಸ್ಯರಾಗಿ ನೇಮಕಗೊಂಡ ಹಿರಿಯ ಸಿವಿಲ್ ಎಂಜಿನಿಯರ್ ಹಾವಶೆಟ್ಟಿ ಪಾಟೀಲ ಅವರನ್ನು ಸನ್ಮಾನಿಸಲಾಯಿತು. ಕಲಾವಿದ ಆದಿತ್ಯ ಪಾಂಚಾಳ ವಚನ ಗಾಯನ ನಡೆಸಿಕೊಟ್ಟರು.

ದಿ ಗ್ರೇನ್ ಆಯಿಂಡ್ ಸೀಡ್ಸ್ ಮರ್ಚಂಟ್ಸ್ ಅಸೋಸಿಯೇಷನ್ ಖಜಾಂಚಿ ಬಂಡೆಪ್ಪ ಗಡ್ಡೆ, ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಗೌರವ ಸಲಹೆಗಾರ ಶರಣಪ್ಪ ಮೈಲೂರಕರ್ ಲಾಡಗೇರಿ ಉಪಸ್ಥಿತರಿದ್ದರು.

ಉಚಾ ಮಿರ್ಚೆ ಸ್ವಾಗತಿಸಿದರು. ಸ್ವರೂಪರಾಣಿ ಪಾಟೀಲ ನಿರೂಪಿಸಿದರು. ಉಮೇಶ ಗಾಯಗೊಂಡ ವಂದಿಸಿದರು. ರಾಜಪ್ಪ ಹಜ್ಜರಗಿ ಭಕ್ತಿ ದಾಸೋಹಗೈದರು.

# ಮಹಾತ್ಮರ ಆದರ್ಶಗಳು ಜೀವನಕ್ಕೆ ದಾರಿದೀಪ

ಮಲ್ಲಮ್ಮನುಡಿವಾರ್ತೆಭಾಲ್ಕಿ:ಮೇ.28: ಶರಣರು,ಸಂತರುಮನುಕುಲದಏಳಿಗೆಗೆ ತಮ್ಮಬದುಕುಮುಡಿಪಾಗಿಟ್ಟಿದ್ದರುಅಂತಹ ಮಹಾತ್ಮರಆದರ್ಶಗಳುಇಂದಿನಯುವ ಪೀಳಿಗೆಯ ಜೀವನಕ್ಕೆ ದಾರಿದೀಪಆಗಬೇಕುಎಂದುತಾಲೂಕು ವಚನಸಾಹಿತ್ಯ ಪರಿಷತ್ತು ಅಧ್ಯಕ್ಷ ಗುಂಡಪ್ಪಸಂಗಮಕರ್ ಹೇಳಿದರು. ಪಟ್ಟಣದಬಸವೇಶ್ವರವೃತ್ತದಲ್ಲಿತಾಲೂಕು ವಚನಸಾಹಿತ್ಯಪರಿಷತ್ತುವತಿಯಿಂದ ಮಂಗಳವಾರಆಯೋಜಿಸಿದ್ದಶರಣ ಗೊಲ್ಲಾಳೇಶ್ವರ ಮತ್ತು ಹೇಮರೆಡ್ಡಿಮಲ್ಲಮ್ಮ ಅವರಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರುಮಾತನಾಡಿದರು.ಶರಣವೀರ ಗೊಲ್ಲಾಳೇಶ್ವರ ಮತ್ತು ಹೇಮರೆಡ್ಡಿ ಮಲ್ಲಮ್ಮ ಅವರವಿಚಾರಧಾರೆ, ಜೀವನ ಚರಿತ್ರೆಯನ್ನು ಪ್ರತಿಯೊಬ್ಬರು ತಿಳಿದು ಕೊಂಡು ಅದರಂತೆನಡೆಯುವ ಪ್ರಯತ್ನ ಮಾಡಬೇಕು ಎಂದುತಿಳಿಸಿದರು. ಗ್ರಂಥಾಲಯದ ಮೇಲ್ವಿಚಾರಕ ಲಿಂಗರಾಜ ಬಸವ ಗುರುವಿನ ಪೂಜೆ ನೆರವೇರಿಸಿದರು. ಲಕ್ಷ್ಮಣ ವಾಡೆ ಅವರು ಶರಣ ವೀರ ಗೊಲ್ಲಾಳೇಶ್ವರಮತ್ತುನರಸಿಂಗರಾವ ಮರೂರ ಹೇಮರೆಡ್ಡಿ ಮಲ್ಲಮ್ಮ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಜಯರಾಜ ಬಿರಾದಾರ್ ಧ್ವಜರೋಹಣ ನೆರವೇರಿಸಿದರು. ಮಲ್ಲಿಕಾರ್ಜುನ ಡೋಣಗಾಪೂರೆ ಪ್ರಾರ್ಥನೆ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಡಿಡಿ ಸಿಂಧೆ, ನೀಲಕಂಠ, ವೀರಣ್ಣ ಕುಂಬಾರ, ಶಾಂತಯ್ಯ ಸ್ವಾಮಿ, ಪವಾಡಶೆಟ್ಟಿ, ಅಲ್ಲಶಾಹ, ಮಾಣಿಕರಾವ ದಾನಾ, ಸಂತೋಷ ಹಡಪದ, ಗಣಪತಿ ಪಂಚಾಳ, ವೆಂಕಟ ಭೊರಾಳೆ ಸೇರಿದಂತೆ ಹಲವರು ಇದ್ದರು.



## ಕೃಷಿ ಇಲಾಖೆ: ರೈತರು ಡಿಎಪಿ ಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರ ಬಳಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 28-ರೈತರು ಬೆಳೆಗಳಲ್ಲಿಗುಣಮಟ್ಟದ ಇಳುವರಿ ಪಡೆಯಲು ಡಿಎಪಿ ಗೊಬ್ಬರದ ಬದಲಾಗಿ ಸಂಯುಕ್ತರಸಗೊಬ್ಬರ ಬಳಸಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ತಿಳಿಸಿದ್ದಾರೆ.

ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆಹದಿನೇಳುಪೋಷಕಾಂಶಗಳ ಅಗತ್ಯವಿರುತ್ತದೆ. ಇವುಗಳಲ್ಲಿ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು, ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತವೆ. ಉಳಿದ ಹದಿನಾಲ್ಕು ಪೋಷಕಾಂಶಗಳಲ್ಲಿ ಸಾರಜನಕ, ರಂಜಕ, ಪೊಟ್ಯಾಷ್ ಹೆಚ್ಚಿನ ಪ್ರಮಾಣದಲ್ಲಿಬೇಕಿದ್ದು,ಇವುಗಳನ್ನು ಪ್ರಧಾನ ಪೋಷಕಾಂಶಗಳೆಂದು ಹೇಳಲಾಗುತ್ತದೆ.

ಕಾಲ್ಸಿಯಂ,ಮೆಗ್ನೆಷಿಯಂ,ಗಂಧಕ, ಕಬ್ಬಿಣ,ಜಿಂಕ್,ಬೋರಾನ್,ತಾಮ್ರ, ಮ್ಯಾಂಗನೀಸ್, ಮಾಲಿಬಿನಂ. ಕ್ಲೋರಿನ್ ಮತ್ತು ನಿಕ್ಲ್ ಕಡಿಮೆ ಪ್ರಮಾಣದಲ್ಲಿಬೇಕಿದ್ದು ಇವುಗಳನ್ನು ಲಘು ಪೋಷಕಾಂಶಗಳೆಂದು ವಿಂಗಡಿಸಲಾಗಿದೆ. ಇವುಗಳಲ್ಲಿ ಯಾವುದೇಒಂದುಪೋಷಕಾಂಶದ ಕೊರತೆಯಾದರೂ ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಪರಿಣಾಮಬೀರಿ ಇಳುವರಿ ಕುಂಠಿತವಾಗುತ್ತದೆ.

ಪ್ರಧಾನಪೋಷಕಾಂಶಗಳುಮತ್ತು ಲಘುಪೋಷಕಾಂಶಗಳಿಗೆಭೂಮಿಯೇ ಮುಖ್ಯ ಅಧಾರ. ಮಣ್ಣಿನಿಂದ ಈ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುವುದಿಲ್ಲವಾದ್ದರಿಂದ ಬಾಹ್ಯವಾಗಿ ನೀಡುವುದು ಅನಿವಾರ್ಯ.

ಬೆಳೆಗಳಿಗೆಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು,ಸಾವಯವ (ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ, ಹಿಂಡಿ ಇತ್ಯಾದಿ) ಮತ್ತು ರಸಗೊಬ್ಬರಗಳಿಂದ ಒದಗಿಸಬೇಕು.

**ರೈತರು ಅನುಸರಿಸಬೇಕಾದ ಕ್ರಮ:** ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ.ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಆದರೆ, ಬೆಳೆಗಳಿಗೆ ಬರ ಮತ್ತು ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಷ್ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬಹುದು.

ಶಿಫಾರಸ್ಸಿನಂತೆ ಬೆಳೆಗಳಿಗೆ ಸಾರಜನಕ:ರಂಜಕ:ಪೊಟ್ಯಾಷ್ ರಸಗೊಬ್ಬರಗಳನ್ನು 4:2:1 ರ ಅನುಪಾತದಲ್ಲಿ ಬಳಸಬೇಕು. ಆದರೆ ಇತ್ತೀಚಿನ ವರ್ಷಗಳಲ್ಲಿ ರೈತರು ಬಳಸುತ್ತಿರುವ ರಸಗೊಬ್ಬರಗಳ ಅನುಪಾತವು ಜಿಲ್ಲೆಯಲ್ಲಿ 9:5:1 ಆಗಿದೆ. ಹಾಗಾಗಿ ರೈತರು ಸಮತೋಲನಾತ್ಮಕ ರಸಗೊಬ್ಬರಗಳ ಬಳಕೆ ಮಾಡಬೇಕು.

ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೇ, ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಹಾಗೂ ಪೊಟ್ಯಾಷ್ ಒದಗಿಸುವ ಇತರೆ ಸಂಯುಕ್ತ ರಸಗೊಬ್ಬರಗಳಾದ 15:15:15,10.26.26,12:32:16, 17:17:17, 19:19:19, ಇತ್ಯಾದಿ ರಸಗೊಬ್ಬರಗಳನ್ನೂ ಸಹ ಬಳಸಬಹುದಾಗಿದೆ.

ಮುಖ್ಯವಾಗಿ ಮಣ್ಣು ಪರೀಕ್ಷೆ ಆಧಾರದ ಮೇಲೆ ರಸಗೊಬ್ಬರಗಳನ್ನು ಬಳಸಬೇಕು. ಬೆಳೆಗಳಿಗೆ ಅವಶ್ಯಕ ಅವಧಿಯಲ್ಲಿ ರಸಗೊಬ್ಬರಗಳನ್ನು ಬಳಸುವುದು. ಹೆಚ್ಚಿನ ಪ್ರಮಾಣದಲ್ಲಿ ಸಾವಯವ ಗೊಬ್ಬರಗಳನ್ನು ಬಳಸುವುದು ಇನ್ನೂ ಸೂಕ್ತವಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದ ಮಹಿಳೆ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ28-ಯಾದಗಿರಿ ಜಿಲ್ಲೆಯ ಮಲ್ಹಾರ ಗ್ರಾಮದ 22 ವರ್ಷದ ತಾಯಮ್ಮ ಮಹಿಳೆ ಇದೇ 2025ರ ಮೇ 22 ರಂದು ಕಾಣೆಯಾದ ಹಿನ್ನೆಲೆ ಯಾದಗಿರಿ ನಗರ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿದೆ ಎಂದು ಯಾದಗಿರಿ ನಗರ ಪೊಲೀಸ್ ಠಾಣೆ ಆರಕ್ಷಕ ಉಪ ನಿರೀಕ್ಷಕರು (ಕಾ.ಸು) ಅವರು ತಿಳಿಸಿದ್ದಾರೆ.

ಯಾದಗಿರಿ ಬಂದು ಎಸ್.ಬಿ.ಐ ಬ್ಯಾಂಕಿಗೆ ಬಂದಿದ್ದು, ಅಂದು ಮಧ್ಯಾಹ್ನ1.30ಗಂಟೆಗೆ ಬ್ಯಾಂಕಿನಲ್ಲಿ ಹಣ ಪಡೆಯಲು ಸರದಿಯಲ್ಲಿ ನಿಂತಿರುವಾಗ ಅವಳು ನಾನು ನೈಸರ್ಗಿಕ ಕ್ರಿಯೆಗೆ ಹೋಗಿ ಬರುವುದಾಗಿ ಹೇಳಿ ಹೋಗಿದ್ದು, ಮರಳಿ ಬರದೆ ಹಿನ್ನೆಲೆ ಅಲ್ಲಿಯೇ ಇರಬಹುದೆಂದು ನಾನು ಅಲ್ಲಿಲ್ಲಿ ಹುಡುಕಾಡಿದೆ ಎಲ್ಲಿಯೂ ಕಾಣಲಿಲ್ಲ ಅವಳಲ್ಲಿರುವ ಮೊಬೈಲ್ ನಂಬರ್ ಕರೆ ಮಾಡಿದಾಗ ಅವಳ ಫೋನ್ ಸ್ವಿಚ್ ಆಫ್ ಆಗಿತ್ತು. ನಾನು ಬಗರಿಗೊಂಡು ನಮ್ಮ ಸಂಬಂಧಿಕರ ಮನೆಯಲ್ಲಿ ವಿಚಾರಿಸಿದೆ, ಸಂಜೆ 5 ಗಂಟೆ-ಯ ಸುಮಾರಿಗೆ ಯಾದಗಿರಿಗೆ ಬಂದಿದ್ದು, ಎಲ್ಲರೂ ಕೂಡಿ-ಕೊಂಡು ನನ್ನ ತಂಗಿಯಾದ ತಾಯಮ್ಮ ಇವಳನ್ನು ಎಲ್ಲಾ ಕಡೆಗೆ ಹುಡುಗಾಡಿದ್ದು, ನಮ್ಮ ಸಂಬಂಧಿಕರ ಮನೆಗಳಿಗೆ ಹೋಗಿ ವಿಚಾರಿಸಿದ್ದು,ಯಾವುದೇ ಸುಳಿವು ಸಿಕ್ಕಿರುವುದಿಲ್ಲ ಮಹಿಳೆಯ ಪತ್ತೆಯಾದಲ್ಲಿ ಯಾದಗಿರಿ ನಗರ ಪೊಲೀಸ್ ಠಾಣೆ ಠಾಣಾಧಿಕಾರಿ ಅಥವಾ ಮೊ.ನಂ.7411275228ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ತಾತ್ಕಾಲಿಕ

## ಗೌರವ ಧನ ಆಧಾರದ ಮೇಲೆ ಕಾರ್ಯನಿರ್ವಸಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ28-:ಗ್ರಾಮೀಣ ಪುನರ್ವಸತಿ ಯೋಜನೆಯಡಿ ಶಹಾಪೂರ ತಾಲೂಕಿನ ಕಕ್ಕಸಗೇರಾ ಗ್ರಾಮ ಪಂಚಾಯತ್‌ನಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ಗೌರವ ಧನ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ಆಸಕ್ತಿಯುಳ್ಳ ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶ್ರೀ ಶರಣಪ್ಪ ಪಾಟೀಲ್ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಶಹಾಪೂರ ತಾಲೂಕಿನ ಕಕ್ಕಸಗೇರಾ ಗ್ರಾಮ ಪಂಚಾಯತ್ ಕಛೇರಿಯಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ತಾತ್ಕಾಲಿಕ ಗೌರವ ಧನ ಆಧಾರದ ಮೇಲೆ ಕಾರ್ಯನಿರ್ವಸಲು ಸ್ಥಳೀಯ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಅರ್ಹ ವಿಕಲಚೇತನರಿಂದ ಎಸ್,ಎಸ್,ಎಲ್,ಸಿ ಅಂಕಪಟ್ಟಿ, ಶಾಲಾ ವರ್ಗಾವಣಾ ಪ್ರಮಾಣ ಪತ್ರ, ವಿಕಲಚೇತನ ಗುರುತಿನ ಪ್ರಮಾಣ ಪತ್ರ,ತಹಸೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, 2 ಫೋಟೋ ದಾಖಲಾತಿಗಳೊಂದಿಗೆ 2025ರ ಮೇ 31ರ ಸಂಜೆ 5.30 ಗಂಟೆಯ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕೊಠಡಿ ಸಂಖ್ಯೆ ಬಿ11, ಬಿ12, ನೆಲಮಹಡಿ, ಜಿಲ್ಲಾಡಳಿತ ಭವನ, ಯಾದಗಿರಿ ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ 30 ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 28-ನಗರದ ಎಸ್.ಪಿ ವೃತ್ತದ ಪಾರ್ವತಿ ನಗರ ಬಡಾವಣೆಯ 1ನೇ ಮಹಡಿ ಅಭಿಕಾಂಪ್ಲೆಕ್ಸ್ ಡೋರ್ ನಂ-12ನ ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್ ನಲ್ಲಿ ಮೇ 30 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 01 ಗಂಟೆಯವರೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ಇಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದು, ಈ ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ. ಆಸಕ್ತ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಿ, ಇದರ ಸದುಪಯೋಗ ಪಡೆದುಕೊಳ್ಳಬೇಕು. ಪುರುಷರಿಗೆ ಮಾತ್ರ ಅವಕಾಶ.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ ಮತ್ತು ಸ್ವ-ವಿವರ (ಬಯೋಡೇಟಾ)ಗಳೊಂದಿಗೆ ಅಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ಮೊ.9742718891, 9663263086,9900827768, 636040809ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಸಗೊಬ್ಬರ ಖರೀದಿಸುವಾಗ ರೈತರಲ್ಲಿ ಸಲಹೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 28-: 2025ರ ಪೂರ್ವ ಮುಂಗಾರಿನಲ್ಲಿ ಯಾದಗಿರಿ ಜಿಲ್ಲೆಯ ಇಲ್ಲಿಯವರೆಗೂ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ಜಿಲ್ಲೆಯಾದ್ಯಂತ ಭೂಮಿ ಸಿದ್ಧತೆ ಚುರುಕುಗೊಂಡಿದ್ದು, ಈ ಕೆಳಗಿನ ಸಲಹೆಗಳನ್ನು ಪಾಲಿಸುವಂತೆ ರೈತರಲ್ಲಿ ಮಾನವಿ ಮಾಡಲಾಗಿದೆ ಎಂದು ಯಾದಗಿರಿ ಉಪ ಕೃಷಿ ನಿರ್ದೇಶಕಿ ಶ್ರೀ ಮಂಜುಳಾ ಬಸವರೆಡ್ಡಿ ಅವರು ತಿಳಿಸಿದ್ದಾರೆ.

**ಸಲಹೆ ಸೂಚನೆಗಳು:** ಅಧಿಕೃತ ಪರವಾನಿಗೆ ಹೊಂದಿದ ಮಳಿಗೆಗಳಲ್ಲಿ ಮಾತ್ರ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಖರೀದಿಸಬೇಕು. ಬೀಜ,ರಸಗೊಬ್ಬರ, ಕೀಟನಾಶಕ ಖರೀದಿಸುವಾಗ ಕಡ್ಡಾಯವಾಗಿ ಜಿ.ಎಸ್.ಟಿ ಬಿಲ್‌ಗಳನ್ನು ಪಡೆಯಬೇಕು. ಯಾವುದೇ ಕಂಪನಿಯ ಬೀಜ, ರಸಗೊಬ್ಬರ, ಕೀಟನಾಶಕ ಖರೀದಿಸುವಾಗ ಪ್ಯಾಕೇಟ್‌ನ ಮೇಲೆ ಉತ್ಪಾದಕ ಕಂಪನಿಯ ಹೆಸರು, ಮಾರಾಟಗಾರರ ಹೆಸರು, ಬ್ಯಾಚ್ ಸಂಖ್ಯೆ, ಉತ್ಪಾದಿಸಿದ ದಿನಾಂಕ ಹಾಗೂ ಅವಧಿ ಮುಗಿಯುವ ದಿನಾಂಕ ನಮೂದಿಸಿರುವದನ್ನು ಖಚಿತಪಡಿಸಿಕೊಳ್ಳಬೇಕು.

ಪರಿಕರ ಖರೀದಿಸಿದ ಬಿಲ್ ಹಾಗೂ ಪ್ಯಾಕೇಟಗಳನ್ನು ಫಸಲು ಬರುವವರೆಗೂ ಕಾಯ್ದಿಟ್ಟುಕೊಳ್ಳಬೇಕು, ವೈಜ್ಞಾನಿಕ ಶಿಫಾರಸ್ಸಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಬೀಜ, ರಸಗೊಬ್ಬರ, ಕೀಟನಾಶಕಗಳನ್ನು ಬಳಸಬಾರದು. ಗರಿಷ್ಠ ಮಾರಾಟ ದರಕ್ಕಿಂತ ಹೆಚ್ಚಿನ ಬೆಲೆಗೆ ಬೀಜ, ರಸಗೊಬ್ಬರ, ಕೀಟನಾಶಕಗಳ ಮಾರಾಟ ಮಾಡುತ್ತಿರುವುದು ಕಂಡುಬಂದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳಿಗೆ ದೂರು ಸಲ್ಲಿಸಬೇಕು, ರಸಗೊಬ್ಬರ ಖರೀದಿಸುವಾಗ ತೂಕ ಪರಿಶೀಲಿಸಿ ಖರೀದಿಸುವುದು, ಕೀಟನಾಶಕ ಸಿಂಪಡಿಸುವಾಗ ರಕ್ಷಣಾ ಉಡುಪುಗಳನ್ನು ಧರಿಸಿ ಸಿಂಪಡಿಸುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ: ಶೇ.84 ರಷ್ಟು ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ಪೂರ್ಣ

## ವಲಸೆ ಹೋದ, ಇನ್ನುಳಿದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿ ನೀಡಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಮಲ್ಲಮ್ಮ ನುಡಿ ವಾರ್ತೆ



ಬಳ್ಳಾರಿ,ಮೇ 27-ಜಿಲ್ಲೆಯಲ್ಲಿ ಈಗಾಗಲೇ ನಡೆಯುತ್ತಿರುವ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಯಲ್ಲಿ ಆಯಾ ನಗರ, ತಾಲ್ಲೂಕು ಮತ್ತು ಗ್ರಾಮಗಳಿಂದ ಕೆಲಸದ ನಿಮಿತ್ತ ಬೇರೆಡೆ ವಲಸೆ ಹೋಗಿರುವ ಪರಿಶಿಷ್ಟ ಕುಟುಂಬಗಳ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು. ಮಂಗಳವಾರ, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ-2025 ಕುರಿತಂತೆ ಸಮುದಾಯದ ಮುಖಂಡರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳೊಂದಿಗೆ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2025 ರಂತೆ ಪರಿಶಿಷ್ಟ ಜಾತಿ ಅಂದಾಜು ವಿವರದಂತೆ ಜಿಲ್ಲೆಯಲ್ಲಿ 61,037 ಪರಿಶಿಷ್ಟ ಜಾತಿಗಳ ಕುಟುಂಬಗಳಲ್ಲಿ ಒಟ್ಟು 3,04,468 ಪರಿಶಿಷ್ಟ ಜಾತಿ ಜನಸಂಖ್ಯೆ ಇದೆ. ಸಮೀಕ್ಷೆಯಲ್ಲಿ ಈಗಾಗಲೇ 57385 ಕುಟುಂಬಗಳು ಪೂರ್ಣಗೊಂಡಿವೆ. ಅದರಲ್ಲಿ ಪರಿಶಿಷ್ಟ ಜಾತಿಯ ಒಟ್ಟು 2,56,753 ಜನಸಂಖ್ಯೆ ಸರ್ವೇ ಮಾಡಲಾಗಿದೆ. ಶೇ.84 ರಷ್ಟು ಪ್ರಗತಿಯಾಗಿದ್ದು, ಇನ್ನುಳಿದ ವಲಸೆ ಹೋಗಿರುವ ಕುಟುಂಬಗಳ ಮಾಹಿತಿ ಅಥವಾ ಇನ್ನು ಸಮೀಕ್ಷೆಯಲ್ಲಿ ಭಾಗಿಯಾಗದವರ ಆಯಾ ಸಮುದಾಯದ ಮುಖಂಡರುಗಳು ಮಾಹಿತಿ ನೀಡಬೇಕು ಎಂದು ತಿಳಿಸಿದರು. ಈಗಾಗಲೇ ಜಿಲ್ಲೆಯಲ್ಲಿ ಇತರೆ ಕೆಲಸಕ್ಕಾಗಿ ವಲಸೆ ಹೋದರವರನ್ನು ಸಮುದಾಯದ ಮುಖಂಡರು ಸಂಪರ್ಕಿಸಿ ಅವರಿಗೆ ಮಾಹಿತಿ ಒದಗಿಸಬೇಕು. ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಯಲ್ಲಿ ತಪ್ಪದೇ ಭಾಗವಹಿಸುವಂತೆ ತಿಳಿಸಬೇಕು. ಇದು ರಾಜ್ಯ ಸರ್ಕಾರವು ನೀಡಿರುವ ಉತ್ತಮ ಅವಕಾಶವಾಗಿದ್ದು, ತಪ್ಪದೇ ಸಮೀಕ್ಷೆಯಲ್ಲಿ ಒಳಪಡುವಂತೆ ನಿರ್ದೇಶನ ಮಾಡಬೇಕು ಎಂದು ಜಿಲ್ಲಾಧಿಕಾರಿಯವರು ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಬಿ.ಮಲ್ಲಿಕಾರ್ಜುನ ಅವರು ಮಾತನಾಡಿ, ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಯಲ್ಲಿ ಮನೆ-ಮನೆ ಭೇಟಿಯು ಮೇ 29 ರವರೆಗೆ ನಡೆಯಲಿದ್ದು, ಎರಡು ದಿನಗಳ ಕಾಲಾವಕಾಶವಿದ್ದು, ಈ ಸಂದರ್ಭದಲ್ಲಿ ಸಮುದಾಯದ ಮುಖಂಡರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ತಮ್ಮ ನೆರೆಹೊರೆಯವರ ಕುಟುಂಬಗಳು ವಲಸೆ ಹೋಗಿದ್ದಲ್ಲಿ ಅಂತಹ ಕುಟುಂಬಗಳ ಮಾಹಿತಿಯನ್ನು ಸಮೀಕ್ಷಾದಾರರಿಗೆ ಗುರುತಿಸಿ ನೀಡಬೇಕು. ಇದಕ್ಕೆ ಸಮುದಾಯದ ಮುಖಂಡರುಗಳು ಸಹಕರಿಸಬೇಕು ಎಂದು ಹೇಳಿದರು. ಅದೇ ರೀತಿಯಾಗಿ ಮೇ 30 ರಿಂದ ಜೂನ್ 01 ರವರೆಗೆ ಮೂರು ದಿನಗಳ ಕಾಲ ವಿಶೇಷ ಶಿಬಿರಗಳು ನಡೆಯಲಿದ್ದು, ಅಲ್ಲಿ ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ ಹೊರಗುಳಿದ ಪರಿಶಿಷ್ಟ ಜಾತಿ ಕುಟುಂಬಗಳು ಸಮೀಕ್ಷೆಯಲ್ಲಿ ಒಳಪಡಿಸಲಾಗುವುದು. ಹಾಗಾಗಿ ಹೊರಗುಳಿದ ಪರಿಶಿಷ್ಟ ಜಾತಿಯ ಕುಟುಂಬಗಳು ತಮ್ಮ-ತಮ್ಮ ವ್ಯಾಪ್ತಿಯ ಬೂತ್ ಗಳಲ್ಲಿ ಅಂ-ದು ನಡೆಯುವ ಶಿಬಿರಗಳಲ್ಲಿ ತಪ್ಪದೇ ಹೋಗಿ ಸಮೀಕ್ಷಾ ಕಾರ್ಯದಲ್ಲಿ ಭಾಗವಹಿಸಿ ಮಾಹಿತಿ ನೀಡಬೇಕು. ಒಂದು ವೇಳೆ ಅಲ್ಲಿಯೂ ಭಾಗವಹಿಸದೇ ಇದ್ದಲ್ಲಿ ಆನ್‌ಲೈನ್ ಮೂಲಕ ಸ್ವಯಂ ಘೋಷಣೆ ಪ್ರಕ್ರಿಯೆಯು ಈಗಾಗಲೇ ನಡೆಯುತ್ತಲಿದೆ. ಲಿಂಕ್ ಮೂಲಕ ಸಮೀಕ್ಷೆಯಲ್ಲಿ ಮಾಹಿತಿ ನೀಡಬಹುದು ಎಂದರು.

ಮನೆ-ಮನೆ ಭೇಟಿ ಸಮೀಕ್ಷಾ ಕಾರ್ಯದಲ್ಲಿ ಇನ್ನುಳಿದ ಎರಡು ದಿನಗಳಲ್ಲಿ ಶಿಕ್ಷಕರು ಇನ್ನಷ್ಟು ಹೆಚ್ಚಿನ ಶ್ರಮವಹಿಸಿ ಸಮೀಕ್ಷಾ ಕಾರ್ಯ ಇನ್ನಷ್ಟು ಪೂರ್ಣಗೊಳಿಸಬೇಕು ಎಂದು ತಿಳಿಸಿದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು, ಈ ಕುರಿತು ಬಿಇಒ ಗಳು ಶಿಕ್ಷಕರಿಗೆ ನಿರ್ದೇಶನ ನೀಡಲು ಸೂಚಿಸಿದರು. ಇದೇ ಸಂದರ್ಭದಲ್ಲಿ ಪರಿಶಿಷ್ಟ ಜಾತಿಗಳ ವಿವಿಧ ಸಮುದಾಯದ ಮುಖಂಡರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಸಮೀಕ್ಷಾ ಕಾರ್ಯ ಪೂರ್ಣಗೊಳಿಸಲು ತಾಂತ್ರಿಕ ಸಮಸ್ಯೆ ಹಾಗೂ ಇತರೆ ಸಮಸ್ಯೆಗಳನ್ನು ಸಭೆಯ ಗಮನಕ್ಕೆ ತಂದರು.

ಇದೇ ಸಂದರ್ಭದಲ್ಲಿ ಸಲಹೆ ನೀಡಿದರು. ಸಭೆಯಲ್ಲಿ ಡಾ.ಬಾಬು ಜಗನ್ ಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಸಹಾಯಕ ಆಯುಕ್ತ ಪಿ.ಪ್ರಮೋದ್ ಸೇರಿದಂತೆ ಪರಿಶಿಷ್ಟ ಜಾತಿಗಳ ವಿವಿಧ ಸಮುದಾಯದ ಮುಖಂಡರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಭಾರತವನ್ನು ತಂತ್ರಜ್ಞಾನ, ನಾವೀನ್ಯತೆ, ನೈತಿಕತೆಯ ಜಾಗತಿಕ ಕೇಂದ್ರವನ್ನಾಗಿ ಮಾಡುವಲ್ಲಿ

## ಕೃಷಿ ವಿದ್ಯಾರ್ಥಿಗಳ ಪಾತ್ರ ಪ್ರಮುಖ: ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 28-: "ಭಾರತವನ್ನು ಆಹಾರ ಮತ್ತು ಕೃಷಿ ಉತ್ಪಾದನೆಯ ಜೊತೆ-ಗೆ ತಂತ್ರಜ್ಞಾನ, ನಾವೀನ್ಯತೆ ಮತ್ತು ನೈತಿಕತೆಯ ಜಾಗತಿಕ ಕೇಂದ್ರವನ್ನಾಗಿ ಮಾಡುವಲ್ಲಿ ಕೃಷಿ ವಿದ್ಯಾರ್ಥಿಗಳ ಪಾತ್ರ ಪ್ರಮುಖ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ರಾಯಚೂರು ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ 14 ನೇ ಘಟಿಕೋತ್ಸವದಲ್ಲಿ ಬಳ್ಳಾರಿಯಿಂದ ವರ್ಚುವಲ್ ಮೂಲಕ ಭಾಗವಹಿಸಿ ಅವರು ಮಾತನಾಡಿದರು.

"ಕೃಷಿಆಧಾರಿತನವೋದ್ಯಮಗಳು ಭಾರತೀಯ ಆರ್ಥಿಕತೆಯಲ್ಲಿ ಕ್ರಾಂತಿಯನ್ನುಂಟು ಮಾಡುತ್ತಿವೆ. ಇಂದು ಭಾರತದ ಆರ್ಥಿಕತೆಯು ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕತೆಯಾಗಿದ್ದು, ಕೃಷಿ ವಲಯವು ಅದರಲ್ಲಿ ಪ್ರಮುಖ ಕೊಡುಗೆಹೊಂದಿದೆ."ಸ್ಟಾರ್ಟ್‌ಅಫ್ ಇಂಡಿಯಾ","ಡಿಜಿಟಲ್ ಇಂಡಿ-ಯಾ", "ಆತ್ಮನಿರ್ಭರ ಭಾರತ" ದಂತಹ ಯೋಜನೆಗಳಿಗೆ ಸೇರಿ ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಯುವಪೀಳಿಗೆ ಮುಂದಾಗಬೇಕು" ಎಂದು ಅವರು ಕರೆ ನೀಡಿದರು.

"ಕೃಷಿ ಅಭಿವೃದ್ಧಿಯಲ್ಲಿ ತೆ-ೂಟಗಾರಿಕೆ ವಲಯವು ವಿಶೇಷ ಸ್ಥಾನ ಹೊಂದಿದೆ. ತೋಟಗಾರಿಕಾ ಬೆಳೆಗಳು ಪ್ರತಿ ಯೂನಿಟ್ ಪ್ರದೇಶಕ್ಕೆ ಹೆಚ್ಚಿನ ಆದಾಯ, ಉದ್ಯೋಗ ಮತ್ತು ಪೋಷಣೆಯನ್ನು ನೀಡುತ್ತಿರುವುದರಿಂದ, ಈ ಬೆಳೆಗಳು ವಾಣಿಜ್ಯ ರೂಪವನ್ನು ಪಡೆದುಕೊಳ್ಳುತ್ತಿವೆ, ಇದರಿಂದಾಗಿ ಈ ಬೆಳೆಗಳ ಉತ್ಪಾದನೆಯತ್ತ ರೈತರ ಒಲವು ಹೆಚ್ಚುತ್ತಿದೆ. ಇಂದು ಔಷಧೀಯ ಮತ್ತು ಸುಗಂಧದ್ರವ್ಯಗಳ ಆಧಾರದ ಮೇಲೆ ವ್ಯಾಪಾರವು ಪ್ರಪಂಚದಾದ್ಯಂತ ಬೆಳೆಯುತ್ತಿದೆ. ನಮ್ಮ ರೈತರು ಸಾಂಪ್ರದಾಯಿಕ ಬೆಳೆಗಳ ಜೊತೆಗೆ ಔಷಧೀಯ ಮತ್ತು ಪರಿಮಳಯುಕ್ತ ಬೆಳೆಗಳ ಮುಂದುವರಿದ ಕೃಷಿಯತ್ತ ಗಮನ ಹರಿಸಬೇಕು" ಎಂದು ಅವರು ಹೇಳಿದರು.

"ಪ್ರಸ್ತುತ ಕೃಷಿ ಉತ್ಪಾದನೆಯ ಬೇಡಿಕೆಯನ್ನು ಪೂರೈಸಲು ಹೊಸ ಪರ್ಯಾಯಗಳನ್ನು ಉತ್ತೇಜಿಸುವ ಅವಶ್ಯಕತೆಯಿದೆ. ಕಡಿಮೆ ಭೂಮಿಯಲ್ಲಿ ಹೆಚ್ಚಿನ ಇಳುವರಿ ನೀಡಲು ಲಂಬ ಕೃಷಿ ತಂತ್ರಗಳ ಕುರಿತು ಹೆಚ್ಚಿನ ಕೆಲಸ ಮಾಡಬೇಕಾಗಿದೆ. ಡ್ರೋನ್ ತಂತ್ರಜ್ಞಾನ, ಉಪಗ್ರಹ ಚಿತ್ರಣ ಮತ್ತು ಸ್ಮಾರ್ಟ್ ನೀರಾವರಿ ವ್ಯವಸ್ಥೆಗಳ ಬಳಕೆಯು ಉತ್ಪಾದನೆಯನ್ನು ಹೆಚ್ಚಿಸಲು ಮತ್ತು ನೀರಿನ ಬಳಕೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತಿದೆ. ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಮೇಲಿನ ರೈತರ ಅವಲಂಬನೆಯನ್ನು ಕಡಿಮೆ ಮಾಡುವ ಅವಶ್ಯಕತೆಯಿದೆ. ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಅತಿಯಾದ ಬಳಕೆಯಿಂದ ಮಣ್ಣು, ನೀರು ಮತ್ತು ಆಹಾರ ಪದಾರ್ಥಗಳು ಕಲುಷಿತಗೊಳ್ಳುತ್ತಿದ್ದು, ಇದು ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಸಾವಯವ ಕೃಷಿ, ನೈಸರ್ಗಿಕ ಕೃಷಿ, ಕಡಿಮೆ ನೀರಿನಿಂದ ಹೆಚ್ಚಿನ ಇಳುವರಿ ಪಡೆಯುವುದು ಮತ್ತು ಸುರಕ್ಷಿತ ಆಹಾರವನ್ನು ಉತ್ಪಾದಿಸಲು ಪರಿಸರ ಸ್ನೇಹಿ ಕೃಷಿಯಂತಹ ಕೃಷಿ ಪದ್ಧತಿಗಳನ್ನು ಉತ್ತೇಜಿಸುವ ಕಡೆಗೆ ನಾವು ಹೆಚ್ಚು ಶ್ರಮಿಸಬೇಕಾಗಿದೆ. ಇದರಿಂದಾಗಿ ಕೃಷಿ ಉತ್ಪಾದನೆಯು ಶುದ್ಧವಾಗಿರುತ್ತದೆ ಮತ್ತು ಉತ್ಪಾದನೆ ಹೆಚ್ಚಾಗುತ್ತದೆ ಮತ್ತು ಇದು ಪರಿಸರ ಸಂರಕ್ಷಣೆಗೂ ಸಹಾಯ ಮಾಡುತ್ತದೆ" ಎಂದು ಅವರು ಅಭಿಪ್ರಾಯಪಟ್ಟರು.

"ಪ್ರಸ್ತುತ ಜಾಗತಿಕ ತಾಪಮಾನ ಏರಿಕೆ, ನೀರಿನ ಬಿಕ್ಕಟ್ಟು, ಮಣ್ಣಿನ ಸವೆತ, ಅತಿಯಾದ ಕೀಟನಾಶಕಗಳ ಬಳಕೆ ಮತ್ತು ರೈತರ ಆರ್ಥಿಕ ತೊಂದರೆಗಳಂತಹ ಸವಾಲುಗಳನ್ನು ಎದುರಿಸುತ್ತಿದ್ದೇವೆ. ಅಂತಹ ಪರಿಸ್ಥಿತಿಯಲ್ಲಿ ನಿಮ್ಮಂತಹ ಕೃಷಿ ವಿಜ್ಞಾನಿಗಳು, ನಾವೀನ್ಯಕಾರರು ಮತ್ತು ನೀತಿ ನಿರೂಪಕರ ಪಾತ್ರ ಇನ್ನಷ್ಟು ಮುಖ್ಯವಾಗುತ್ತದೆ. ಇಂದು ಕೃಷಿಯು ದತ್ತಾಂಶ ವಿಶ್ಲೇಷಣೆ, ಡ್ರೋನ್ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆಯಂತಹ ಮುಂದುವರಿದ ತಂತ್ರಜ್ಞಾನಗಳೊಂದಿಗೆ ಸಂಯೋಜಿಸಲ್ಪಟ್ಟಿದೆ.

"ಸ್ಮಾರ್ಟ್ ಅಗ್ರಿಕಲ್ಚರ್" ಎಂಬ ಪರಿಕಲ್ಪನೆಯು ಈಗ ರೂಪ ಪಡೆಯುತ್ತಿದೆ. ಇದರಲ್ಲಿ ಯುವಕರ ಭಾಗವಹಿಸುವಿಕೆಯಿಂದ ಇದು ಸಾಧ್ಯವಾಗುತ್ತಿದೆ. ಕೃಷಿ ಉತ್ಪಾದನೆಯ ಬೇಡಿಕೆಯನ್ನು ಪೂರೈಸಲು ಹೊಸ ಪರ್ಯಾಯಗಳನ್ನು ಉತ್ತೇಜಿಸುವ ಅವಶ್ಯಕತೆಯಿದೆ. ಕಡಿಮೆ ಭೂಮಿಯಲ್ಲಿ ಹೆಚ್ಚಿನ ಇಳುವರಿ ನೀಡಲು ಲಂಬ ಕೃಷಿ ತಂತ್ರಗಳ ಕುರಿತು ಹೆಚ್ಚಿನ ಕೆಲಸ ಮಾಡಬೇಕಾಗಿದೆ " ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೃಷಿ ಸಚಿವರಾದ ಎನ್. ಚೆಲುವರಾಯಸ್ವಾಮಿ ಉಪಸ್ಥಿತರಿದ್ದರು.

## 10 ಜೋಡಿಗಳ ಸಾಮೂಹಿಕ ಕಂಕಣ ಭಾಗ್ಯ

ಮಲ್ಲಮ್ಮ ನುಡಿ ವಾರ್ತೆ



ಶಹಾಪುರ:ಆಡಂಬರ ಮದುವೆಗಾಗಿ ಸಾಲ ಮಾಡಿ, ಬಡ ಮತ್ತು ಮಾಧ್ಯಮ ವರ್ಗದ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಬಾರದು ಎಂಬ ಸದುದ್ದೇಶದಿಂದ 2013 ರಲ್ಲಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರೋತ್ಸಾಹ ಧನ ನೀಡುವ ಯೋಜನೆಯನ್ನು ಆರಂಭಿಸಿದ್ದು, ಸರ್ಕಾರದ ಯೋಜನೆಯಲ್ಲಿ ಸರಳವಾಗಿ ಮದುವೆ ಆಗುವ ಮೂಲಕ ಎಲ್ಲರಿಗೂ ಮಾದರಿ ಆಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪುರ ಹೇಳಿದರು. ಭೀಮರಾಯನಗುಡಿಯ ಸರ್ಕಾರಿ ಪದವಿಪೂರ್ವ ಕಾಲೇಜು ಮೈದಾನದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ.ಬಿ ಕೃಷ್ಣಪ್ಪ ಸ್ಥಾಪಿತ ಸಂಘಟನೆ ವತಿಯಿಂದ ಬುದ್ಧ, ಬಸವ, ಅಂಬೇಡ್ಕರ್ ಅವರ ಜಯಂತಿಯ ಅಂಗವಾಗಿ ಇಂದು (ಸೋಮವಾರ ಮೇ 26) ರಂದು ಹಮ್ಮಿಕೊಂಡಿದ್ದ ಉಚಿತ ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜನರ ಆರ್ಥಿಕ ಹೊರೆ ಕಡಿಮೆ ಮಾಡಲು ಸಾಮೂಹಿಕ ವಿವಾಹಗಳಂತಹ ಕಾರ್ಯಕ್ರಮಗಳು ಪೂರಕ. ಮದುವೆ ಪ್ರತಿಯೊಬ್ಬರ ಜೀವನದ ಮಹತ್ತರ ಘಟ್ಟ. ಇದಕ್ಕಾಗಿ ಅನಗತ್ಯ ಹಣ ವ್ಯರ್ಥ ಮಾಡುವ ಅಗತ್ಯವಿಲ್ಲಾ. ಸರ್ಕಾರವು ಇದಕ್ಕೆಂದೆ ಪ್ರೋತ್ಸಾಹಧನ ನೀಡುತ್ತಿದ್ದು ಇದರ ಲಾಭ ಪಡೆದುಕೊಳ್ಳಿ ಎಂದರು. ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಸುಮಾರು ವರ್ಷಗಳಿಂದ ಸಾಮೂಹಿಕ ವಿವಾಹ ಸಮಾರಂಭಗಳನ್ನು ಮಾಡಿಕೊಂಡು ಬರುತ್ತಿರುವ ಕಾರ್ಯ ಶ್ಲಾಘನೀಯವಾದದ್ದು ಎಂದರು. ಆಧುನಿಕ ಯುಗದಲ್ಲಿ ಶಿಕ್ಷಣಕ್ಕೆ ಹೆಚ್ಚು ಮಹತ್ವವಿದ್ದು, ಎಷ್ಟೇ ಕಷ್ಟಗಳಿದ್ದರು ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಿ ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡಿ. ಸಾಮೂಹಿಕ ವಿವಾಹದಂತಹ ಕಾರ್ಯಕ್ರಮಗಳಿಂದಾಗಿ ಬಡವರಿಗೆ ಅನುಕೂಲವಾಗಲಿದೆ.

ಇಂತಹ ಕಾರ್ಯಕ್ರಮಗಳು ಸಮಾಜಮುಖಿಯಾಗಿದ್ದು, ದುಂದುವೆಚ್ಚ, ಆಡಂಬರಕ್ಕೆ ಕಡಿವಾಣ ಹಾಕಲು ಸಾಧ್ಯವಾಗುತ್ತದೆ ಎಂದರು. ಗಣ್ಯರು, ಪೂಜ್ಯರು ಮಂಗಳಸೂತ್ರ ನೀಡಿ, ನೂತನ ವಧು-ವರರಿಗೆ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಖಾಸಗಿ ಶಾಲೆಗಳ ಒಕ್ಕೂಟದ ಅಧ್ಯಕ್ಷ, ಹಿರಿಯ ವಕೀಲರಾದ ಆರ್.ಚನ್ನಬಸ್ಸು ವನದುರ್ಗ, ಭೀಮಣ್ಣ ಮೇಟಿ, ಶಿವುಮಾಹಂತಪ್ಪ ಸಾಹು, ತಿಮ್ಮಯ್ಯ ಪುರ್ಲೆ, ಮಲ್ಲಿಕಾರ್ಜುನ ಪೂಜಾರಿ, ಮಲ್ಲಪ್ಪ ಉಳ್ಳಂಡಗೇರ, ಎಸ್.ಸಿ, ಎಸ್‌ಟಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಶ್ರೀಶೈಲ್ ಹೊಸ್ಮನಿ, ವಿಭಾಗೀಯ ಅಧ್ಯಕ್ಷ ಸುಭಾಷ್ ತಳವಾರ, ಸಿದ್ದಣ್ಣ ತಣಕೇದಾರ, ಶಿವುಕುಮಾರ ತಳವಾರ, ಭೀಮರಾಯ ತಳವಾರ, ನಾಗಣ್ಣ ಬಡಿಗೇರ ,ಮಾಳಪ್ಪ ಸಲದಪುರ, ಚಂದ್ರಶೇಖರ ಗುತ್ತೇದಾರ, ಲಕ್ಷ್ಮಣ ಗೋಗಿ, ಶರಣಗೌಡ ಪಾಟೀಲ್, ಮಲ್ಲಿಕಾರ್ಜುನ ಪಾಟೀಲ್, ರಾಮು ಸಗರ, ಚಂದ್ರಶೇಖರ, ನಾಗಪ್ಪ ಸೇರಿದಂತೆ ಇತರರಿದ್ದರು.

## ಆಯುಷ್ಮತಿ ಕ್ಲಿನಿಕ್, ಕಾರ್ನ್ರ್ ವಿವಿಧ ತಜ್ಞ ವೈದ್ಯರ ಸೇವೆ ಪಡೆಯಲು ಅರ್ಜಿ ಆಹ್ವಾನ

ಯಾದಗಿರಿ : ಮೇ 28, ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದಡಿ ಶಹಾಪೂರ ನಗರ ಪ್ರದೇಶ ಆಯುಷ್ಮತಿ ಕ್ಲಿನಿಕ್, ಕಾರ್ನ್ರ್‌ಗೆ ವಿವಿಧ ತಜ್ಞ ವೈದ್ಯರ ಸೇವೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಹೇಶ ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದಡಿ ಶಹಾಪುರ ನಗರ ಪ್ರದೇಶದ ಆಯುಷ್ಮತಿ ಕ್ಲಿನಿಕ್, ಕಾರ್ನ್ರ್‌ಗೆ ವಿವಿಧ ತಜ್ಞ ವೈದ್ಯರ ಸೇವೆಗಳಿಗೆ Expresion of Interest ಮೂಲಕ ನಿಗದಿ ಪಡಿಸಿದ ಪ್ರೋತ್ಸಾಹ ಧನದ ಆಧಾರದ ಮೇಲೆ ವಿವಿಧ ತಜ್ಞ ವೈದ್ಯರ ಸೇವೆ ಪಡೆಯಲು ಪ್ರತಿ ಮಂಗಳವಾರ ರಂದು ಕಛೇರಿ ಸಮಯದಲ್ಲಿ (ಕನಿಷ್ಠ 4 ವಿವಿಧ ತಜ್ಞ ವೈದ್ಯರ ಸೇವೆ ಆಯ್ಕೆ ಆಗುವರೆಗೆ) ಜಿಲ್ಲಾ ಆರ್.ಸಿ.ಹೆಚ್.ಓ ಕಛೇರಿ ಯಾದಗಿರಿ ಇಲ್ಲಿಗೆ ನೇರ ಸಂದರ್ಶನ (walk-in-interview) ಅಗತ್ಯ ದಾಖಲಾತಿಗಳೊಂದಿಗೆ ನಕಲು ಪ್ರತಿಗಳೊಂದಿಗೆ ಹಾಜರಾಗಬೇಕು, ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರ್.ಸಿ.ಹಚ್.ಅಧಿಕಾರಿಗಳು ಯಾದಗಿರ ಮೊ.ನಂ.9535716637ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಶೋಕ್ ಕಲ್ಲಡ್ಕಗೆ ಕರ್ನಾಟಕ ಮಾಧ್ಯಮ ರತ್ನ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ನೀಡುವ ರಾಜ್ಯಮಟ್ಟದ ಕರ್ನಾಟಕ ಮಾಧ್ಯಮ ರತ್ನ ಪ್ರಶಸ್ತಿಯನ್ನು ವರದಿಗಾರ ಕರ್ನಾಟಕ ಪ್ರಧಾನ ಸಂಪಾದಕ ಅಶೋಕ್ ಕಲ್ಲಡ್ಕ ಅವರಿಗೆ ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಾಧೀಶ ಹಾಗೂ ನಿವೃತ್ತ ಲೋಕಾಯುಕ್ತ ಜಸ್ಟಿಸ್ ಸಂತೋಷ್ ಹೆಗ್ಡೆ ಅವರು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಸಮಾರಂಭದಲ್ಲಿ ಪ್ರದಾನ ಮಾಡಿದರು.

ಮಾಧ್ಯಮ ಕ್ಷೇತ್ರದಲ್ಲಿ ಅಶೋಕ್ ಕಲ್ಲಡ್ಕ ಅವರು ನೀಡಿದ ಅನುಪಮ ಸೇವೆಯನ್ನು ಪರಿಗಣಿಸಿ ಅವರಿಗೆ ಪ್ರಶಸ್ತಿ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಸ್ಟಿಸ್ ಹೆಗ್ಡೆ ಅವರು, ಹಿಂದಿನ ಕಾಲದಲ್ಲಿ ಯಾರಾದರು ಅಪರಾಧವೆಸಗಿ ಜೈಲು ಸೇರಿದರೆ, ಊರಿನವರು ಅಪರಾಧಿಯ ಮನೆಯತ್ತ ಸುಳಿಯುತ್ತಿರಲಿಲ್ಲ. ತಪ್ಪು ಮಾಡಿದವನಿಗೆ ಮಾತ್ರ ಶಿಕ್ಷೆಯಲ್ಲದೆ ಅವರ ಕುಟುಂಬಕ್ಕೂ ಶಿಕ್ಷೆಯಾಗುತ್ತಿತ್ತು. ಹಾಗಾಗಿ ಜನರು ಅಪರಾಧವೆಸಗಲು ಹೆದರುತ್ತಿದ್ದರು. ಆದರೆ ಇಂದು ಬೇಲ್ ಮೇಲೆ ಹೊರಬಂದ ಆರೋಪಿಯನ್ನು ನಾವು ಮೆರವಣಿಗೆಯಲ್ಲಿ ಕ–ರೆದುಕೊಂಡು ಬರುತ್ತಿದ್ದೇವೆ ಎಂದು ವಿಷಾದ ವ್ಯಕ್ತಪಡಿಸಿದರು.

ಮನುಷ್ಯನಿಗೆ ತೃಪ್ತಿ ಮತ್ತು ಮಾನವೀಯತೆ ಈ ಎರಡು ಮೌಲ್ಯಗಳು ಇರಬೇಕು. ತೃಪ್ತಿ ಎಂಬುವುದು ಇಲ್ಲದಿರುವುದೇ ಭ್ರಷ್ಟಾಚಾರಕ್ಕೆ ಕಾರಣವಾಗಿದೆ. ನಾವು ಎಷ್ಟು ಕೂಡ ದುಡ್ಡು ಮಾಡಬಹುದು. ಆದರೆ ಅದು ನ್ಯಾಯಸಮ್ಮತವಾಗಿರಬೇಕು. ಇನ್ನೊಬ್ಬರ ಜೇಬಿಗೆ ಕೈ ಹಾಕಬಾರದು ಎಂದರು.

ಚಿತ್ರನಟ ಚೇತನ್ ಅಹಿಂಸಾ, ಮಾಜಿ ಸಚಿವ ರಾಮಚಂದ್ರ ಗೌಡ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ ಮುಂತಾದವರು ಉಪಸ್ಥಿತರಿದ್ದರು.

# ಛಲವಾದಿಗೆ ಗಡಿಪಾರು ಮಾಡಲು ಶಾಂತ ಕುಮಾರ ಎಮ್ ಕಟ್ಟಿಮನಿ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವಾಚ್ಯ ಶಬ್ದದಿಂದ ನಿಂದನೆ ಮಾಡಿದ್ದಾರೆ. ಅವರ ವಿಧಾನ ಪರಿಷತ್ ಸದಸ್ಯತ್ವ ರದ್ದು ಮಾಡಿ ಬಂಧಿಸಿ ಗಡಿಪಾರು ಮಾಡಬೇಕೆಂದು ಕಾಂಗ್ರೆಸ್ ನ ಮುಖಂಡರು ಶಾಂತ ಕುಮಾರ ಎಮ್ ಕಟ್ಟಿಮನಿ ಧರ್ಮಾಪುರ್ ಹೇಳಿದರೆ. ನಾರಾಯಣಸ್ವಾಮಿ ಕ್ಷಮೆ ಕೇಳಿದರೆ ಸಾಲದು, ಯಾವುದೇ ಕಾರ್ಯಕ್ರಮಕ್ಕೆ ಹೋದರೆ ಕಪ್ಪು ಬಾವುಟ ಪ್ರದರ್ಶನ ಮಾಡಬೇಕಾಗುತ್ತದೆ. ಛಲವಾದಿ ಬಿಜೆಪಿ ರಾಷ್ಟ್ರೀಯ ನಾಯಕರಿಗೆ, ಹೈಕಮಾಂಡ್ ಮೆಚ್ಚಿಸಲು ಖರ್ಗೆ ಕುಟುಂಬದ ಬಗ್ಗೆ ಇಲ್ಲ ಸಲ್ಲದ ಕೀಳುಮಟ್ಟದ ಹೇಳಿಕೆ ನೀಡುತ್ತಾ ಬಂದಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತರು ಮುಖಂಡರು ಇವರಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಛಲವಾದಿ ನಾರಾಯಣಸ್ವಾಮಿ ಅವರು ಬಿಜೆಪಿ ಪಕ್ಷದಲ್ಲಿ ಬಂದಾಗ ಮುಂಚಿತ ಇದ್ದ ದಲಿತರನ್ನೇ ಬದಿಗಿಟ್ಟು ಈಗ ತಮ್ಮ ಸ್ವಾರ್ಥಕ್ಕಾಗಿ ತಾವೇ ವಿಧಾನಪರಿಷತ್ ಸದಸ್ಯರಾಗಿದ್ದೀರಿ ಇದು ದಲಿತರಿಗೆ ಮಾಡಿರು ಅನ್ಯಾಯ ಅಲ್ವ ಎಂದು ಅವರು ಪ್ರಶ್ನಿಸಿದರು?. ತನ್ನ ನೀಚ ಬುದ್ಧಿ ಕರ್ನಾಟಕ ಜನತೆಗೆ ಗೊತ್ತಿಲ್ವಾ ಮತ್ತು ಬಿಜೆಪಿಯ ಸರ್ವ ಮುಖಂಡರು ಮಾಡುತ್ತಿರುವ ಕುತಂತ್ರವನ್ನು ಎಳೆ ಎಳೆಯಾಗಿ ಬಿಚ್ಚಿಡುತ್ತಿರುವ ಡೈನಾಮಿಕ್ ಲೀಡರ್ ನಾಯಕರಾಗಿ ಅವರನ್ನು ಸಹಿಸಿಕೊಳ್ಳಲು ಆಗುತ್ತಿಲ್ಲ . ಹೊರಹೊಮ್ಮುತ್ತಿರುವುದು ಮತ್ತು ಕಲ್ಬುರ್ಗಿ ಜಿಲ್ಲೆಗೆ ವಿಶೇಷವಾಗಿ ಅಭಿವೃದ್ಧಿ ಆಗುತ್ತಿರುವುದನ್ನು ಹಾಗೂ ಉದ್ಯೋಗ ಮೇಳ ಹೀಗೆ ಹತ್ತು ಹಲವಾರು ಯೋಜನೆಗಳನ್ನು ಮಾಡುತ್ತಿರುವುದನ್ನು ಇವರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ ಎಂದು ಅವರು ಆರೋಪಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರ ಜನಪ್ರಿಯತೆ ಕುಗ್ಗಿಸುವ ಬಿಜೆಪಿ ಹಾಗೂ ಆರ್‌ಎಸ್‌ಎಸ್ ತಂತ್ರ ಫಲಿಸದು ಎಂದು ಅವರು ಹೇಳಿದ್ದಾರೆ. ಖರ್ಗೆ ಅವರನ್ನು ಟಾರ್ಗೆಟ್ ಮಾಡಲಾಗುತ್ತಿದೆ. ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮೂಲಕ ವೈಯಕ್ತಿಕ ದಾಳಿಗಿಳಿದಿವೆ. ಆದರೆ, ಜನಪರ ಕಾಳಜಿಯುಳ್ಳ ಸಚಿವ ಹಾಗೂ ಡೈನಾಮಿಕ್ ನಾಯಕರೊಬ್ಬರನ್ನು ತೇಜೋವಧೆ ಮಾಡುತ್ತಿರುವ ಬಿಜೆಪಿಯ ಕುತಂತ್ರ ಇದಾಗಿದೆ ಎಂದು ಹರಿಹಾಯ್ದಿದ್ದಾರೆ.

# ಕಮಲ್ ಹಾಸನ್ ಕನ್ನಡಿಗರ ಕ್ಷಮೆಯಾಚಿಸಬೇಕು: ಎನ್ ಜವಾದಿ.



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಕನ್ನಡಕ್ಕೆ ಎರಡೂವರೆ ಸಾವಿರ ವರ್ಷಗಳ ಇತಿಹಾಸವಿದ್ದು, ತಮಿಳಿನಿಂದ ಕನ್ನಡ ಹುಟ್ಟಿದೆ ಎಂದ ಕಮಲ್ ಹಾಸನ್ ಹೇಳಿದ ಮಾತನ್ನು ಒಪ್ಪಲ್ಲ, ಕೂಡಲೇ ಈ ಮಾತು ಕಮಲ್ ಹಾಸನ್ ವಾಪಸ್ ತೆಗೆದುಕೊಳ್ಳಬೇಕು. ಆಡಿದ ಮಾತಿಗೆ ಕನ್ನಡಿಗರ ಕ್ಷಮೆಯಾಚಿಸಬೇಕೆಂದು ಸಾಹಿತಿ , ಪರಿಸರ ಸಂರಕ್ಷಕ ಸಂಗಮೇಶ ಎನ್ ಜವಾದಿ ಆಗ್ರಹಿಸಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕಲೆಗೆ ಜಾತಿ ಇಲ್ಲ. ಎಲ್ಲಾ ಭಾಷೆಯ ಕಲಾವಿದರು ನಾವು ಗೌರವಿಸುತ್ತೇವೆ. ಆ ನಿಟ್ಟಿನಲ್ಲಿ ಕಮಲ್ ಹಾಸನ ರವರನ್ನು ಸಹ ಮೆಚ್ಚಿದ್ದೇವೆ. ಹಾಗಂತ ಕನ್ನಡ ತಮಿಳಿಂದ ಹುಟ್ಟಿದೆ ಎಂದ ಅವರು ಹೇಳಿದ ಮಾತು ಖಂಡಿತವಾಗಿಯೂ ಒಪ್ಪಲು ಸಾಧ್ಯವೇ ಇಲ್ಲ. ಕನ್ನಡಕ್ಕೆ ಎರಡೂವರೆ ಸಾವಿರ ವರ್ಷದ ಇತಿಹಾಸವಿದೆ. ಅಷ್ಟೇಕೆ ಹನ್ನೆರಡನೆಯ ಶತಮಾನದ ಶರಣ–ರು ಕನ್ನಡದಲ್ಲಿ ವಚನಗಳನ್ನು ರಚಿಸಿ, ಕನ್ನಡ ಭಾಷೆಯನ್ನು ದೇವ ಭಾಷೆಯನ್ನಾಗಿ ಮಾಡಿದ ಕೀರ್ತಿ ಬಸವಾದಿ ಶಿವಶರಣರಿಗೆ ಸಲ್ಲುತ್ತದೆ. ಎಲ್ಲಾ ರೀತಿಗಳಲ್ಲೂ ನೋಡಿದರು ಕನ್ನಡ ಭಾಷೆ ವಿಶ್ವ ಶ್ರೇಷ್ಠ ಭಾಷೆಯಾಗಿದೆ.

ಇಂತಹ ಜಗತ್ಪ್ರಸಿದ್ಧ ಕನ್ನಡ ಭಾಷೆಯ ಬಗ್ಗೆ ಅಗೌರವದಿಂದ ಮಾತನಾಡಿರುವ ಕಮಲ್ ಹಾಸನ್ ಈ ಕೂಡಲೇ ಆಡಿರುವ ಮಾತನ್ನು ವಾಪಸ್ ತೆಗೆದುಕೊಳ್ಳಬೇಕು. ಕನ್ನಡಿಗರ ಕ್ಷಮೆಯಾಚಿಸಬೇಕೆಂದು ಸಂಗಮೇಶ ಎನ್ ಜವಾದಿ ಆಗ್ರಹಿಸಿದ್ದಾರೆ.

# ಜೂನ್ 4 ರಂದು ನೇರವಾಗಿ ಮೌಖಿಕ ಸಂದರ್ಶನ

ಕಲಬುರಗಿ,ಮೇ.28–ಶಿಶಿಕ್ಷು ಕಾಯ್ದೆ–1961ರನ್ವಯ ಪೂರ್ಣಾವಧಿಗೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ–2ರಲ್ಲಿ ಲಭ್ಯವಿರುವ ಒಟ್ಟು 15 ಸ್ಥಾನಗಳಿಗೆ ಶಿಶಿಕ್ಷು ತರಬೇತಿದಾರರನ್ನು ಆಯ್ಕೆ ಮಾಡಲು ಕಲಬುರಗಿ ಕೇಂದ್ರ ಬಸ್‌ನಿಲ್ದಾಣದ ಮೊದಲನೇ ಮಹಡಿಯಲ್ಲಿರುವ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ–2ರ ವಿಭಾಗೀಯ ಕಚೇರಿಯಲ್ಲಿ 2025ರ ಜೂನ್ 4 ರಂದು ಬೆಳಿಗ್ಗೆ 11 ರಿಂದ ಸಂಜೆ 4 ಗಂಟೆಯೊಳಗೆ ಪಾಸಾ ವೃತ್ತಿಗಾಗಿ ಸಂಬಂಧಿಸಿದಂತೆ ಅಭ್ಯರ್ಥಿಗಳಿಗೆ ಮಾತ್ರ ನೇರವಾಗಿ ಮೌಖಿಕ ಸಂದರ್ಶನ (Walk-in-Interview) ವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ–2 ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಹ ಅಭ್ಯರ್ಥಿಗಳು ಐ.ಟಿ.ಐ. ಕೋಪಾ ವೃತ್ತಿಯಲ್ಲಿ ತೇರ್ಗಡೆಯಾಗಿರಬೇಕು. ನೇಮಕಗೊಳ್ಳುವ ಶಿಶುಕ್ಷ ತರಬೇತಿದಾರರಿಗೆ ಅದೇ ವೃತ್ತಿಯಲ್ಲಿ ಐ.ಟಿ.ಐ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಲ್ಲಿ ತರಬೇತಿಯಲ್ಲಿ ರಿಯಾಯಿತಿ ನೀಡಲಾಗುತ್ತದೆ. ಎಲ್ಲಾ ಮೂಲ ದಾಖಲಾತಿಗಳು, ಆಧಾರ್ ಕಾರ್ಡ್ ಮತ್ತು ಕಡ್ಡಾಯವಾಗಿ ಇ–ಮೇಲ್ ವಿಳಾಸದೊಂದಿಗೆ 1 ಝೆರಾಕ್ಸ್ ಪ್ರತಿ, ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ಮೇಲ್ಕಂಡ ದಿನದಂದು ನಡೆಯುವ ಮೌಖಿಕ ಸಂದರ್ಶನಕ್ಕೆ ಹಾಜರಾಗಬೇಕು. ಖಾಲಿಯಿರುವ ಸ್ಥಾನಗಳ ವಿವರ, ನೇಮಕಾತಿಯ ಷರತ್ತು ಹಾಗೂ ಮತ್ತಿತರ ನಿಬಂಧನೆ ಕುರಿತು ಹೆಚ್ಚಿನ ಮಾಹಿತಿಗಾಗಿ ಕ.ಕ.ರ.ಸಾ. ನಿಗಮ ಕಲಬುರಗಿ ವಿಭಾಗ–2ರ ಕಚೇರಿಯನ್ನು ಕಛೇರಿ ಸಮಯದಲ್ಲಿ ಖುದ್ದಾಗಿ ಈ ಕಛೇರಿಗೆ ಹಾಜರಾಗಿ ಅಥವಾ ಮೊಬೈಲ್ ಸಂಖ್ಯೆ 7760998750,

# ರಕ್ತದಾನದಿಂದ ಜೀವ ಉಳಿಸಬಹುದು ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 28–ಸ್ವಯಂಪ್ರೇರಿತ ರಕ್ತದಾನದಿಂದ ಜನರ ಜೀವ ಉಳಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಬುಧವಾರದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರಕ್ತ ಸುರಕ್ಷತಾ ಟಾಸ್ಕ್ ಫೋರ್ಸ್ ಸಮಿತಿ ಹಾಗೂ ಏಡ್ಸ್ ನಿಯಂತ್ರಣ ಘಟಕ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ದೇವಿನಗರ, ಯೋಗ ತರಬೇತಿ ಕೇಂದ್ರ ಪಾರ್ವತಿನಗರ, ಎಸ್‌ಪಿ ಸರ್ಕಲ್ ಆಟೋ ಚಾಲಕರ ಸಂಘ ಇವರ ಸಹಯೋಗದಲ್ಲಿ ಸ್ಪಂದನ ಬ್ಲಡ್‌ಬ್ಯಾಂಕ್ ವತಿಯಿಂದ ದೇವಿನಗರದಲ್ಲಿ ಹಮ್ಮಿಕೊಂಡಿದ್ದ ಸ್ವಯ ಪ್ರೇರಿತ ರಕ್ತದಾನ ಶಿಬಿರದಲ್ಲಿ ದಾನ ಮಾಡಿದ ರಕ್ತದಾನಿಗಳಿಗೆ ಅಭಿನಂದಿಸಿ ಅವರು ಮಾತನಾಡಿದರು.

ಜೀವಂತವಿರುವಾಗಲೇ ತಮ್ಮ ದೇಹದಿಂದ ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ, ಜಾತಿ ಧರ್ಮಗಳ ಎಲ್ಲೆಯಿಲ್ಲದೆ, ಗಂಡು–ಹೆಣ್ಣು ಎಂಬ ಭೇದವಿಲ್ಲದೆ ದಾನ ಮಾಡಬಹುದಾದ ಮತ್ತು ಇನ್ನೊಬ್ಬರ ಜೀವ ಉಳಿಸಲು ಸಹಾಯಕವಾಗುವುದೆಂದರೆ ಅದು ಮನುಷ್ಯನ ರಕ್ತವಾಗಿದೆ ಎಂದರು.

ಒಬ್ಬರಿಂದ ಪಡೆದ ರಕ್ತವನ್ನು ಹೋಲ್ ಬ್ಲಡ್, ಪ್ಲೇಟ್‌ಲೆಟ್ಸ್, ಪ್ಲಾಸ್ಮಾ, ಪ್ಯಾಕಡ್ ಸೆಲ್ಸ್, ಎಂಬ ನಾಲ್ಕು ರೂಪದಲ್ಲಿ ವ್ಯಕ್ತಿಯ ಜೀವ ಉಳಿಸಲು ಬಳಸಬಹುದಾಗಿದ್ದು, ಪ್ರಸ್ತುತ ದಿನಗಳಲ್ಲಿ ರಕ್ತದ ಅವಶ್ಯಕತೆಯಿರುವುದರಿಂದ 18 ವರ್ಷ ಮೇಲ್ಪಟ್ಟ ಆರೋಗ್ಯವಂತ ಪ್ರತಿಯೊಬ್ಬರೂ ರಕ್ತದಾನ ಮಾಡುವ ಮೂಲಕ ಹಲವಾರು ಜನರ ಜೀವ ಉಳಿಸುವ ಕಾರ್ಯದಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದರು.

45 ಕೆಜಿ ಮೇಲ್ಪಟ್ಟ ಹಾಗೂ 12.5 ಗ್ರಾಮ್‌ಗಿಂತ ಹೆಚ್ಚು ಹಿಮೋಗ್ಲೋಬಿನ್ ಇರುವ 18 ವರ್ಷ ಮೇಲ್ಪಟ್ಟ ಮಹಿಳೆಯರು ಪ್ರತಿ ನಾಲ್ಕು ತಿಂಗಳಿಗೊಮ್ಮೆ, ಪುರುಷರು ಪ್ರತಿ ಮೂರು ತಿಂಗಳಿಗೊಮ್ಮೆ, ರಕ್ತದಾನ ಮಾಡುವ ಮೂಲಕ ರಕ್ತಹೀನತೆಯಿಂದ ಬಳಲುವ ಗರ್ಭಿಣಿ ಸ್ತ್ರೀಯರಿಗೆ, ಶಸ್ತ್ರಚಿಕಿತ್ಸಾ ಹೆರಿಗೆ ವೇಳೆ ಮತ್ತು ಅಪಘಾತಗಳು, ತುರ್ತು ಶಸ್ತ್ರಚಿಕಿತ್ಸೆಗಳ ಸಂದರ್ಭಕ್ಕಾಗಿ ಹಾಗೂ ಕ್ಯಾನ್ಸರ್ ರೋಗಿಗಳಿಗೆ ಥ್ಯಾಲಿಸೀಮಿಯಾ, ಹಿಮೋಫಿಲಿಯಾ ಮುಂತಾದ ರೋಗಿಗಳ ಜೀವವನ್ನು ಉಳಿಸಲು ಸಹಾಯಕವಾಗಲಿದೆ ಎಂದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಮಾತನಾಡಿ ಸೊಳ್ಳೆ ಕಚ್ಚುವಿಕೆಯಿಂದ ಹರಡುವ ಡೆಂಗ್ಯುದಂತಹ ಕಾಯಿಲೆಗೆ ಒಳಗಾಗಿ ಪ್ಲೇಟ್‌ಲೇಟ್ಸ್ ಕೊರತೆ–ಯಾದಾಗ ರಕ್ತ ಅಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದರು.

ರಕ್ತವನ್ನು ಕೃತಕವಾಗಿ ಸೃಷ್ಟಿಸಲು ಸಾಧ್ಯವಿಲ್ಲ. ರಕ್ತವೇ ದೇಹದ ಜೀವನಾಡಿಯಾಗಿದ್ದು, ರಕ್ತ–ಕ್ಕೆ ಪರ್ಯಾಯವಾದ ವಸ್ತು ಇಲ್ಲದೆ ಇರುವುದರಿಂದ ಇನ್ನೊಬ್ಬ ವ್ಯಕ್ತಿಯ ರಕ್ತದಾನದ ಮೂಲಕ ಮಾತ್ರ ರಕ್ತ ಪಡೆಯಬಹುದಾಗಿದೆ. ರಕ್ತದಾನ ಮಾಡುವ ಮೂಲಕ ದಾನಿಗಳು ತಮ್ಮ ಆರೋಗ್ಯ ಉಲ್ಲಾಸುಯವಾಗಿಸಿಟ್ಟುಕೊಳ್ಳುವುದರ ಜೊತೆಗೆ ಇನ್ನೊಬರ ಜೀವ ಉಳಿಸಲು ಮುಂದೆ ಬರಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ದೇವಿನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಸುಧಾರಾಣಿ, ಬ್ಲಡ್‌ಬ್ಯಾಂಕ್ ವೈದ್ಯರಾದ ಡಾ.ಪ್ರಕಾಶ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಯೋಗ ಕೇಂದ್ರದ ಪ್ರಕಾಶ, ಮಹಿಳಾ ಮುಖಂಡರಾದ ಸುಮಾರೆಡ್ಡಿ, ರತ್ನ, ಸಿಬ್ಬಂದಿಯವರಾದ ಶ್ವೇಥಾ, ರಾಮಕೃಷ್ಣ, ಪ್ರಶಾಂತ್, ಕೇಶವ, ಅಂಬರೀಶ್ ಸೇರಿದಂತೆ ಆಶಾ ಕಾರ್ಯಕರ್ತೆಯರು, ದಾನಿಗಳು ಉಪಸ್ಥಿತರಿದ್ದರು.

# ಶಿಕ್ಷಣ ಸಂಘಟನೆ ಹೋರಾಟದ ಮೂಲಕ ಯಶಸ್ಸು ಸಾಧ್ಯ : ಕ್ಯಾಪ್ಟನ್ ಮಹೇಶ್ ಮಲಗಿತ್ತಿ




ಮಲ್ಲಮ್ಮ ನುಡಿ ವಾರ್ತೆ

ಕುಕನೂರು : ತಾಲೂಕಿನ ಇಟಗಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಬುಧವಾರ ದಂದು ಭಗೀರಥ ಮಹಷಿ9 ಯುವಕ ಸಂಘದಿಂದ ರಾಜ ಋಷಿ ಭಗೀರಥ ಮಹರ್ಷಿ ಜಯಂತಿ ಹಾಗೂ 2024–25ನೇ ಸಾಲಿನ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇಕಡಾ 85 ಕ್ಕಿಂತ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ

ಭಗೀರಥ ಸಮಾಜದ ನಿವೃತ್ತ ಸರ್ಕಾರಿ ನೌಕರರಿಗೆ ಸನ್ಮಾನ, ಕಾರ್ಯಕ್ರಮ ಅಂಗವಾಗಿ ಏರ್ಪಡಿಸಿದ್ದ ಕಾರ್ಯಕ್ರಮವನ್ನು ಊರಿನ ಪ್ರಮುಖ ಬೀದಿಗಳಲ್ಲಿ 101 ಕುಂಭ, ಕಳಶ ಆರತಿಯೊಂದಿಗೆ ಶ್ರೀ ಭಗೀರಥ ಮಹರ್ಷಿ ಭಾವಚಿತ್ರ ಮೆರವಣಿಗೆ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಉಪವಿಭಾಗೀಯ ಜಿಲ್ಲಾಧಿಕಾರಿಗಳು ಮಾತನಾಡಿ ಭಗೀರಥ ಮಹರ್ಷಿಯವರ ಜಯಂತಿಯನ್ನು ಆಚರಿಸುವುದರಿಂದ ಇಂದಿನ ಯುವ ಪೀಳಿಗೆಯವರು ಅವರ ಹಿರಿಯರ ಆಶಯಗಳಿಗೆ ಗೌರವ ನೀಡುವುದು, ಗುರಿ ಸಾಧನೆಗಾಗಿ ಅಚಲ ನಿರ್ಧಾರ ಕೈಗೊಳ್ಳಬೇಕು, ಶೈಕ್ಷಣಿಕವಾಗಿ ಹಿಂದುಳಿದಿರುವ ಉಪ್ಪಾರ ಸಮುದಾಯ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ದೊಡ್ಡ ಹುದ್ದೆಗಳನ್ನು ಪಡೆದುಕೊಳ್ಳುವಂತಾಗಬೇಕು' ಎಂದು ಸಲಹೆ ನೀಡಿದರು.

ಡಾ. ಪಕೀರಪ್ಪ ವಜ್ರಬಂಡಿ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಗೀರಥ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿ ಭಗೀರಥರು ತೋರಿದ ಸಮಾಜಪರ ಕಾಳಜಿ, ಕಳಕಳಿ ಅನುಸರಿಸಬೇಕು. ಸತ್ಕಾರ್ಯಗಳಿಂದ ಜನರಿಗೆ ಒಳ್ಳೆಯದಾಗಬೇಕು. ಭೂಮಿಗೆ ಗಂಗೆಯನ್ನು ಕರೆತರುವಲ್ಲಿ ಕಠೋರ ತಪಸ್ಸು ಮಾಡಿದ ಭಗೀರಥರು ಸವಾಲುಗಳಿಗೆ ಎಂದಿಗೂ ಎದೆಗುಂದಲಿಲ್ಲ.

ಸಮಾಜಕ್ಕೆ ಒಳಿತು ಮಾಡಲು ಬ್ರಹ್ಮದೇವರು, ಶಿವನನ್ನು ಹಾಗೂ ಗಂಗೆಯನ್ನು ಒಲಿಸಿಕೊಂಡು ನೀರಿನ ಕೊರತೆ ನೀಗಿಸಿದರು ಇಂತಹ ಮಹಾನ್ ಯೋಗಿ ಪುರುಷರ ತತ್ವ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಉಪನ್ಯಾಸವನ್ನು ನೀಡಿದರು. ಪ್ರಾಸ್ತಾವಿಕ ನುಡಿಗಳನ್ನು ಸಮಾಜದ ಯುವಕ ಕಲ್ಲಪ್ಪ ಬೋಕಿ ನೆರವೇರಿಸಿದರು. ಕಾರ್ಯಕ್ರಮದ ನಿರೂಪಣೆಯನ್ನು ಲಕ್ಷ್ಮಣ ಕೆರಳ್ಳಿ ನೆರವೇರಿಸಿದರು. ಸ್ವಾಗತ ಕಾರ್ಯಕ್ರಮವನ್ನು ಬಸವರಾಜ ಅಡೆಯಪ್ಪನವರ್ ನೆರವೇರಿಸಿದರು. ಈ ಸಂದರ್ಭದಲ್ಲಿ

ಗ್ರಾಮದ ಮುಖಂಡರಾದ ಮುತ್ತಯ್ಯ ಕಳ್ಳಿಮಠ, ರತ್ನವ್ವ ಹಂಚಾಳಪ್ಪ ಭಜಂತ್ರಿ ಗ್ರಾಮ ಪಂಚಾಯತ್ ಅಧ್ಯಕ್ಷರು, ಶಿವಕುಮಾರ ಗುಳಗಣ್ಣನವರ್, ಬಸವಪ್ರಭು ಪಾಟೀಲ್, ಹನುಮಂತಪ್ಪ ಉಪ್ಪಾರ, ಬಸವರಾಜ್ ಹೊಂಬಾಳ, ರಾಜಶೇಖರ ಹೊಂಬಾಳ, ಶರಣಪ್ಪ ದೇವರಮನಿ, ರುದ್ರಮುನಿ ಮಠಪತಿ, ನಾಗರಾಜ ಉಮಚಗಿ, ಅಂದಾನಪ್ಪ ಅಂಗಡಿ, ಸಿದ್ದಪ್ಪ ಮಾಸ್ತರ್ ಸಜ್ಜನ್, ಬಸವನಗೌಡ ಪೊಲೀಸ್ ಪಾಟೀಲ್, ಮಹಾದೇವಪ್ಪ ಹಳ್ಳಾಳ, ಶರಣಪ್ಪ ಕೆಇಬಿ, ಹಾಗೂ ಸಮಾಜದ ಗುರುಹಿರಿಯರು ಮುಖಂಡರು ಗಣ್ಯರು ಇತರರು ಇದ್ದರು.

# ಜೂನ್ 5 ರಂದು ಉದ್ಯೋಗ/ ಶಿಶಿಕ್ಷು ಮೇಳ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.28–ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜೇವರ್ಗಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಇದೇ ಜೂನ್ 5 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಉದ್ಯೋಗ/ಶಿಶಿಕ್ಷು ಮೇಳ" ಏರ್ಪಡಿಸಲಾಗಿದೆ ಎಂದು ಜೇವರ್ಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

"ಥಗ್ ಲೈಫ್" ಚಿತ್ರ ಕರ್ನಾಟಕದಲ್ಲಿ ಯಾವ ಚಿತ್ರಮಂದಿರದಲ್ಲೂ

# ಬಿಡುಗಡೆ ಆಗಬಾರದು. ರಕ್ಷಣಾ ವೇದಿಕೆ (ಪ್ರವೀಣ್ ಬಣ) ಒತ್ತಾಯ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಮಿಳು ನಟ ಕಮಲ್ ಹಾಸನ್ ಅವರು ಕನ್ನಡ ಭಾಷೆಗೆ ಅವಹೇಳನ ಮಾಡಿದ್ದು, ತಮಿಳುನಿಂದಲೇ ಕನ್ನಡ ಭಾಷೆ ಬಂದಿದ್ದು, ನೀವು ಅದಕ್ಕೆ ತಲೆಬಾಗಲೇಬೇಕು ಎಂಬ ವಿವಾದಾತ್ಮಕ ಹೇಳಿಕೆ ನೀಡಿದ್ದು, ಇದು ನಮ್ಮ ಕನ್ನಡಿಗರ ಆಕ್ರೋಶಕ್ಕೆ ಕಾರಣವಾಗಿದೆ. ಅವರಿಗೆ ಕರ್ನಾಟಕದಲ್ಲಿ ಅವರ ಸಿನಿಮಾ ಓಡಬೇಕು, ಸಂಪಾದನೆ ಆಗಬೇಕು. ಆದರೆ ಕನ್ನಡದ ಬಗ್ಗೆ ಅವಹೇಳನವನ್ನು ಮಾಡುತ್ತಿದ್ದಾರೆ.

ಕಾರಣ ಅವರ ಚಲನಚಿತ್ರವನ್ನು ಕರ್ನಾಟಕದಲ್ಲಿ ಬ್ಯಾನ್ ಮಾಡಬೇಕು. ಈಗಾಗಲೇ ಅವರು ನೂತನ ಸಿನಿಮಾ "ಥಗ್ ಲೈಫ್" ಚಿತ್ರ ಕರ್ನಾಟಕದಲ್ಲಿ ಯಾವ ಚಿತ್ರಮಂದಿರದಲ್ಲೂ ಬಿಡುಗಡೆ ಆಗಬಾರದು. ಒಂದು ವೇಳೆ ಅವರ ಚಿತ್ರವನ್ನು ಬಿಡುಗಡೆ ಮಾಡಿದಲ್ಲಿ ಉಗ್ರ ಹೋರಾಟವನ್ನು ಹಮ್ಮಿಕೊಳ್ಳಲಾಗುತ್ತದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ( ಪ್ರವೀಣ್ ಬಣ) ಸಂಘಟನೆ ವತಿಯಿಂದ

ಸಹಾಯಕ ಆಯುಕ್ತರು ಮುಖಾಂತರ ಮಾನ್ಯ ಮುಖ್ಯಮಂತ್ರಿ ಸಿಎಂ ಸಿದ್ದರಾಮಯ್ಯ

ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರವೇ ಅಧ್ಯಕ್ಷ ಆಂಜನೇಯ ಭಂಡಾರಿ, ಕುರುಮೇಶ ನಾಯಕ, ಅಶೋಕ ನಾಯ್ಕ, ಭಿಮೇಶ ಎಲ್ ನಾಯಕ, ಸಲೀಂ ಖಾನ್, ಶಿವು ಪತ್ತಾರ, ಸಿದ್ದು ಚಲುವಾದಿ, ವಿಜಯ ಕುಮಾರ್, ಅಭಿಷೇಕ ನಾಯಕ, ಮುತ್ತುರಾಜ್, ಪ್ರಸನ್ನ ನಾಯಕ, ನಾಗರಾಜ್ ಸೇರಿದಂತೆ ಉಪಸ್ಥಿತರಿದ್ದರು.

# ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಅರ್ಜಿ ಆಹ್ವಾನ



ಹುಣಸಗಿ : ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಕರ್ನಾಟಕ ರಾಜ್ಯ ನೌಕರರ ಸಂಘ ಬೆಂಗಳೂರು ಅರ್ಜಿ ಅವಾನಿಸಿದ್ದು ಸೂಕ್ತ ಪ್ರಕಟಣೆಗೆ ಒಳಪಡುವಂತೆ ಎಸ್ ಎಸ್ ಎಲ್ ಸಿ ಪಿಯುಸಿಯಲ್ಲಿ ಶೇಕಡ 90% ಕ್ಕಿಂತ ಹೆಚ್ಚು ಅಂಕ ಪಡೆದವರು ಮೇ 31 ಒಳಗಾಗಿ ಆನ್ಲೈನ್ ಮೂಲಕ ಅರ್ಜಿ ನೊಂದಾಯಿಸಬೇಕೆಂದು ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಅಂಬ್ರೇಶ ಮಾಲಗತ್ತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2024 – 25 ನೇ ಸಾಲಿನಲ್ಲಿ ಎಸೆಸೆಲ್ಸಿ ಹಾಗೂ ಪಿಯುಸಿ ಎಲ್ಲಿ ಶೇಕಡ 90% ಕ್ಕಿಂತ ಅಧಿಕ ಅಂಕಗಳಿಸಿದ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಿದ್ದು ಅರ್ಹ ಅಭ್ಯರ್ಥಿಗಳು ಆನ್ಲೈನ್ ವಿಳಾಸ https://ks-geanews.blogspot.com ಮೂಲಕ ಅರ್ಜಿ ಸಲ್ಲಿಸಿ ಎಂದು ಪ್ರಕಟಣೆಯಲ್ಲಿ ತಿಳಿಸಿದರು. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ತಂದೆ – ತಾಯಿ ಕರ್ನಾಟಕ ರಾಜ್ಯ ಸರ್ಕಾರದ ಸ್ವಯಂ ನೌಕರರ ಆಗಿರಬೇಕು ಸಂಘವು ನಿಗದಿ ಪಡಿಸಿದ ನಮೂನೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ ಸಂಘದ ಸಂಬಂಧಿಸಿದ ತಾಲೂಕ ಶಾಖೆಯ ನೌಕರರ ಸಂಘದ ಅಧ್ಯಕ್ಷರ ರು ಜು ಮೋಹರಿನೊಂದಿಗೆ ದೃಢೀಕರಿಸಿ ಆನ್ಲೈನ್ ನಲ್ಲಿ ಅಪ್ಲೋಡ್ ಮಾಡಿಕೊಳ್ಳಬೇಕು. ಹಾಗೂ ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ತಾಲೂಕ ಅಧ್ಯಕ್ಷರಾದ ಅಂಬ್ರೇಶ ಮಾಲಗತ್ತಿ ಅವರು ಮನವಿ ಮಾಡಿದರು.

# ಅಂಬುಲೆನ್ಸನ್ ಚಾಲಕರ ನ್ಯಾಷನಲ್ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಹುಣಸಗಿ: ಯಾದಗಿರಿ ಜಿಲ್ಲೆಯ ಹುಣಸಗಿ ಪಟ್ಟಣದಲ್ಲಿ ಇಂದು ತಾಲೂಕು ಆಸ್ಪತ್ರೆ ಆವರಣದಲ್ಲಿ 2.2... 108 2.2.2. ಚಾಲಕರ ದಿನಾಚರಣೆಯನ್ನು ಕೇಕ್ ಕತ್ತರಿಸುವ ಮೂಲಕ ಆಚರಿಸಲಾಯಿತು.

108 ಅಂಬ್ಯುಲೆನ್ಸನ್ ಚಾಲಕರ ನ್ಯಾಷನಲ್ ದಿನಾಚರಣೆಯನ್ನು ಉದ್ದೇಶಿಸಿ ಎಸ್.ಬಿ.ಪಾಟೀಲ್ ಮಾತನಾಡುತ್ತಾ ಅಂಬ್ಯುಲೆನ್ಸ್ ಚಾಲಕರ ಸೇವೆ ಅತ್ಯಂತ ಪ್ರಮುಖವಾದದ್ದು, ತಮ್ಮ ಪ್ರಾಣವನ್ನು ಪಣಕ್ಕಿಟ್ಟು ರೋಗಿಯ ಜೀವ ಉಳಿಸಲು ನಿಸ್ವಾರ್ಥ ಸೇವೆ ಶ್ಲಾಘನೀಯವಾದದ್ದು ಎಂದು ಅಭಿನಂದನೆಗಳನ್ನಾ ತಿಳಿಸಿದರು. ಈ ಸಂದರ್ಭದಲ್ಲಿ ಯಾದಗಿರಿ ಜಿಲ್ಲೆಯ 108 ನ ವ್ಯವಸ್ಥಾಪಕ ರಾಘವೇಂದ್ರ ಜಿಲ್ಲೆಯ 108 ಅಂಬ್ಯುಲೆನ್ಸ್ ಸಿಬ್ಬಂದಿಗಳು & ಆಸ್ಪತ್ರೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅತಿಥಿ ಶಿಕ್ಷಕರ, ಉಪನ್ಯಾಸಕರ ಆಯ್ಕೆ: ಜೂ.01 ರಂದು ಪ್ರವೇಶ ಪರೀಕ್ಷೆ

ಬಳ್ಳಾರಿ,ಮೇ 28–ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಕಾಲೇಜು ಮತ್ತು ಮೌಲನಾ ಆಜಾದ್ ಮಾದರಿ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ಅತಿಥಿ ಶಿಕ್ಷಕ ಮತ್ತು ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲು ಜೂ.01 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 01 ಗಂಟೆಯವರೆಗೆ ಅಲ್ಲಿಪುರದ ಹೊಸಪೇಟೆ ರಸ್ತೆಯ ಬಿಐಟಿಎಂ ಕಾಲೇಜು ಹತ್ತಿರದ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ನಿಗದಿಪಡಿಸಲಾಗಿದೆ. ಅತಿಥಿ ಶಿಕ್ಷಕರ ಮತ್ತು ಉಪನ್ಯಾಸಕರ ಹುದ್ದೆಗೆ ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಕಚೇರಿಗೆ ಭೇಟಿ ನೀಡಿ ಪರೀಕ್ಷೆಯ ಪ್ರವೇಶ ಪತ್ರ ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಮೌಲನಾ ಆಜಾದ್ ಭವನದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ(ದೂ.08392–200125/224) ಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಕಂಬದಿಂದ ದೂರವಿರಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.28–ಪ್ರಸ್ತುತ ಮಳೆಗಾಲ ಇರುವುದರಿಂದ ನಗರದಲ್ಲಿ ವಿದ್ಯುತ್ ಬೀದಿ ದೀಪಗಳ ಕಂಬಗಳಿಗೆ ಶಾರ್ಟಸರ್ಕಿಟ್, ಓವರ್ ವೋಲ್ಟೇಜ್ ಪಾಲ್ಟ್, ಚೋಕ್ ಫೆಲ್ಯೂರ್ ಆಗುವ ಸಂಭವವಿರುತ್ತದೆ. ಇದರಿಂದ ಪ್ರಾಣಹಾನಿಯಾಗುವ ಸಂಭವವಿದ್ದು ಕೆಲವು ಪ್ರದೇಶಗಳಲ್ಲಿ ಸಾರ್ವಜನಿಕರು ತಮ್ಮ ಮನೆಯ ಮುಂದಿನ ವಿದ್ಯುತ್ ಕಂಬಗಳಿಗೆ ಜೆ.ಆಯ್ ವೈರ್ ಮತ್ತು ಪ್ರಾಣಿಗಳನ್ನು ಕಟ್ಟುತ್ತಿರುವುದು ಕಂಡುಬಂದಿರುತ್ತದೆ.

ಆದ್ದರಿಂದ ಸಾರ್ವಜನಿಕರು ಯಾವುದೇ ಸಂದರ್ಭದಲ್ಲಿ ಕಂಬಗಳನ್ನು ಮುಟ್ಟಬಾರದು, ಕಂಬಗಳಿಗೆ ಯಾವುದೇ ರೀತಿ ತಂತಿಗಳನ್ನು ಹಾಗೂ ಪ್ರಾಣಿಗಳನ್ನು ಕಟ್ಟಬಾರದು ಮತ್ತು ವಿದ್ಯುತ್ ಕಂಬಗಳ ಸಮೀಪ ಮಕ್ಕಳನ್ನು ಆಟವಾಡಲು ಬಿಡಬಾರದೆಂದು ಮತ್ತು ಬೀದಿ ದೀಪಗಳ ಕಂಬಗಳಲ್ಲಿ ವಿದ್ಯುತ್ ಪ್ರವಹಿಸುತ್ತಿದ್ದರೆ ತಕ್ಷಣವೇ ನಗರಸಭೆ ಸಹಾಯವಾಣಿ ಸಂಖ್ಯೆಗಳಿಗೆ (ಬಸವರಾಜ –9036466538, ರಮೇಶ ರಬಕವಿ–8660613961, ಎನ್.ಎಸ್.ಖಾಜಿ–9740102827) ದೂರು ನೀಡಲು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೇಡಿಕೆ ಈಡೇರಿಕೆಗೆ ಪ್ರಯತ್ನ ಶಾಸಕ ಮೇಟಿ ಭರವಸೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.28– ನಗರದಲ್ಲಿ ಪೌರಕಾರ್ಮಿಕರು ನಡೆಸಿರುವ ಅನಿರ್ದಿಷ್ಟಕಾಲದ ಮುಷ್ಕರದ ಸ್ಥಳಕ್ಕೆ ಶಾಸಕ ಎಚ್.ವೈ. ಮೇಟಿ ಬುಧವಾರ ಭೇಟಿ ನೀಡಿ, ಬೇಡಿಕೆಗಳ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಕಾರ್ಮಿಕರ ಸಮಸ್ಯೆಗಳನ್ನು ಆಲಿಸಿದ ಶಾಸಕರು, ತಮ್ಮ ನ್ಯಾಯ ಸಮ್ಮತ ಬೇಡಿಕೆಗಳ ಕುರಿತು ಸರ್ಕಾರದ ಮಟ್ಟದಲ್ಲಿ ಮಾತನಾಡಿ ಸಮಸ್ಯೆ ಪರಿಹರಿಸಲು ಸಹಕಾರ ನೀಡುವುದಾಗಿ ಹೇಳಿದರು.

ಮುಖ್ಯಮಂತ್ರಿಗಳು ಹಾಗೂ ಪೌರಾಡಳಿತ ಸಚಿವರ ಜೊತೆ ಚರ್ಚಿಸಿ ಬೇಡಿಕೆ ಈಡೇರಿಸುಂತೆ ಕೋರುವುದಾಗಿ ತಿಳಿಸಿದ ಶಾಸಕ ಮೇಟಿ, ಮಳೆಗಾರ ಪ್ರಾರಂಭವಾಗಿರುವುದರಿಂದ ನಗರದಲ್ಲಿ ನೈರ್ಮಲ್ಯ ಕಾಪಾಡುವ ವಿಷಯದಲ್ಲಿ ಪೌರಕಾರ್ಮಿಕರು ಹಿಂದೆ ಸರಿಯಬಾರದು ಎಂದು ಮನವಿ ಮಾಡಿದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ, ನಾಗರಾಜ ಹದ್ಲಿ, ಬಸವಂತಪ್ಪ ಮೇಟಿ, ನಗರಸಭೆ ಸದಸ್ಯರಾದ ಚೆನ್ನವೀರ ಅಂಗಡಿ, ತೌಸಿಪ ಬಾಗಲವಾಡ, ಅಮಿನಸಾಬ ರಕ್ಕಸಗಿ ಮುಷ್ಕರ ನಿರತರನ್ನು ಭೇಟಿ ಮಾಡಿದರು.

## ರಾಜ್ಯಮಟ್ಟದ ಸಂಶೋಧನಾ ಕಮ್ಮಟದ ಸಮಾರೋಪ

# ನಾಟಕಗಳಿಂದ ನೈತಿಕ ಮೌಲ್ಯಗಳ ಅರಿವು : ಡಾ.ಅರುಣಕುಮಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.28–ನಾಟಕ ಮತ್ತು ಕಲೆ ಶ್ರೀಮಂತಿಕೆಯ ಪರಂಪರೆ ಹೊಂದಿದ್ದು, ಪ್ರಾಚೀನ ಕಾಲದಿಂದಲೂ ನಾಟಕಗಳು ಜನರಿಗೆ ನೈತಿಕ ಪಾಠ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಕಲಿಸುವಲ್ಲಿ ಸಹಕಾರಿಯಾಗಿವೆ ಎಂದು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.

ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ನಾಟಕ ವಿಭಾಗ, ಗುಳೇದಗುಡ್ಡದ ರಾಷ್ಟ್ರೀಯ ಸಂಶೋಧನಾ ವೇದಿಕೆ ಇವರ ಸಹಯೋಗದಲ್ಲಿ ಜರುಗಿದ ಕನ್ನಡ ನಾಟಕಗಳ ವಿಭಿನ್ನ ನೆಲೆಗಳು ಕುರಿತ ಒಂದು ದಿನದ ರಾಜ್ಯಮಟ್ಟದ ಸಂಶೋಧನಾ ಕಮ್ಮಟದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಾಟಕಗಳು ಸಾಮಾಜಿಕ ಬದಲಾವಣೆ ತರುವ, ವೈವಿಧ್ಯಮಯ ಕತೆ ಹೇಳುವಿಕೆ ಮತ್ತು ದೃಶ್ಯ ಅಭಿವ್ಯಕ್ತಿಯನ್ನು ಒಳಗೊಂಡಂತೆ ವಿಕಸನಗೊಂಡಿದೆ. ನಾಟಕ ವಿದ್ಯಾರ್ಥಿಗಳಿಗೆ ಸೃಜನಶೀಲತೆ ಮತ್ತು ವಿಮರ್ಶಾತ್ಮಕ ಚಿಂತನೆಯನ್ನು ಬೆಳೆಸುವಲ್ಲಿ ಅವಿಭಾಜ್ಯ ಅಂಗವಾಗಿದ್ದು, ಅನುಭವದ ಕಲಿಕೆಯ ಮೂಲಾಧಾರವಾಗಿವೆ ಎಂದು ಡಾ.ಗಾಳಿ ಹೇಳಿದರು.

ಸಾಹಿತ್ಯ ಅಕಾಡೆಮಿ ಸದಸ್ಯ ಮಹಾದೇವ ಬಸರಕೋಡ ಮಾತನಾಡಿ, ಕಲೆ ಮತ್ತು ನಾಟಕದ ಮೂಲಕ ವೈವಿಧ್ಯಮಯ ಸಂಪ್ರದಾಯಗಳು, ಇತಿಹಾಸ, ದೃಷ್ಟಿಕೋನಗಳ ಬಗೆಗೆ ಕಲಿಯುವುದು ಸಹಾನೂಭೂತಿ ಮತ್ತು ಜಾಗತಿಕ ಜಾಗೃತಿ ಬೆಳೆಸುತ್ತದೆ ಇಂತಹ ಜಾಗೃತಿಯನ್ನು ವಿದ್ಯಾರ್ಥಿಗಳಲ್ಲಿ ಮೂಡಿಸುವ ನಿಟ್ಟಿನಲ್ಲಿ ಆಯೋಜಿಸಿದ ಸಂಶೋಧನಾ ಕಮ್ಮಟ ಅರ್ಥಪೂರ್ಣತೆ ಪಡೆದುಕೊಂಡಿದೆ ಎಂದರು.

ರಂಗಕರ್ಮಿ ಮಲ್ಲಿಕಾರ್ಜುನ ಸಜ್ಜನ ಕಮ್ಮಟದ ಅನುಭವ ಕುರಿತು ಮಾತನಾಡಿ, ನಾಟಕ ಮತ್ತು ಕಲೆಗಳು ಪಠ್ಯೇತರ ಚಟುವಟಿಕೆಗಳಲ್ಲ ಬದಲಾಗಿ ಸಮಗ್ರ ಶಿಕ್ಷಣದ ಅಗತ್ಯ ಅಂಶಗಳಾಗಿದ್ದು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಇಂತಹ ರಾಜ್ಯ ಮಟ್ಟದ ಕಮ್ಮಟ ನಡೆಯುತ್ತಿರುವುದು ಎಲ್ಲರಿಗೂ ಮಾದರಿಯಾಗಿದೆ ಎಂದರು.

ಹಂಪಿ ವಿಶ್ವವಿದ್ಯಾಲಯದ ನಾಟಕ ವಿಭಾಗದ ಮುಖ್ಯಸ್ಥ ಡಾ.ವೀರೇಶ ಬಡಿಗೇರ ಪ್ರಮಾಣ ಪತ್ರ ವಿತರಿಸಿ ಮಾತನಾಡಿ, ದೂರಸರಿಯುತ್ತಿರುವ ದೇಶಿಯ ಕಲೆ, ನಾಟಕ, ಸಾಹಿತ್ಯ, ಸಂಸ್ಕೃತಿಯನ್ನು ಪ್ರತಿಯೊಬ್ಬರು ಉಳಿಸಿ ಬೆಳಸಬೇಕಾಗಿದೆ ಎಂದು ಹೇಳಿದರು. ರಾಷ್ಟ್ರೀಯ ಸಂಶೋಧನಾ ವೇದಿಕೆಯ ಗೌರವಾಧ್ಯಕ್ಷ ಡಾ.ಸಂಗಮೇಶ ಕಲ್ಯಾಣಿ, ಡಾ.ಜಿ.ಜಿ.ಹಿರೇಮಠ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಪ್ರೊ.ಪರಸಪ್ಪ ತಳವಾರ ಪ್ರಾರ್ಥಿಸಿದರು. ಡಾ.ಸುಮಂಗಲಾ ಮೇಟಿ ಸ್ವಾಗತಿಸಿದರು. ಪ್ರೊ.ಸಂಗಮೇಶ ಬ್ಯಾಳಿ ಕಾರ್ಯಕ್ರಮ ನಿರೂಪಿಸಿದರು. ಡಾ.ಚಂದ್ರಶೇಖರ ಕಾಳನ್ನವರ ವಂದಿಸಿದರು.

# ವಿವಿಧ ಯೋಜನೆಯಡಿ ಸಹಾಯಧನ ಪಡೆಯಲು ರೈತರಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 28, : ಯಾದಗಿರಿ ಜಿಲ್ಲೆಯ 2025–26ನೇ ಸಾಲಿನ ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಯಡಿ ಸಹಾಯಧನ ಪಡೆಯಲು ರೈತ–ರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ (ಜಿಲ್ಲಾ ಪಂಚಾಯತ್) ತೋಟಗಾರಿಕೆ ಉಪ ನಿರ್ದೇಶಕರಾದ ರಾಘವೇಂದ್ರ ಅವರು ತಿಳಿಸಿದ್ದಾರೆ. ತೋಟಗಾರಿಕೆ ಇಲಾಖೆಯ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಘಟಕಗಳಾದ ಪ್ರದೇಶ ವಿಸ್ತರಣೆ (ಬಾಳೆ, ದಾಳಿಂಬೆ, ಮಾವು, ಸೀಬೆ, ಡ್ರ್ಯಾಗನ್ ಫ್ರೂಟ್, ದ್ರಾಕ್ಷಿ, ಹೂವು ಹಾಗೂ ಹೈಬ್ರಿಡ್ ತರಕಾರಿ), ಎರೆಹುಳು ತೊಟ್ಟಿ, ವೈಯಕ್ತಿಕ ಕೃಷಿ ಹೊಂಡ, ಪುನಶ್ಚೇತನ, ವೀಡ್ ಮ್ಯಾಟ್ (Weed Mat), ಪ್ಲಾಸ್ಟಿಕ್ ಹೊದಿಕೆ, ನೆರಳು ಪರದೆ ಮತ್ತು ಹಸಿರು ಮನೆ, ಪಕ್ಷಿ ನಿರೋದಕ ಬಲೆ, ಯಾಂತ್ರೀಕರಣ, ಪ್ಯಾಕ್‌ಹೌಸ್, ಈರುಳ್ಳಿ ಶೇಖರಣೆ ಘಟಕ, ಅಣಬೆ ಉತ್ಪಾದನೆ ಘಟಕ, ಹಣ್ಣು ಮಾಗಿಸುವ ಘಟಕ (Ripening Chamber), ತಳ್ಳುವ ಗಾಡಿ ಹಾಗೂ ಸಮಗ್ರ ಕೀಟ, ಪೋಷಕಾಂಶ ನಿರ್ವಹಣೆಗಾಗಿ ಸಹಾಯಧನ ಪಡೆಯಲು ರೈತ–ರಿಂದ ಅರ್ಜಿ ಆಹ್ವಾನಿಸಿದೆ. ರೈತರು ತಮಗೆ ಬೇಕಾಗುವ ಘಟಕಗಳಿಗೆ ಸಹಾಯಧನ ಪಡೆಯಲು ಸಂಬಂಧಪಟ್ಟ ಹೊಬಳಿ ಅಧಿಕಾರಿಗಳು ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ) ಯಾದಗಿರಿ, ಶಹಾಪುರ, ಸುರಪುರ ಕಛೇರಿಗಳಿಗೆ ಭೇಟಿ ನೀಡಿ 2025ರ ಜೂನ್ 15ರ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಯಾದಗಿರಿ (ಜಿಪಂ) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಮೊ.ನಂ.9164570011, ಶಹಾಪುರ (ಜಿಪಂ) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಮೊ.ನಂ.8217490621, ಸುರಪುರ (ಜಿಪಂ) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಮೊ.ನಂ.8217748605, ಸಹಾಯಕ ತೋಟಗಾರಿಕೆ ಅಧಿಕಾರಿಗಳು, ರೈತ ಸಂಪರ್ಕ ಕೇಂದ್ರ.ಗಳಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಧನ ಸಲಕರಣೆಗಳ ವಿತರಣೆ

# ದಿವ್ಯಾಂಗರು ಅಪಾರ ಜ್ಞಾನ ಹೊಂದಿದವರು–ಗದ್ದಿಗೌಡರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.28– ಬದುಕಿನಲ್ಲಿ ಅಂಗವಿಕಲತೆ, ದೈಹಿಕ ತೊಂದರೆಗಳಿಂದ ಕೊರತೆ ಉಂಟಾಗಿದ್ದರೂ ದಿವ್ಯಾಂಗರು ಮಾನಸಿಕವಾಗಿ ಬಹಳಷ್ಟು ಜ್ಞಾನವನ್ನು ಹೊಂದಿರುತ್ತಾರೆ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು.

ನವನಗರದ ಕಲಾಭವನದಲ್ಲಿ ಬುಧವಾರ ಸಾಮಾಜಿಕ ಅಧಿಕಾರಿತ ಶಿವಿರ್, ಭಾರತ ಸರಕಾರದ ಅಡಿಪ್ ಯೋಜನೆಯಡಿಯಲ್ಲಿ ದಿವ್ಯಾಂಗ ಜನರಿಗೆ ಮತ್ತು ರಾಷ್ಟ್ರೀಯ ವಯೋಶ್ರೀ ಯೋಜನೆಯಡಿ ಹಿರಿಯ ನಾಗರಿಕರಿಗೆ ಉಚಿತವಾಗಿ ಸಾಧನ ಸಲಕರಣೆಗಳನ್ನು ವಿತರಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜೀವನ ಸಾಗಿಸುವ ಪ್ರತಿಯೊಬ್ಬರಲ್ಲಿ ಒಂದೊಂದು ಜ್ಞಾನವಿರುತ್ತದೆ ಎಂದರು.

ಅಂಗವಿಕಲರು ಎಂದರೆ ನೋವಾಗುತ್ತದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ದಿವ್ಯಾಂಗರು ಎಂದು ನಾಮಕರಣ ಮಾಡಿದ್ದಾರೆ. ಇಲಾಖೆಯ ಅಧಿಕಾರಿಗಳು ಮೇಲಿಂದ ಮೇಲೆ ಜಿಲ್ಲೆಯಲ್ಲಿ ಸರ್ವೆಕಾರ್ಯ ಕೈಗೊಂಡು ಕೇಂದ್ರ ಹಾಗೂ ರಾಜ್ಯ ಸರಕಾರದಿಂದ ವಿವಿಧ ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ಒದಗಿಸುವ ಕಾರ್ಯವಾಗಬೇಕು. ದಿವ್ಯಾಂಗರಿಗಾಗಿಯೇ ವಿಶೇಷವಾದ ಸೌಲಭ್ಯಗಳಿವೆ. ಅವುಗಳನ್ನು ದೊರೆಕಿಸುವಲ್ಲಿ ಜನಪ್ರತಿನಿಧಿಗಳು ಅಧಿಕಾರಿಗಳು ಸಿದ್ದರಿದ್ದೇವೆ. ಇವುಗಳ ಸದುಪಯೋಗವನ್ನು ಪಡೆದುಕೊಳ್ಳಲು ತಿಳಿಸಿದರು.

ರಾಷ್ಟ್ರೀಯ ವಯೋಶ್ರೀ ಯೋಜನೆ ಅಡಿಯಲ್ಲಿ ಹಿರಿಯ ನಾಗರಿಕರಿಗೂ ಸಹ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ವೈಜ್ಞಾನಿಕವಾಗಿ ತಯಾರಿಸಲ್ಪಟ್ಟ ಸಾಧನ ಸಲಕರಣೆಗಳು ಉಪಯುಕ್ತವಾಗಲಿವೆ. ಇವುಗಳ ಬಳಕೆಯಿಂದ ಸಾಮಾನ್ಯ ಜನರ ಹಾಗೆ ತಾವು ಸಹ ಮುಖ್ಯವಾಹಿಸಿಗೆ ಬರಬಹುದಾಗಿದೆ. ಅಲಿಂಕೋ ಸಂಸ್ಥೆಯಿಂದ ನೀಡಲಾಗಿರುವ ಸಲಕರಣೆಗಳನ್ನು ಒಳ್ಳೇಯ ರೀತಿಯಿಂದ ಇಟ್ಟುಕೊಳ್ಳಬೇಕು. ಇದರಿಂದ ಅವುಗಳ ಬಳಕೆ ಮೂಲಕ ಸಮಾಜದಲ್ಲಿ ಮುಂದೆ ಬರಲು ಸಾಧ್ಯವಾಗುತ್ತದೆ ಎಂದು ಗದ್ದಿಗೌಡರ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರಕಾರದಿಂದ ದಿವ್ಯಾಂಗರಿಗೆ ವಿವಿಧ ಸಾಧನ ಸಲಕರಣೆಗಳನ್ನು ನೀಡಿದ್ದು, ಅವುಗಳ ಸದುಪಯೋಗ ಪಡೆದುಕೊಂಡು ಸಾಮಾನ್ಯ ಜನರಂತೆ ಸಮಾಜದಲ್ಲಿ ಮುಂದೆ ಬರಬೇಕು. ಅಂಗವಿಕಲರಿಗೆ ದೇವರು ಕೊರತೆಯ ಜೊತೆಗೆ ಅದ್ಬುತವಾದ ಶಕ್ತಿಯನ್ನು ಕೊಟ್ಟಿರುತ್ತಾನೆ. ಅದನ್ನು ಗುರುತಿಸಿಕೊಂಡು ಮುಖ್ಯವಾಹಿಸಿನಿಗೆ ಬರಲು

# ಅರೋಗ್ಯಕರ ಜೀವನಕ್ಕೆ ಸಂಗೀತ ಅವಶ್ಯ–ಡಾ.ಚನ್ನಮಲ್ಲ ಸ್ವಾಮೀಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.28–ಎಲ್ಲ ಗಾಯನಗಳ ಮೂಲವಾಗಿರುವ ಸಂಗೀತಕ್ಕೆ ಚಿಂತೆ ದೂರ ಸರಿಸುವ ಶಕ್ತಿಯಿದ್ದು, ಸಂಗೀತದಿಂದಲೇ ಜೀವನಕ್ಕೆ ಉತ್ತಮ ಆರೋಗ್ಯ ಕೂಡ ಸಿಗುತ್ತದೆ ಎಂದು ಸುವರ್ಣಗಿರಿ ರುದ್ರಸ್ವಾಮಿ ಮಠದ ಡಾ.ಚನ್ನಮಲ್ಲ ಮಹಾಸ್ವಾಮಿಗಳು ಹೇಳಿದರು.

ಜಿಲ್ಲೆಯ ಇಳಕಲ್ಲ ತಾಲೂಕಿನ ಕಂದಗಲ್ಲ ಗ್ರಾಮದ ರುದ್ರಸ್ವಾಮಿ ಮಠದಲ್ಲಿ ಜರುಗಿದ 53ನೇ ಶಿವಾನುಭವ, ಸಮಾರಂಭದ ನೇತೃತ್ವ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಸಂಗೀತ ಮನಸ್ಸಿನ ನೆಮ್ಮದಿಗೆ ದಿವ್ಯ ಔಷಧಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪಿಯುಸಿ ಮತ್ತು ಎಸ್ಎಸ್ಎಲ್‌ಸಿ ಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿದ ಬಸವರಾಜ ಶಿಂಪಿ, ಅಮರೇಶ ಮಠ, ದಿವ್ಯ ಮಡಿವಾಳರ, ಬಸವರಾಜೇಶ್ವರಿ ತುಂಬದ, ಜ್ಯೋತಿ ಕಡಿವಾಲ, ನಾಗರತ್ನ ಬುಕೀಟಗಾರ, ಮೌಲಾಬಿ ಕುದುರಿ, ಸಹನಾ ಶಿವನಗುತ್ತಿ, ಸಾಗರ್ ಶಿವನಗುತ್ತಿ ಅವರನ್ನು ಸತ್ಕರಿಸಲಾಯಿತು.

ಆಕಾಶವಾಣಿ ದೂರದರ್ಶನ ಕಲಾವಿದ ಸಂಗಮೇಶ ನೀಲಿಮಠ, ಪ್ರತಾಪಕುಮಾರ್ ಹಿರೇಮಠ ಮತ್ತು ಪ್ರಸಾದ ಸೇವೆಗೈದ ಮಂಜುನಾಥ ಕಡಿವಾಲ ಅವರನ್ನು ಸನ್ಮಾನಿಸಲಾಯಿತು. ದಿವ್ಯಾ ಮಡಿವಾಳರ ಪ್ರಾರ್ಥಿಸಿದರು. ಪಂಪಣ್ಣ ಸಜ್ಜನ ಸ್ವಾಗತಿಸಿದರು. ಶಾಲಿನಿ ಹಿರೇಮಠ ನುಡಿ ನಮನ ಸಲ್ಲಿಸಿದರು, ಮಹಾಂತೇಶ ಕಡಿವಾಲ ವಂದಿಸಿದರು. ರಂಜಿತಾ ಐದನಾಳ ನಿರೂಪಿಸಿದರು.

# ಬೇಡಿಕೆಗಳಿಗೆ ಆಗ್ರಹಿಸಿ ನೇಕಾರರ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.28– ವೃತ್ತಿಪರ ನೇಕಾರರಿಗೆ ಕಟ್ಟಡ ಕಾರ್ಮಿಕ ಸೌಲಭ್ಯಗಳನ್ನು ಜಾರಿ ಮಾಡಬೇಕು, ಗುರುತಿನ ಚೀಟಿ ಹಂಚಿಕೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ವತಿಯಿಂದ ನೇಕಾರರು ಜಿಲ್ಲಾಧಿಕಾರಿಗಳ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಿದರು.

ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು. ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವಲಿಂಗ ಟಿರಕಿ ಮಾತನಾಡಿ, ರಾಜ್ಯದಲ್ಲಿ ಸಾಲದ ಹೊರೆಯಿಂದ 52 ಜನ ನೇಕಾರರು ಆತ್ಮಹತ್ಯೆಗೆ ಶರಣಾಗಿದ್ದು, ಆ ಕುಟುಂಬಗಳಿಗೆ 10 ಲಕ್ಷ ಪರಿಹಾರ ಧನ ಒದಗಿಸಬೇಕು. ರಾಜ್ಯದ ನೇಕಾರರ ಸಂಪೂರ್ಣ ಸಾಲ ಮನ್ನಾ ಮಾಡಬೇಕು. 55 ವರ್ಷ ವಯಸ್ಸಿನ ಮೇಲ್ಪಟ್ಟ ನೇಕಾರರಿಗೆ 5000 ರೂ. ಮಾಶಾಸನ ಜಾರಿ ಮಾಡಬೇಕು. ನಿವೇಶನಗಳಿಲ್ಲದವರಿಗೆ ನ್ಯಾಯ ಒದಗಿಸಬೇಕು ಎಂದರು.

ರಬಕವಿ–ಬನಹಟ್ಟಿ, ಗದಗ ಬೆಟಗೇರಿ, ನರಸಾಪೂರ, ಹುಬ್ಬಳ್ಳಿಲ್ಲಿರುವ ನಿವೇಶನ ಇಲ್ಲದ ನೇಕಾರರಿಗೆ ನಿವೇಶನ ಹಂಚಿಕೆ ಮಾಡಬೇಕು. ರಾಜ್ಯದ ಕೆ.ಎಚ್.ಡಿ.ಸಿ. ನಿಗಮದಲ್ಲಿ ಆಗಿರುವ ನೂರಾರು ಕೋಟಿ ರೂಪಾಯಿಗಳ ಅವ್ಯವಹಾರದ ಸಮಗ್ರ ತನಿಖೆ ನಡೆಸಿ ತಪ್ಪಿಸ್ತರಿಗೆ ಶಿಕ್ಷೆ ವಿಧಿಸಿ ಹಣವನ್ನು ನಿಗಮಕ್ಕೆ ಮರಳಿಸುವಂತಾಗಬೇಕು ಎಂದು ಮನವಿಯಲ್ಲಿ ಸರಕಾರವನ್ನು ಒತ್ತಾಯಿಸಲಾಗಿದೆ. ಕೇಂದ್ರ ಸರ್ಕಾರ ಕಿಸಾನ್ ಸಮ್ಮಾನ ಯೋಜನೆಯಂತೆ ನೇಕಾರರಿಗೂ ಬುನಕರ್ ಸಮ್ಮಾನ ಯೋಜನೆ ಜಾರಿಗೆ ತರಬೇಕು. ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕೈಮಗ್ಗ ಮತ್ತು ಜವಳಿ ಇಲಾಖೆ ಸೆಂಟ್ರಲ್ ಸಿಲ್ಕ್ ಬೋರ್ಡಗೆ ಮತ್ತು ನಿಗಮಗಳಿಗೆ ಸಾವಿರಾರು ಕೋಟಿ ರೂಪಾಯಿಗಳ ಅನುದಾನ ಒದಗಿಸಬೇಕು. ದೇಶದ ಎಲ್ಲ ರೈಲು ನಿಲ್ದಾಣ ಮತ್ತು ವಿಮಾನ ನಿಲ್ದಾಣಗಲ್ಲಿ ನೇಕಾರರು ಉತ್ಪಾದಿಸಿದ ಉತ್ಪನ್ನಗಳ ನೇರ ಮಾರಾಟ ಮಾಡಲು ಮಳಿಗೆಗಳನ್ನು ಒದಗಿಸಿ ನೇಕಾರ ಮತ್ತು ನೇಕಾರಿಕೆಯನ್ನು ಪ್ರೋತ್ಸಾಹಿಸಬೇಕು ಎಂದು ಒತ್ತಾಯಿಸಲಾಗಿದೆ.

# ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 28, : 2025–26ನೇ ಸಾಲಿನ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರು ತಿಳಿಸಿದ್ದಾರೆ.

ಯಾದಗಿರಿ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ, ಬಾಲಕಿಯರ (5 ರಿಂದ 10ನೇ ತರಗತಿ) ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ, ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ–1, ಎಸ್.ಸಿ, ಎಸ್.ಟಿ 2.50 ಲಕ್ಷ. ರೂ.ಗಳ ಒಳಗಿರಬೇಕು. ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ 1 ಲಕ್ಷ ರೂ.ಗಳ ಒಳಗಿರಬೇಕು.

ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾತಿಗೆ ಕಲ್ಪಿಸಲು ಆನ್‌ಲೈನ್ ,ಇ೦. ಇಚಿಡಿಟಚಿಣಚಿಇಚಿ.ರಠಿತ.ಎಟಿ/ ಛಿಛಿತಿಜನಲ್ಲಿ 2025ರ ಜೂನ್ 16ರ ಒಳಗೆ ಅರ್ಜಿ ಸಲ್ಲಿಸಬೇಕು. ತಾಲ್ಲೂಕಿನ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ ಛಿಛಿತಿಜ. ಇಚಿಡಿಟಚಿಣಚಿಇಚಿ.ರಠಿತ.ಎಟಿಗೆ ಭೇಟಿ ನೀಡಿ ಅರ್ಜಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd-helpline@gmail.comಗೆ ಇ–ಮೇಲ್ ಮುಖಾಂತರ ಅಥವಾ ತಾಲ್ಲೂಕು ಕಲ್ಯಾಣಾಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಯಾದಗಿರಿ ಇಲ್ಲಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಯಾದಗಿರಿ ಮೊ.ನಂ.9743310896 ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಸಂಘಟಿತ ವರ್ಗದವರು ಸರ್ಕಾರಿ ಸೌಲಭ್ಯ ಪಡೆಯಿರಿ: ನ್ಯಾ. ಮಹಾಂತೇಶ್ ದರಗದ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಅಸಂಘಟಿತ ವರ್ಗಗಳಿಗೆ ಸರ್ಕಾರದಿಂದ ಅನೇಕ ಸೌಲಭ್ಯಗಳಿದ್ದು, ಅವುಗಳನ್ನು ಪಡೆಯಲು ಮುಂದಾಗುವಂತೆ ಕೊಪ್ಪಳದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ್ ಎಸ್. ದರಗದ ಹೇಳಿದರು. ಅವರು ಬುಧವಾರ ಕೊಪ್ಪಳ ತಾಲ್ಲೂಕಿನ ಕಲ್ಲತಾವರಗೇರಾ ಗ್ರಾಮ ಪಂಚಾಯತಿ ವ್ಯಾಪ್ತಿಯ ದನಕನದೊಡ್ಡಿ ಗ್ರಾಮದ ಕೆರೆಯ ಕಾಮಗಾರಿ ಸ್ಥಳದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲೂಕ ಪಂಚಾಯತ ಹಾಗೂ ಕಲ್ಲತಾವರಗೇರಾ ಗ್ರಾಮ ಪಂಚಾಯತಿಯಿಂದ ಆಯೋಜಿಸಿದ್ದ ಅಸಂಘಟಿತ ವರ್ಗಗಳಿಗೆ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ದೇಶದ ಆರ್ಥಿಕತೆ ದುಡಿಯುವ ವರ್ಗಗಳ ಮೇಲೆ ನಿಂತಿದೆ. ಅಸಂಘಟಿತ ವರ್ಗಗಳಿಗೆ ಸಾಕಷ್ಟು ದುಡಿಮೆ ಇದ್ದಲ್ಲಿ ಉತ್ತಮವಾಗಿ ಕುಟುಂಬ ನಿರ್ವಹಣೆಗೆ ಸಾಧ್ಯವಾಗುತ್ತದೆ. ದೇಶ ಅಭಿವೃದ್ಧಿಯತ್ತ ಸಾಗಿದರೆ ಅದರಲ್ಲಿ ಅಸಂಘಟಿತ ವರ್ಗಗಳ ಪಾತ್ರವು ಬಹು ಮುಖ್ಯವಾಗಿರುತ್ತದೆ. ಅಸಂಘಟಿತ ವರ್ಗದವರಿಗೆ ಸರ್ಕಾರದಿಂದ ಅನೇಕ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ಪಡೆಯುವಂತೆ ಕರೆ ನೀಡಿದರು.

ಅಸಂಘಟಿತ ವರ್ಗದವರಿಗೆ ಕಾನೂನಿನ ಅರಿವು ಮತ್ತು ನೆರವು ನೀಡುವ ಉದ್ದೇಶದಿಂದ ಈ ದಿನ ಕಾರ್ಯಕ್ರಮ ಆಯೋಜಿಸಲಾಗಿದೆ. ದುಡಿಮೆ ದೇವರು ಎನ್ನುವ ಕಲ್ಪನೆ ಹೊಂದಿರುವ ಶ್ರಮಿಕ ವರ್ಗ, ಕೆಲಸಕ್ಕೆ ಸೀಮಿತವಾಗಿರದೇ ಕೆಲಸದ ಜೊತೆಗೆ ಸರ್ಕಾರಿ ಸೌಲಭ್ಯಗಳನ್ನು ಪಡೆಯುವದು ಅವರ ಹಕ್ಕಾಗಿದೆ ಎಂದರು. ಕೊಪ್ಪಳ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಅವರು ಮಾತನಾಡಿ, ಕೂಲಿಕಾರರು ಸಾಮುದಾಯಿಕ ಕಾಮಗಾರಿಯಲ್ಲಿ ಕೆಲಸಕ್ಕೆ ಹಾಜರಾಗುವದರ ಜೊತೆಗೆ ವೈಯಕ್ತಿಕ ಕಾಮಗಾರಿಗಳಾದ ದನದಶೆಡ್, ಮೆಕೆಶೆಡ್, ಕೋಳಿಶೆಡ್, ಹಂದಿಶೆಡ್ ಮತ್ತು ತೋಟಗಾರಿಕೆ, ರೇಷ್ಮೆ ಕಾಮಗಾರಿಗಳನ್ನು ಅನುಷ್ಠಾನಿಸಲು ಅವಕಾಶ ಇರುವದರಿಂದ ಅವುಗಳಿಗೆ ಕೂಡಾ ಹೆಚ್ಚು ಆದ್ಯತೆ ನೀಡಿ ಅನುಷ್ಠಾನಿಸಿದಲ್ಲಿ ಆರ್ಥಿಕ ಸದೃಡರಾಗಬಹುದೆಂದರು.

ಕಾರ್ಮಿಕ ಇಲಾಖೆಯ ನಿರೀಕ್ಷಕಿ ಮಂಜುಳಾ ಅವರು ಮಾತನಾಡಿ, ಎಲ್ಲಾ ನರೇಗಾ ಕೂಲಿಕಾರರು ಕಟ್ಟಡ ಕಾರ್ಮಿಕರಾಗಿರುವದಿಲ್ಲ. ಗೌಂಡಿ ಕೆಲಸ, ಟೆಲರಿಂಗ್ ಎಲೆಕ್ಟ್ರಿಯಷನ್ ಇತ್ಯಾದಿ ಒಟ್ಟು 91 ವರ್ಗದವ ಕೆಲಸ ನಿರ್ವಹಿಸುವ ಎಲ್ಲರೂ ಕಾರ್ಮಿಕ ಇಲಾಖೆಯಲ್ಲಿ ನೊಂದಣಿ ಮಾಡಿಕೊಂಡಲ್ಲಿ ಅವರಿಗೆ ಅಪಘಾತವಾಗಿ ಶಾಶ್ವತ ಅಂಗವಿಕಲತೆ ಹೊಂದಿದಲ್ಲಿ ಮತ್ತು ಮರಣ ಹೊಂದಿದರೆ ಸರ್ಕಾರದಿಂದ ಪರಿಹಾರ ಧನ ಒದಗಿಸಲು ಅವಕಾಶ ಇರುತ್ತದೆ ಎಂದರು. ತಾಲೂಕ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಶರಣಪ್ಪ ಅವರು ಮಾತನಾಡಿ ಸಮಾಜ ಕಲ್ಯಾಣ ಇಲಾಖೆಯಿಂದ ಎಸ್.ಸಿ ಮತ್ತು ಎಸ್.ಟಿ ಕುಟುಂಬಗಳ ಮಕ್ಕಳಿಗೆ ವಿದ್ಯಾರ್ಥಿ ವೇತನ, ವಸತಿ ನಿಲಯ ಸೌಲಭ್ಯ ಮತ್ತು ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಮೂಲಭೂತ ಸೌಕರ್ಯ ಒದಗಿಸಲು ಅವಕಾಶ ಇರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಗಂಗಪ್ಪ ನಾಯಕ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್, ಗ್ರಾ.ಪಂ ಸದಸ್ಯರಾದ ರವಿಕುಮಾರ ಒಂಟಿಗಾರ, ಪಾರಮ್ಮ ಕೊಳ್ಳಿ, ಶಾಂತಮ್ಮ ಬಸವರಾಜ ಪಂಚಾಯತ ಅಭಿವೃದ್ಧಿ ಅಧಿಕಾರಿ ಯಮನೂರಪ್ಪ ಕಬ್ಬಣನವರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಸಮುದಾಯ ಆರೋಗ್ಯ ಸುರಕ್ಷಾಧಿಕಾರಿ ಘಾಮಿದಾ, ಶಬ್ಬೀರ್, ತಾಂತ್ರಿಕ ಸಹಾಯಕ ಮಂಜುನಾಥ ಮಾದಾಪುರ ಮತ್ತು ಗ್ರಾ.ಪಂ ಕರವಸೂಲಿಗಾರ ನಾಗರಾಜ ಸೇರಿಂದತೆ ಇತರೆ ಸಿಬ್ಬಂದಿಗಳು ಹಾಜರಿದ್ದರು. ಸಿವಿಲ್ ನ್ಯಾಯಾಧೀಶರು ಸಸಿಗಳನ್ನು ನೆಟ್ಟು ನೀರು ಉಣಿಸಿದರು. ಕಾರ್ಯಕ್ರಮದಲ್ಲಿ ಹಾಜರಿದ್ದ ಎಲ್ಲಾ ನರೇಗಾ ಕೂಲಿಕಾರರಿಗೆ ಆರೋಗ್ಯ ಇಲಾಖೆ ಸಿಬ್ಬಂದಿಗಳಿಂದ ಆರೋಗ್ಯ ತಪಾಸಣೆ ಜರುಗಿಸಲಾಗಿತು.

# ನಗರ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆ

## ಜೂನ್ ಅಂತ್ಯದೊಳಗೆ ಕ್ರಿಯಾ ಯೋಜನೆ ಅನುಮೋದನೆ ಪಡೆದು ಕೆಲಸ ಪ್ರಾರಂಭಿಸಿ:ರಹೀಂ ಖಾನ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.28: ನಗರ ಸ್ಥಳೀಯ ಸಂಸ್ಥೆಗಳಲ್ಲಿ ರಸ್ತೆ, ಚರಂಡಿ, ಕುಡಿಯುವ ನೀರು ಸೇರಿದಂತೆ ಮೂಲಸೌಕರ್ಯ ಬಲಪಡಿಸುವ ಉದ್ದೇಶದಿಂದ ಪ್ರಸಕ್ತ 2025–26ನೇ ಸಾಲಿಗೆ ಕಲಬುರಗಿ ಜಿಲ್ಲೆಯ ವಿವಿಧ ಸ್ಥಳೀಯ ಸಂಸ್ಥೆಗಳಿಗೆ 15ನೇ ಹಣಕಾಸು,ಎಸ್.ಎಫ್.ಸಿ. ಅನಟೈಡ್ ಹಾಗೂ ಎಸ್.ಎಫ್.ಸಿ. ಕುಡಿಯುವ ನೀರು ಯೋಜನೆಗಳಡಿ 48.70 ಕೋಟಿ ರೂ. ಅನುದಾನ ನೀಡಿದ್ದು, ಜೂನ್ ಅಂತ್ಯದೊಳಗೆ ಕ್ರಿಯಾ ಯೋಜನೆ ಅನುಮೋದನೆ ಪಡೆದು ಕೆಲಸಗಳನ್ನುಪ್ರಾರಂಭಿಸಬೇಕು ಎಂದು ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಂ ಖಾನ್ ಹೇಳಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 15ನೇ ಹಣಕಾಸು ಯೋಜನೆಯಡಿ ಶಹಾಬಾದ ನಗರಸಭೆ,ಎಸ್.ಎಫ್.ಸಿ. ಅನಟೈಡ್ ಯೋಜನೆಯಡಿ ಶಹಾಬಾದ, ಕಾಳಗಿ ಸಂಸ್ಥೆಗಳು, ಎಸ್.ಎಫ್.ಸಿ. ಕುಡಿಯುವ ನೀರು ಯೋಜನೆಯಡಿ ಶಹಾಬಾದ, ಕಲಬುರಗಿ, ಕಾಳಗಿ ಪೌರ ಸಂಸ್ಥೆಗಳು ಮಾತ್ರ ಕ್ರಿಯಾ ಯೋಜನೆಗೆ ಅನುಮತಿ ಪಡೆದಿದ್ದು, ಉಳಿದ ಪೌರ ಸಂಸ್ಥೆಗಳು ಜೂನ್ ಅಂತ್ಯದೊಳಗೆ ಕ್ರಿಯಾ ಯೋಜನೆ ರೂಪಿಸಿ ಅನುಮೋದನೆ ಪಡೆದು ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿಗಳನ್ನುಪ್ರಾರಂಭಿಸಬೇಕು ಎಂದರು.

ಪ್ರಸಕ್ತ ಸಾಲಿಗೆ 15ನೇ ಹಣಕಾಸು ಯೋಜನೆಯಡಿ 4,081 ಲಕ್ಷ ರೂ., ಎಸ್.ಎಫ್.ಸಿ. ಅನಟೈಡ್ ಯೋಜನೆಯಡಿ 713 ಲಕ್ಷ ರೂ. ಮತ್ತು ಎಸ್.ಎಫ್.ಸಿ. ಕುಡಿಯುವ ನೀರು ಯೋಜನೆ ಕೈಗೆತ್ತಿಕೊಳ್ಳಲು 76.32 ಲಕ್ಷ ರೂ. ಅನುದಾನ ಸೇರಿ ಒಟ್ಟಾರೆ 48.70 ಕೋಟಿ ರೂ. ಅನುದಾನ ಹಂಚಿಕೆ ಮಾಡಲಾಗಿದೆ. ಕುಡಿಯುವ ನೀರಿನ ಕಾಮಗಾರಿಗಳನ್ನು ಆದ್ಯತೆ ಮೇಲೆ ಪ್ರಾರಂಭಿಸಬೇಕು. ಶುಕ್ರವಾರ ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನೆ ಸಭೆ ನಡೆಯಲಿದೆ ಎಂದರು.

ಮಳೆಗಾಲ ಸಮೀಪಿಸುತ್ತಿರುವುದರಿಂದ ನಗರ ನಿವಾಸಿಗಳಿಗೆ ಕಲುಷಿತ ನೀರು ಪೂರೈಕೆಯಾಗದಂತೆ ಮುಖ್ಯಾಧಿಕಾರಿಗಳು ಎಚ್ಚರ ವಹಿಸಬೇಕು. ಕಲುಷಿತ ಕುಡಿಯುವ ನೀರು ಸೇವನೆಯಿಂದ ಯಾವುದೇ ಅವಘಡಗಳು ಸಂಭವಿಸಿದಲ್ಲಿ ಸಂಬಂಧಪಟ್ಟ ಮುಖ್ಯಾಧಿಕಾರಿಗಳನ್ನೇ ಜವಾಬ್ದಾರರನ್ನಾಗಿ ಮಾಡಿ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ ಸಚಿವರು, ಕುಡಿಯುವ ನೀರಿನ ಪೈಪಲೆನ್‌ಗಳ ನಿರ್ವಹಣೆ ಸಮರ್ಪಕವಾಗಿರುವಂತೆ ನೋಡಿಕೊಳ್ಳಿ ಎಂದರು.

ನಗರನಿವಾಸಿಗಳಿಗೆ ಮೂಲಸೌಕರ್ಯ ಒದಗಿಸಲು ಸ್ಥಳೀಯ ಸಂಸ್ಥೆಗಳು ಆರ್ಥಿಕವಾಗಿ ಸದೃಢ ಹೊಂದುವುದು ತುಂಬಾ ಅವಶ್ಯಕ. ಹೀಗಾಗಿ ಆಸ್ತಿ ಕರ, ನೀರಿನ ಕರ, ಗ್ರಂಥಾಲಯ ಕರ, ಜಾಹೀರಾತು ಕರ, ಟ್ರೇಡ್ ಲೈಸೆನ್ಸ್, ಮಳಿಗೆ ಕರವನ್ನು ಅಭಿಯಾನದ ರೂಪದಲ್ಲಿ ವಸೂಲು ಮಾಡಬೇಕು. ಸಣ್ಣವ್ಯಾಪಾರಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಟ್ರೇಡ್ ಲೈಸೆನ್ಸ್ ನೀಡಲು ಕ್ಯಾಂಪ್ ಆಯೋಜಿಸಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

ಮುಖ್ಯಮಂತ್ರಿಗಳ ನಗರೋತ್ಥಾನ ಹಂತ–4, 15ನೇ ಹಣಕಾಸು ಯೋಜನೆ, ಎಸ್.ಎಫ್.ಸಿ. ಯೋಜನೆ ವಿಶೇಷ ಅನುದಾನ, ಎಸ್.ಸಿ.ಪಿ–ಟಿ.ಎಸ್.ಪಿ, ಸ್ವಚ್ಛಭಾರತ್ ಮಿಷನ್ 2.0, ಕುಡಿಯುವ ನೀರು ಯೋಜನೆಗಳ ಕುರಿತು ಪರಾಮರ್ಶಿಸಿದ ಸಚಿವರು, ಕಳೆದ 3–4 ವರ್ಷದಿಂದ ಪ್ರಗತಿಯಲ್ಲಿರುವ ಕಾಮಗಾರಿಗಳಿಗೆ ವೇಗ ನೀಡಿ ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

9 ಇಂದಿರಾ ಕ್ಯಾಂಟೀನ್ ಮಂಜೂರು: ಕಲಬುರಗಿ ಜಿಲ್ಲೆಗೆ ಇಂದಿರಾ ಕ್ಯಾಂಟೀನ್ ಹಂತ–2 ರಲ್ಲಿ ಕಲಬುರಗಿ–2, ಶಹಾಬಾದ, ಅಳಂದ, ಅಫಜಲಪೂರ, ಜೇವರ್ಗಿ, ಸೇಡಂ, ವಾಡಿ, ಯಡ್ರಾಮಿಗೆ ತಲಾ 1 ಕ್ಯಾಂಟೀನ್ ಸೇರಿ ಒಟ್ಟು 9 ಇಂದಿರಾ ಕ್ಯಾಂಟೀನ್ ಮಂಜೂರು ಮಾಡಲಾಗಿದೆ. ಕೂಡಲೆ ಕಟ್ಟಡ ನಿರ್ಮಾಣ ಮಾಡಿ ಬಡವರಿಗೆ ಸಮರ್ಪಿಸಬೇಕು ಎಂದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನಾವರ ದೌಲ ಮಾತನಾಡಿ, ಕಳೆದ 2024–25ನೇ ಸಾಲಿನಲ್ಲಿ 13 ಸ್ಥಳೀಯ ಸಂಸ್ಥೆಗಳಿಂದ 8,576.73 ಲಕ್ಷ ರೂ. ಬೇಡಿಕೆಗೆ ಎದುರಾಗಿ 5,222.15 ಲಕ್ಷ ರೂ. ಆಸ್ತಿ ತೆರಿಗೆ ವಸೂಲು ಮಾಡಿದೆ. ಅದೇ ರೀತಿಯಾಗಿ ಕಳೆದ ವರ್ಷದಲ್ಲಿ ನೀರಿನ ಕರ 9,478 ಲಕ್ಷ ರೂ. ಗಳ ಪೈಕಿ 1,534.89 ಲಕ್ಷ ರೂ., ಶಾಪ್ ಲೈಸೆನ್ಸ್‌ನಡಿ 1,048.48 ಲಕ್ಷ ರೂ. ಪೈಕಿ 165.33 ಲಕ್ಷ ರೂ. ಹಾಗೂ ಟ್ರೇಡ್ ಲೈಸೆನ್ಸ್‌ನಡಿ 330.88 ಲಕ್ಷ ರೂ. ಪೈಕಿ 156.03 ಲಕ್ಷ ರೂ. ವಸೂಲು ಮಾಡಿದೆ ಎಂದು ಸಭೆಗೆ ಮಾಹಿತಿ ನೀಡಿದಲ್ಲದೆ ಅನಧಿಕೃತ ಕಟ್ಟಡಗಳಿಗೆ 'ಬಿ' ಖಾತಾ ನೀಡಲು ಕಳೆದ ಫೆಬ್ರವರಿ 18 ರಿಂದ ಇದುವರೆಗೆ 10,386 ಅರ್ಜಿ ಸಲ್ಲಿಕೆಯಾಗಿದ್ದು, ಇದರಲ್ಲಿ 6,177 ಆಸ್ತಿಗಳಿಗೆ 'ಬಿ' ಖಾತಾ ನೀಡಲಾಗಿದೆ. ಇದರಿಂದ ಯು.ಎಲ್.ಬಿ.ಗಳಿಗೆ 263.25 ಲಕ್ಷ ರೂ. ಕರ ಜಮೆಯಾಗಿದೆ ಎಂದರು.

ಮುಖ್ಯಮಂತ್ರಿಗಳ ನಗರೋತ್ಥಾನ ಹಂತ–4 ರಲ್ಲಿ ಜಿಲ್ಲೆಯ ವಿವಿಧ ಪೌರ ಸಂಸ್ಥೆಗಳಿಗೆ 19.16 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು, ಇದರಲ್ಲಿ ತೆಗೆದುಕೊಂಡ 173 ಕಾಮಗಾರಿಗಳ ಪೈಕಿ 54 ಮಾತ್ರ ಪೂರ್ಣಗೊಂಡಿವೆ. 15ನೇ ಹಣಕಾಸು ಯೋಜನೆಯಡಿ ಜನರಲ್ ಬೇಸಿಕ್ ಗ್ರ್ಯಾಂಟ್, ಟೈಡ್ ಗ್ರ್ಯಾಂಟ್, ಅನಟೈಡ್ ಗ್ರ್ಯಾಂಟ್ ಯೋಜನೆಯಡಿ 2020–21 ರಿಂದ 2024–25ರ ವರೆಗೆ 207.19 ಕೋಟಿ ರೂ. ಬಿಡುಗಡೆಯಾಗಿದ್ದು, ಇದರಲ್ಲಿ 142.27 ಕೋಟಿ ರೂ. ಖರ್ಚು ಮಾಡಿ 1,837 ಕಾಮಗಾರಿಗಳ ಪೈಕಿ 1,413 ಕಾಮಗಾರಿ ಪೂರ್ಣಗೊಳಿಸಿದ್ದು, 424 ಕಾಮಗಾರಿ ಪ್ರಗತಿಯಲ್ಲಿವೆ. ಎಸ್.ಎಫ್.ಸಿ. ಮುಕ್ತ ನಿಧಿಯಡಿ ಕಳೆದ 4 ಆರ್ಥಿಕ ಸಾಲಿನಲ್ಲಿ ಬಿಡುಗಡೆಯಾದ 47.89 ಕೋಟಿ ರೂ. ಮೊತ್ತದಲ್ಲಿ 41.61 ಕೋಟಿ ರೂ. ಖರ್ಚು ಮಾಡಿ 408ರ ಪೈಕಿ 310 ಕಾಮಗಾರಿಗಳನ್ನುಪೂರ್ಣಗೊಳಿಸಿದೆ ಎಂದು ವಿವಿಧ ಯೋಜನೆಗಳ ಅಂಕಿ–ಸಂಖ್ಯೆಯನ್ನು ಡಿ.ಯು.ಡಿ.ಸಿ ಕಚೇರಿಯ ಕಾರ್ಯನಿರ್ವಾಹಕ ಅಭಿಯಂತ ಸೋಮು ರಾಠೋಡ ಅವರು ಸಭೆಗೆ ತಿಳಿಸಿದರು.

ಸಭೆಯಲ್ಲಿ ವಿಧಾನ ಪರಿಷತ್ ಶಾಸಕ ತಿಪ್ಪಣ್ಣಪ್ಪ ಕಮಕನೂರ, ಕಲಬುರಗಿ ಮಹಾನಗರ ಪಾಲಿಕೆಯ ಮಹಾಪವರರಾದ ಯಲ್ಲಪ್ಪ ನಾಯ್ಕೋಡಿ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಪೌರಾಡಳಿತ ನಿರ್ದೇಶನಾಲಯದ ಅಭಿಯಂತ ರಾಧಾಕೃಷ್ಣ, ಅಧೀಕ್ಷಕ ಅಭಿಯಂತ ಬಸವರಾಜ, ಸಚಿವರ ಆಪ್ತಕಾರ್ಯದರ್ಶಿ ಡಾ.ಕೆ.ಮುರಳಿಧರ ಸೇರಿದಂತೆ ಜಿಲ್ಲೆಯ ಪೌರ ಸಂಸ್ಥೆಗಳ ಮುಖ್ಯಸ್ಥರು ಇದ್ದರು.

# ಬಕ್ರೀದ್ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಮೇ.28: ಯಾವುದೇ ಜಾತಿಧರ್ಮದಲ್ಲಿ ಬರುವ ಹಬ್ಬಗಳನ್ನು ಅವರವರ ಆಚಾರ ವಿಚಾರಕ್ಕೆ ಧಕ್ಕೆ ಬರದಂತೆ ಶಾಂತಿಯುತವಾಗಿ ಆಚರಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಕ್ರೀದ ಹಬ್ಬದ ಆಚರಣೆ ನಿಮಿತ್ಯ ಅನಧಿಕೃತ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಾಣಿಕೆಯನ್ನು ತಡೆಗಟ್ಟಲು ಕುರಿತು ಮುಂಜಾಗ್ರತೆ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜೂನ್.7 ರಂದು ಆಚರಿಸಲ್ಪಡುವ ಆಚರಿಸಲ್ಪಡುವ ಬಕ್ರೀದ ಹಬ್ಬದ ಸಂದರ್ಭದಲ್ಲಿ ಅನಧಿಕೃತವಾಗಿ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಾಣಿಕೆಯನ್ನು ಅಲ್ಲದೇ ಒಂಟೆಗಳ ವಧೆ ಮತ್ತು ಸಾಗಾಣಿಕೆಯನ್ನು ಸಹ ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಹಾಗೂ ಔರಾದ ತಾಲ್ಲೂಕಿನ ವನಮಾರಪಳ್ಳಿ ಮತ್ತು ಕಮಲನಗರ ತಾಲ್ಲೂಕಿನ ಕಮಲನಗರನಲ್ಲಿ ಹಾಗೂ ಹುಲಸೂರ ತಾಲ್ಲೂಕಿನ ಹುಲಸೂರ ಚೆಕ್ ಪೋಸ್ಟ ಹಾಗೂ ಬೀದರ ತಾಲ್ಲೂಕಿನ ಶಹಾಪೂರ ಗೋಟನಲ್ಲಿ ಸ್ಥಾಪಿಸಿ, ಅಧಿಕಾರಿಗಳನ್ನು ನಿಯೋಜಿಸಿ ಜೂನ.1 ರಿಂದ 7 ರವರೆಗೆ ಜಾನುವಾರುಗಳ /ಒಂಟೆಗಳ ಸಾಗಾಣಿಕೆಯನ್ನು ತಡೆಯಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಪೋಲೀಸ್ ಇಲಾಖೆ ಮತ್ತು ಪಶುಪಾಲನಾ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.ಬಕ್ರೀದ್ ಹಬ್ಬದ ದಿನದಂದು ಉಂಟಾಗುವ ತ್ಯಾಜ್ಯಗಳನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಲು ನಗರದ ಸ್ವಚ್ಛತೆಯನ್ನು ಕಾಪಾಡಲು ಕ್ರಮ ಕೈಗೊಳ್ಳಲು ನಗರಸಭೆ ಆಯುಕ್ತರಿಗೆ ಸೂಚಿಸಿದರು. ಪಿಂಜರಾಪೋಲ್ ಯೋಜನೆ ಅಡಿ ಗೋಶಾಲೆಗಳಿಗೆ ಅನುದಾನ ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಕಾಯ್ದೆ–2020 ರನ್ವಯ ಹಸು, ಕರು, ಎತ್ತು ಇವುಗಳನ್ನು ಒಟ್ಟಾರೆ ವಧೆ ಮಾಡುವಂತಿಲ್ಲ. 13 ವರ್ಷಗಳ ಎಮ್ಮೆ, ಕೋಣಗಳನ್ನು ಪಶುವೈದ್ಯಾಧಿಕಾರಿಗಳ ದೃಢೀಕರಣದೊಂದಿಗೆ ಮಾತ್ರ ವಧೆ ಮಾಡಬಹುದಾಗಿದೆ. ತಪ್ಪಿದಲ್ಲಿ ಮೊದಲ ಸಲಕ್ಕೆ ರೂ.50,000 ದಿಂದ 5,00,000/– ದಂಡ ಇಲ್ಲವೇ 3 ವರ್ಷದಿಂದ 7 ವರ್ಷಗಳ ಜೈಲು ಶಿಕ್ಷೆ ಹಾಗೂ 2ನೇ ಸಲಕ್ಕೆ 1,00,000 ರಿಂದ 10,00,000/– ದಂಡ ಇಲ್ಲವೇ 7 ವರ್ಷಗಳ ಜೈಲು ಶಿಕ್ಷೆಗೆ ಗುರಿಯಾಬೇಕಾಗುತ್ತದೆ ಎಂದು ತಿಳಿಸಿದರು.

ಜಾನುವಾರು ಸಾಗಾಣಿಕೆಯನ್ನು ಮಾಡುವಾಗ, ವಾಹನದ ಜೊತೆಗೆ ಜಾನುವಾರುಗಳ ಮಾಲೀಕರ ವಿಳಾಸ, ಎಲ್ಲಿಗೆ ಸಾಗಾಣಿಕೆ ಮಾಡಲಾಗುವುದು ಎಂಬುದರ ವಿವರ ಪಶುವೈದ್ಯರಿಂದ ಪಡೆದ ದೃಢೀಕರಣ ಪ್ರಮಾಣ ಪತ್ರಗಳನ್ನು ಹೊಂದಿರಬೇಕು ಹಾಗೂ ವಾಹನದಲ್ಲಿ 100 ಕೆ.ಜಿ. ಕೆಳಗಿನ ಜಾನುವಾರುಗಳಿಗೆ 1ಥ1.5 ಚ.ಮೀ. ಮತ್ತು 100 ಕೆ.ಜಿ. ಮೇಲಿನ ಜಾನುವಾರುಗಳಿಗೆ 1ಥ2 ಚ.ಮೀ. ಸ್ಥಳಾವಕಾಶ ಒದಗಿಸಿ ಕೊಡಬೇಕು / ಇಲ್ಲವಾದಲ್ಲಿ ರಿಡಿಜತಜಟಿ–ಣುಟಿ ಠಜಿ ಅಡಿಣಜಟಣಥಿ ಣಠ ಚಿಟಿಟಚಿಟ ಠಿಥಿಣ ಅಡಿಯಲ್ಲಿ ದಂಡ ವಿಧಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಭೆಯಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪನಿರ್ದೇಶಕರಾದ ನರಸಪ್ಪ ಎ. ಡಿ, ಪಿಎ???ಐ ತಸ್ಲೀಮಾ, ಆರ್.ಟಿ.ಒ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಪಶುವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಕುಕನೂರು ಪಟ್ಟಣದಲ್ಲಿ ಶಾಸಕ ಬಸವರಾಜ ರಾಯರೆಡ್ಡಿ ಅವರಿಂದ ಇಂದಿರಾ ಕ್ಯಾಂಟೀನ್ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ :ಮೇ.28: ಕರ್ನಾಟಕ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿ ಅದರಂತೆ ಎಲ್ಲಾ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೆ ತರಲಾಗಿದೆ.

ಶಕ್ತಿ ಯೋಜನೆ, ಅನ್ನಭಾಗ್ಯ, ಗೃಹಲಕ್ಷ್ಮೀ, ಯುವನಿಧಿ, ಗೃಹ ಜ್ಯೋತಿ* ಯೋಜನೆಗಳ ಮೂಲಕ ರಾಜ್ಯ ಬಡ ಜನರಿಗೆ ಕರ್ನಾಟಕ ಸರ್ಕಾರದ ಮೂಲಕ ಚೈತನ್ಯ ತುಂಬುವ ಕೆಲಸ ಆಗಿದೆ.

ಒಟ್ಟು ಗ್ಯಾರಂಟಿ ಯೋಜನೆಗಳ ಮೂಲಕ ವರ್ಷಕ್ಕೆ 420 ಕೋಟಿ ಯಲಬುರ್ಗಾ ಕ್ಷೇತ್ರ ಒಂದಕ್ಕೆ ಅನುದಾನ ಸಿಕ್ಕಿದೆ ಎಂದರು.

ಕುಕನೂರ ಪಟ್ಟಣದಲ್ಲಿ ಎ.ಪಿ.ಎಮ್.ಸಿ ಆವರಣದಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟಿಸಿ ಬಿಸಿಯೂಟ ಸವಿದು ಇಂದಿರಾ ಕ್ಯಾಂಟೀನ್ ಸೌಲಭ್ಯವನ್ನು ಬಡ ಕೂಲಿಕಾರರು, ವಿದ್ಯಾರ್ಥಿಗಳು ನೌಕರರು ಇದರ ಸದುಪಯೋಗ ಪಡಿಸಿಕೊಳ್ಳಬೇಕು.

ಹಿಂದುಳಿದವರ್ಗಗಳ ಇಲಾಖೆಯಡಿ ಉದ್ಘಾಟಿಸಿ ಮಾತನಾಡಿ ರಾಜ್ಯದಲ್ಲಿ ಪ್ರಥಮಬಾರಿಗೆ 20 ವಸತಿ ನಿಲಯಗಳು ಸ್ವಂತ ಕಟ್ಟಡದಲ್ಲಿ ಪ್ರಾರಂಭವಾಗಿರುವಿದು ತಾಲೂಕಿನ ಜನರಿಗೆ ಹೆಮ್ಮೆ, ಅದರಂತೆ ರಾಷ್ಟ್ರೀಯ ಹೆದ್ದಾರಿ, ಗದಗ ವಾಡಿ ರೈಲು ಯೋಜನೆ ಜನಸಾಮಾನ್ಯರ ಆರ್ಥಿಕ ಚಟುವಟಿಕೆಗಳು ಸುಧಾರಣೆಯಾಗಲು ಸಾಧ್ಯ ಎಂದರು.

ಅದರಂತೆ ತಾಲೂಕಿಗೆ ನರ್ಸಿಂಗ್ ಕಾಲೇಜ್ ಇದೇ ವರ್ಷದಿಂದ ಪ್ರಾರಂಭವಾಗಲಿದೆ. ಅದೇ ರೀತಿ ನೂತನ ತಾಲೂಕ ಕಂದಾಯ ಕಟ್ಟಡ ಬುದ್ಧ ಬಸವ ಅಂಬೇಡ್ಕರ್ ಭವನ ಕ್ಡ, ಕುಕನೂರ ತಾಲೂಕಿಗೆ ಎಒಈಅ ಕೋರ್ಟ ಮಂಜೂರಾಗಿದೆ. ತಾಲೂಕ ಆಸ್ಪತ್ರೆ ಸಹ ಜಾರಿಯಾಗ್ಗಿದ್ದು ಈ ಎಲ್ಲಾ ಕೆಲಸಗಳು ಕರ್ನಾಟಕ ಸರ್ಕಾರದಿಂದ ಆಗಿರುವುದು ಹೆಮ್ಮೆಯ ಕೆಲಸ ಎಂದರು.

ತಹಶೀಲ್ದಾರ ಹೆಚ್ ಪ್ರಾಣೇಶ್, ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ್ ಪಾಟೀಲ್, ಪಟ್ಟಣ ಪಂಚಾಯತ್ ಮುಖ್ಯ ಅಧಿಕಾರಿ ರವೀಂದ್ರ ಡಿ ಬಾಗಲಕೋಟೆ, ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಶಿವಶಂಕರ ಕರ್ಡ್ಕರ್‌ಕಲ್ಲ್, ಸಿಡಿಪಿಓ ಬೆಟ್ಟದೇಶ್ ಮಳೆಕೊಪ್ಪ, ಸಂಗಮೇಶ್ ಗುತ್ತಿ, ಸುಧೀರ್ ಕೊರ್ಲಹಳ್ಳಿ, ಹನುಮಂತಗೌಡ ಚಂಡೂರ್, ನಾರಾಯಣಪ್ಪ ಹರಪನಹಳ್ಳಿ, ರೈಮಾನ್ ಸಾಬ್ ಮಕಪ್ಪನವರ, ಸಿರಾಜ್ ಕರ್ಮುಡಿ, ಗಗನ್ ನೋಟಗಾರ, ಮಂಜು ಯಡಿಯಾಪುರ, ಅನುಷ್ಠಾನ ಇಲಾಖೆ ಅಧಿಕಾರಿಗಳು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರು, ಸದಸ್ಯರು ಹಾಜರಿದ್ದರು.

# ಸಚಿವ ರಹೀಂ ಖಾನ್ ಅವರಿಂದ ಇಂದಿರಾ ಕ್ಯಾಂಟೀನ್ ವೀಕ್ಷಣೆ:

## ಬೇಡಿಕೆಯಂತೆ ಪ್ರತಿ ದಿನ 1,000 ಪ್ರಮಾಣದಲ್ಲಿ ಉಪಹಾರ,ಊಟ ನೀಡಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.28: ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಂ ಖಾನ್ ಅವರು ಬುಧವಾರ ಇಲ್ಲಿನ ವಾರ್ಡ್ ನಂ.46 ವ್ಯಾಪ್ತಿಗೆ ಬರುವ ಜಿಮ್ಸ್ ಆಸ್ಪತ್ರೆ ಆವರಣದಲ್ಲಿರುವ ಇಂದಿರಾ ಕ್ಯಾಂಟೀನ್ ಗೆ ಭೇಟಿ ನೀಡಿದ ಅವರು, ಸಾರ್ವಜನಿಕರ ಬೇಡಿಕೆಯಂತೆ ಪ್ರತಿ ದಿನ 1,000 ಪ್ರಮಾಣದಲ್ಲಿ ಉಪಹಾರ, ಊಟ ಪೂರೈಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಜಿಲ್ಲಾ ಆಸ್ಪತ್ರೆ ಸ್ಥಳ ಇದಾಗಿದ್ದರಿಂದ ಸಹಜವಾಗಿಯೇ ಜಿಲ್ಲೆಯ ತಾಲೂಕಾ ಪ್ರದೇಶದಿಂದ ರೋಗಿಗಳು ಮತ್ತು ಅವರ ಸಂಬಂಧಿಕರ ಹೆಚ್ಚಿನ ಓಡಾಟ ಇರುವುದರಿಂದ ಬೇಡಿಕೆಯಂತೆ 500 ರಿಂದ 1,000 ಕ್ಕೆ ಪ್ರಮಾಣ ಹೆಚ್ಚಿಸಲು ಸೂಚಿಸಲಾಗಿದೆ ಎಂದರು.

ಕಳೆದ ಬಾರಿ ನಮ್ಮ ಸರ್ಕಾರದ ಅವಧಿಯಲ್ಲಿ ರಾಜ್ಯದಾದ್ಯಂತ 350 ಇಂದಿರಾ ಕ್ಯಾಂಟೀನ್ ತೆರೆಯಲಾಗಿತ್ತು. ಈ ವರ್ಷ 184 ಹೊಸದಾಗಿ ತೆರೆಯಲು ನಿರ್ಧರಿಸಿದೆ. ಬಡವರು, ಕೂಲಿ ಕಾರ್ಮಿಕರು, ಆಟೋ ಚಾಲಕರು, ಬೀದಿ ಬದಿ ವ್ಯಾಪಾರಿಳಿಗೆ ಕಡಿಮೆ ಮೊತ್ತದಲ್ಲಿ ಉಪಹಾರ, ಊಟ ಪೂರೈಸುವ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಇದಾಗಿದೆ ಎಂದರು.

ತಿಂಡಿ ಸವಿದ ಸಚಿವರು: ಕ್ಯಾಂಟೀನ್ ಭೇಟಿ ವೇಳೆಯಲ್ಲಿ ಮಾಸ್ಟರ್ ಕಿಚನ್ ರೂಂ ಸಹ ವೀಕ್ಷಿಸಿದ ಸಚಿವ ರಹೀಂ ಖಾನ್ ಅವರು ಚಪಾತಿ, ಮೊಸರನ್ನ ಸವಿದು ಉಪಹಾರದ ಗುಣಮಟ್ಟ ಪರಿಶೀಲಿಸಿದರು. ಕ್ಯಾಂಟೀನ್ ನಲ್ಲಿ ಪ್ರತಿ ದಿನ ಬೆಳಿಗ್ಗೆ, ಮಧ್ಯಾಹ್ನ, ರಾತ್ರಿ ನೀಡಲಾಗುವ ಉಪಹಾರ/ ಊಟದ ಬಗ್ಗೆ ಮೆನು ಅಳವಡಿಸಬೇಕು ಮತ್ತು ಬಡವರಿಗೆ ಗುಣಟ್ಟದ ಆಹಾರ ಪೂರೈಸಬೇಕು, ಸ್ವಚ್ಛತೆ ಕಾಪಾಡಬೇಕು ಎಂದು ಗುತ್ತಿಗೆದಾರರಿಗೆ ಸೂಚಿಸಿದರು.

ವಿಧಾನ ಪರಿಷತ್ ಶಾಸಕ ತಿಪ್ಪಣ್ಣಪ್ಪ ಕಮಕನೂರ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಉಪ ಆಯುಕ್ತ ಆರ್.ಪಿ.ಜಾಧವ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನಾವರ ದೌಲ, ಪರಿಸರ ಅಭಿಯಂತ ಅಭಯಕುಮಾರ ಸೇರಿದಂತೆ ಇನ್ನಿತರ ಅಧಿಕಾರಿಗಳಿದ್ದರು.

# ಶಾಲೆ, ಶಿಕ್ಷಣ ಸಂಸ್ಥೆಗಳ ಏಳಿಗೆಯಲ್ಲಿ ಶಿಕ್ಷಕರ ಪಾತ್ರ ಹಿರಿದು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.28: ಶಾಲೆ, ಕಾಲೇಜು ಸೇರಿದಂತೆ ಶಿಕ್ಷಣ ಸಂಸ್ಥೆಗಳ ಸಮಗ್ರ ಅಭಿವೃದ್ಧಿಯಲ್ಲಿ ಶಿಕ್ಷಕರ, ಉಪನ್ಯಾಸಕರ ಪಾತ್ರ ಅಗಾಧ ಎಂದು ಕಾಸ್ ಸಂಸ್ಥೆಯ ಅಧ್ಯಕ್ಷ ಕೆ. ಸಿದ್ದಪ್ಪ ಹೇಳಿದರು.ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಚಯದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ನಡೆದ ಶಾಲಾ ಸಮಗ್ರಅಭಿವೃದ್ಧಿ ಮತ್ತು ಗುಣಮಟ್ಟದ ಶಿಕ್ಷಣ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರು ಶೈಕ್ಷಣಿಕ ಕಾರ್ಯ ಚಟುವಟಿಕೆಗಳ ಬೆನ್ನೆಲುಬು ಆಗಿದ್ದು, ರಾಷ್ಟ್ರದ ಗುಣಾತ್ಮಕ ಪ್ರಗತಿ ಅವರ ಕಾರ್ಯ ಚಟುವಟಿಕೆಗಳ ಮೇಲೆ ಅವಲಂಬಿತವಾಗಿದೆ.ಶೈಕ್ಷಣಿಕಕ್ಷೇತ್ರದಲ್ಲಿ ಎದುರಾಗುವ ಎಲ್ಲಾ ಸಮಸ್ಯೆಗಳಿಗೆ ಧನಾತ್ಮಕವಾಗಿ ಯೋಚಿಸುವ ಮೂಲಕ ಪರಿಹಾರ ಕಂಡುಕೊಂಡು ಶಾಲೆಯನ್ನು ಸಾಧನೆಯ ಕೇಂದ್ರವಾಗಿ ರೂಪಿಸಬೇಕು ಎಂದು ತಿಳಿಸಿದರು.

ಕಾಸ್ ಸಂಸ್ಥೆಯ ಮುಕ್ತಾ ಕಾಗಲಿ ಮಾತನಾಡಿ, ಶಿಕ್ಷಕರು ಪೋಷಕರ ಮತ್ತು ಸಮುದಾಯದ ಸಹಕಾರ ಪಡೆದುಕೊಂಡು ವಿದ್ಯಾರ್ಥಿಗಳ ಸರ್ವತೋಮುಖ ಪ್ರಗತಿಗೆ ಅವಿರತವಾಗಿ ಶ್ರಮಿಸುವ ಮೂಲಕ ಸಮಾಜಕ್ಕೆ ಬಹುದೊಡ್ಡ ಕೊಡುಗೆ ನೀಡಬೇಕು ಎಂದು ಹೇಳಿದರು.

ಕಾಸ್ ಸಂಸ್ಥೆಯ ಕಾರ್ಯದರ್ಶಿ ಆರ್. ಶಂಕರ ಮಾತನಾಡಿ, ಶಿಕ್ಷಕರು ಗಣಿತ, ವಿಜ್ಞಾನ, ಸಮಾಜ ವಿಜ್ಞಾನದ ವಿಷಯಗಳನ್ನು ಪ್ರಯೋಗಾತ್ಮಕವಾಗಿ, ಗುಂಪು ಚರ್ಚೆ, ತಾರ್ಕಿಕ ವಿಮರ್ಶೆ ಮೂಲಕ ಕಲಿಸಿದರೆ ಈ ವಿಷಯಗಳ ಜ್ಞಾನ ವಿದ್ಯಾರ್ಥಿಗಳಲ್ಲಿ ಜೀವನ ಪರ್ಯಂತ ಉಳಿಯಲು ಸಾಧ್ಯ ಎಂದು ತಿಳಿಸಿದರು.

ಶಾಲೆಗಳು ರಾಷ್ಟ್ರದ ಉಜ್ವಲ ಭವಿಷ್ಯ ರೂಪಿಸುವ ಕೇಂದ್ರಗಳಾಗಿದ್ದು, ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಾತ್ಮಕ, ಸಂಸ್ಕಾರ ಭರಿತ ಶಿಕ್ಷಣ ಧಾರೆ ಎರೆಯಬೇಕು.

–ಬಸವಲಿಂಗ ಪಟ್ಟದ್ದೇವರು, ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ

ರೇಮಠ ಸಂಸ್ಥಾನ ವಿದ್ಯಾಪೀಠದ ಸಂಸ್ಥಾಪಕ ಅಧ್ಯಕ್ಷ ಬಸವಲಿಂಗ ಪಟ್ಟದೇವರು ಮಾತನಾಡಿದರು.

ಹಿರೇಮಠದ

ಪೀಠಾಧಿಪತಿ ಗುರುಬಸವಪಟ್ಟದೇವರು, ಕಾರ್ಯದರ್ಶಿ ಮಹಾಲಿಂಗಸ್ವಾಮೀಜಿ, ಅನುಭವ ಮಂಟಪದ ಸಂಚಾಲಕ ಶಿವಾನಂದ ಸ್ವಾಮೀಜಿ, ಬಸವಲಿಂಗ ಸ್ವಾಮೀಜಿ, ವಿವೇಕಾನಂದ ಜಾಲಿ, ಸಂತೋಷಕುಮಾರ ಇದ್ದರು.

ಪ್ರಾಚಾರ್ಯ ಬಸವರಾಜ ಮೊಳಕೀರೆ ಪ್ರಾಸ್ತಾವಿಕ ಮಾತನಾಡಿದರು. ಮುಖ್ಯಶಿಕ್ಷಕಿ ರೇಖಾ ಪಿ. ಎಂ. ಪ್ರಾರ್ಥನೆ ಗೀತೆ ಹಾಡಿದರು.ಲಕ್ಷ್ಮಣ ಮೇತ್ರೆ ನಿರೂಪಿಸಿದರು. ಬಾಲಾಜಿ ವಲ್ಲೂರೆ ವಂದಿಸಿದರು.

# ಶಶಿ ತರೂರ್ ಬಿಜೆಪಿಯ 'ಸೂಪರ್ ವಕ್ತಾರ' : ಕಾಂಗ್ರೆಸ್ ಕಿಡಿ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.28: ಕಾಂಗ್ರೆಸ್ ನಾಯಕ ಉದಿತ್ ರಾಜ್ ಅವರು ಬುಧವಾರ ತಮ್ಮ ಪಕ್ಷದ ನಾಯಕ ಶಶಿ ತರೂರ್ ಅವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ಅವರನ್ನು "ಬಿಜೆಪಿಯ ಸೂಪರ್ ವಕ್ತಾರ" ಎಂದು ಘೋಷಿಸಬೇಕು ಎಂದು ಕಿಡಿ ಕಾರಿದ್ದಾರೆ.

ಐದು ದೇಶಗಳಿಗೆ ತೆರಳಿರುವ ಸರ್ವಪಕ್ಷ ನಿಯೋಗದ ನೇತೃತ್ವ ವಹಿಸಿರುವ ಕಾಂಗ್ರೆಸ್ ಸಂಸದ ಶಶಿ ತರೂರ್, ಪನಾಮದಲ್ಲಿ ಮಾತನಾಡುತ್ತಾ, 2016 ರಲ್ಲಿ ಭಯೋತ್ಪಾದಕ ನೆಲೆಗಳ ಮೇಲೆ ನಡೆದ ಸರ್ಜಿಕಲ್ ಸ್ಟ್ರೈಕ್ ಸಮಯದಲ್ಲಿ ಭಾರತ ಮೊದಲ ಬಾರಿಗೆ ಗಡಿ ನಿಯಂತ್ರಣ ರೇಖೆಯನ್ನು ಉಲ್ಲಂಘಿಸಿತು ಎಂದು ಹೇಳಿದ್ದಾರೆ.

ಇದು ಕಾಂಗ್ರೆಸ್ ನಾಯಕರನ್ನು ಕೆರಳಿಸಿದೆ.ತರೂರ್ ಅವರ ಹೇಳಿಕೆಯನ್ನು ಟ್ಯಾಗ್ ಮಾಡಿ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ ಉದಿತ್ ರಾಜ್ ಅವರು, "ನನ್ನ ಪ್ರೀತಿಯ ಶಶಿ ತರೂರ್, ಅಯ್ಯೋ! ಭಾರತಕ್ಕೆ ಇಳಿಯುವ ಮೊದಲು ನಿಮ್ಮನ್ನು ವಿದೇಶಾಂಗ ಸಚಿವ ಎಂದು ಘೋಷಿಸಲು ನಾನು ಪ್ರಧಾನಿ ಮೋದಿಯವರ ಮನವೊಲಿಸಬಲ್ಲೆ. ಆದರೆ ಪ್ರಧಾನಿ ಮೋದಿಗಿಂತ ಮೊದಲು, ಭಾರತ ಎಂದಿಗೂ ಎಲ್‌ಒಸಿ ಮತ್ತು ಅಂತರರಾಷ್ಟ್ರೀಯ ಗಡಿಯನ್ನು ದಾಟಿಲ್ಲ ಎಂದು ಹೇಳುವ ಮೂಲಕ ನೀವು ಕಾಂಗ್ರೆಸ್‌ನ ಸುವರ್ಣ ಇತಿಹಾಸವನ್ನು ಅವಮಾನಿಸಿದ್ದೀರಿ" ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ."1965 ರಲ್ಲಿ ಭಾರತೀಯ ಸೇನೆಯು ಪಾಕಿಸ್ತಾನವನ್ನು ಹಲವು ಹಂತಗಳಲ್ಲಿ ಪ್ರವೇಶಿಸಿತು. ಇದು ಲಾಹೋರ್ ವಲಯದಲ್ಲಿ ಪಾಕಿಸ್ತಾನಿಗಳನ್ನು ಸಂಪೂರ್ಣವಾಗಿ ಅಚ್ಚರಿಗೊಳಿಸಿತು. 1971 ರಲ್ಲಿ, ಭಾರತ ಪಾಕಿಸ್ತಾನವನ್ನು ಎರಡು ತುಂಡುಗಳಾಗಿ ಹರಿದು ಹಾಕಿತು ಮತ್ತು ಯುಪಿಎ ಸರ್ಕಾರದ ಅವಧಿಯಲ್ಲಿ ಹಲವಾರು ಸರ್ಜಿಕಲ್ ಸ್ಟ್ರೈಕ್‌ಗಳನ್ನು ಮಾಡಲಾಯಿತು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.